ಸಂಪುಟ : Volume 13 ಸಂಚಿಕೆ : Issue 230 ಪುಟಗಳು : Pages 08 ಬುಧವಾರ 29 ಅಕ್ಟೋಬರ್ 2025 ₹2 PRGINO.120927(RNINO:KARKAN/2011/48371) BDR/054/2026-20274 www.mallammanudi.in mallammanudi@gmail.com 9448604450

ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಬಳ್ಳಾರಿ | ವಿಜಯನಗರ | ಕೊಪ್ಪಳ & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

'ಇರುವೆಗಳು ಸಂಗ್ರಹಿಸಿದ ಕಾಳು , ಜೇನುನೊಣಗಳು ಕೂಡಿಟ್ಟ ಜೇನುತುಪ್ಪ , ಜಿಪುಣನ ಸಂಪತ್ತು ಇವೆಲ್ಲಾ ಸಂಪೂರ್ಣ ನಾಶವಾಗುವವು'

– ಸುಭಾಷಿತ .

2. ಬಂಧಿಸದಿದ್ದರೆ ಸಾಮೂಹಿಕ ಆತ್ಮಹತ್ಯೆ | 8 ಅರಕೇರಾ(ಬಿ)ಗ್ರಾಮದಲ್ಲಿಶಸ್ತ್ರ ಚಿಕಿತ್ಸಾ ಕೋಣೆ | 4 ರಾಜ್ಯಮಟ್ಟದ ವಿವಿಧ ಸ್ಪರ್ಧೆ

# ಹೈಕೋರ್ಟ್ ಮಧ್ಯಂತರ ತಡೆ

## ಸಾರ್ವಜನಿಕ ಸ್ಥಳಗಳಲ್ಲಿ ಖಾಸಗಿ ಸಂಸ್ಥೆಗಳ ಚಟುವಟಿಕೆಗೆ ನಿರ್ಬಂಧ | ರಾಜ್ಯ ಸರ್ಕಾರದ ಆದೇಶಕ್ಕೆ ಹೈ ತಡೆ




ಬೆಂಗಳೂರು, ಅ. 28- ಸಾರ್ವಜನಿಕ ಹಾಗೂ ಸರ್ಕಾರಿ ಸ್ಥಳಗಳಲ್ಲಿ ಸಂಘಸ್ಥಂಸ್ಥೆಗಳು ಯಾವುದೇ ಚಟುವಟಿಕೆಗಳನ್ನು ನಡೆಸಲು ಪೊಲೀಸ್ ಇಲಾಖೆಯ ಪೂರ್ವಾನುಮತಿಕಡ್ಡಾಯಎಂಬ ಸರ್ಕಾರದ ಆದೇಶಕ್ಕೆ ರಾಜ್ಯ ಹೈಕೋರ್ಟ್ ತಡೆ ನೀಡಿದ್ದು, ಸರ್ಕಾರಿ ಆದೇಶದ ಮೂಲಕ ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ನಿರ್ಬಂಧಹೇರಲುಮುಂದಾಗಿದ್ದ ಸರ್ಕಾರಕ್ಕೆಹಿನ್ನಡೆಯಾದಂತಾಗಿದೆ.

ಯಾವುದೇ ಸಂಘಸಂಸ್ಥೆಗಳು ಸರ್ಕಾರಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಚಟುವಟಿಕೆ ನಡೆಸಲು ಹಾಗೂ10ಕ್ಕಿಂತಹೆಚ್ಚುಜನಸೇರಲು ಪೊಲೀಸ್ಇಲಾಖೆಯಪೂರ್ವಾನುಮತಿ ಎಂದುಅಗತ್ಯ ಇಲ್ಲದಿದ್ದರೆಅದನ್ನು ಕಾನೂನುಬಾಹಿರ ಅಕ್ರಮ ಕೂಟ ಎಂದುಪರಿಗಣಿಸಲಾಗುತ್ತದೆಎಂಬ ಸರ್ಕಾರದಆದೇಶಕ್ಕೆರಾಜ್ಯಹೈಕೋರ್ಟ್ ತಡೆ ನೀಡಿದೆ.

ಸರ್ಕಾರ ಆದೇಶ ಪ್ರಶ್ನಿಸಿ, ಹುಬ್ಬಳ್ಳಿಯ ಪುನಶ್ಚೇತನ ಸೇವಾ ಸಂಸ್ಥೆಅಧ್ಯಕ್ಷವಿನಾಯಕ, ವಿಕೇರ್ ಫೌಂಡೇಶನ್ಅಧ್ಯಕ್ಷಗಂಗಾಧರಯ್ಯ, ಧಾರಾವಾಡದರಾಜೀವ್‌ಮಲ್ಹಾರ ಕುಲಕರ್ಣಿ, ಬೆಳಗಾವಿಯಉಮಾ ಸತ್ಯಜಿತ್‌ಚವ್ಹಾಣ್‌ಸಲ್ಲಿಸಿದ್ದರಿಟ್ ಅರ್ಜಿಯ ವಿಚಾರಣೆ ನಡೆಸಿದ ಧಾರಾವಾಡದ ಹೈಕೋರ್ಟ್‌ನ ವಿಭಾಗೀಯ ಪೀಠದ ಏಕಸದಸ್ಯ ಪೀಠದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರು ವಿಚಾರಣೆ ನಡೆಸಿ ಸರ್ಕಾರದ ಆದೇಶಕ್ಕೆ ತಡೆ ನೀಡಿದರು. ಸಾರ್ವಜನಿಕಸ್ಥಳಗಳಲ್ಲಿ ಹಾಗೂಸರ್ಕಾರಿಜಾಗಗಳಲ್ಲಿಆರ್‌ಎಸ್‌ಎಸ್‌ನಚಟುವಟಿಕಗಳಿಗೆಹಾಗೂಪಥ ಸಂಚಲನನಿರ್ಬಂಧಿಸಲುಸರ್ಕಾರ ಸಂಘಸಂಸ್ಥೆಗಳಿಗೆಸರ್ಕಾರಿಜಾಗಗಳಲ್ಲಿ ಚಟುವಟಿಕೆಯನ್ನುನಡೆಸುವುದನ್ನು ನಿರ್ಬಂಧಿಸಿಆದೇಶಹೊರಡಿಸಿತ್ತು. ಈಆದೇಶದಿಂದಆರ್‌ಎಸ್‌ಎಸ್‌ನ ಚಟುವಟಿಕೆಗಳುಪಥಸಂಚಲನವನ್ನು ಸರ್ಕಾರಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ನಡೆಸಲು ಅನುಮತಿ ಕಡ್ಡಾಯವಾಗಿತ್ತು.

2ನೇ ಪುಟನೋಡಿ

## ರಾಜ್ಯದಲ್ಲಿ6 ತಿಂಗಳಲ್ಲಿಕೇವಲ ಶೇ.30ರಷ್ಟುಮಾತ್ರ ಪ್ರಗತಿ

ಬೆಂಗಳೂರು: ನಾಯಕತ್ವ ಬದಲಾವಣೆಯ ತಿಕ್ಕಾಟದಿಂದ ಕರ್ನಾಟಕ ಅಭಿವೃದ್ಧಿಗೆತೊಡಕಾಯ್ತಾ? ರಾಜ್ಯದಅಭಿವೃದ್ಧಿವಿಚಾರದಲ್ಲಿಗಣನೀಯ ಕುಸಿತ ಆಯ್ತಾ ಎಂಬ ಚರ್ಚೆ ಮುನ್ನೆಲೆಗೆ ಬಂದಿದೆ. ಕಳೆದ 6 ತಿಂಗಳ ಅವಧಿಯಲ್ಲಿ ಶೇ.30 ರಷ್ಟು ಮಾತ್ರ ಸರಾಸರಿ ಪ್ರಗತಿಯಾಗಿದೆ. ಅಬ್ಬರಿಸಿ

★ಕಂದಾಯಇಲಾಖೆ(ವಿಪತ್ತು ನಿರ್ವಹಣೆ)-5,780ಕೋಟಿರೂ. (ಶೇ.46.74)
ಸಚಿವರು:ಕೃಷ್ಣಬೈರೇಗೌಡ

★ಜಲಸಂಪನ್ಮೂಲಇಲಾಖೆ -4,496ಕೋಟಿರೂ.(ಶೇ.23.9)
ಸಚಿವರು:ಡಿ.ಕೆ.ಶಿವಕುಮಾರ್

★ವಸತಿಇಲಾಖೆ807ಕೋಟಿ ರೂ. (ಶೇ.18.38)
ಸಚಿವರು:ಜಮೀರ್‌ಅಹ್ಮದ್

ಗ್ರಾಮೀಣಾಭಿವೃದ್ಧಿ-ಪಂಚಾಯತ್ ರಾಜ್ -2,964 ಕೋಟಿ ರೂ. (ಶೇ.11.02)
ಸಚಿವರು:ಪ್ರಿಯಾಂಕ್‌ಖರ್ಗೆ

★ಐಟಿ-ಬಿಟಿ, ವಿಜ್ಞಾನ-ತಂತ್ರಜ್ಞಾನ-117ಕೋಟಿರೂ. (ಶೇ.10.86)
ಸಚಿವರು:ಪ್ರಿಯಾಂಕ್‌ಖರ್ಗೆ

**ಯಾವ ಗ್ಯಾರಂಟಿ ಯೋಜನೆಗೆ ಎಷ್ಟು ಖರ್ಚು?**

ಗೃಹಜ್ಯೋತಿ ಯೋಜನೆ ಹಂಚಿಕೆ ಮೊತ್ತ 26,896 ಕೋಟಿ ರೂ. (ಶೇ.50.29)
ಇಂಧನಸಚಿವ:ಕೆಜೆಜಾರ್ಜ್

★ ಗೃಹಲಕ್ಷ್ಮಿ ಯೋಜನೆ ಹಂಚಿಕೆ ಮೊತ್ತ 34,954 ಕೋಟಿ ರೂ. (ಶೇ.17.43)
ಮಹಿಳಾ ಮಕ್ಕಳ ಕಲ್ಯಾಣ ಇಲಾಖೆ : ಲಕ್ಷ್ಮಿ ಹೆಬ್ಬಾಳ್ಕರ್

★ ಶಕ್ತಿ ಯೋಜನೆ ಹಂಚಿಕೆಮೊತ್ತ7,169ಕೋಟಿ ರೂ. ( ಶೇ.34.88)
ಸಾರಿಗೆ : ರಾಮಲಿಂಗಾರೆಡ್ಡಿ

★ ಅನ್ನಭಾಗ್ಯ ಯೋಜನೆ ಹಂಚಿಕೆಮೊತ್ತ8,274ಕೋಟಿ ರೂ. (ಶೇ.28.23)
ಆಹಾರಕೆ.ಹೆಚ್.ಮುನಿಯಪ್ಪ

ಮಾತನಾಡುವ ಸಚಿವರ ಇಲಾಖೆಯಲ್ಲಿ ಅಭಿವೃದ್ಧಿ ಕುಂಠಿತ ಆಗಿದ್ದು, ಕಂದಾಯ ಇಲಾಖೆ ಹೊರತುಪಡಿಸಿ ಉಳಿದ ಇಲಾಖೆಗಳಲ್ಲಿ ಅಭಿವೃದ್ಧಿಗೆ ಹಿನ್ನಡೆಯಾಗಿದೆ.

2ನೇ ಪುಟನೋಡಿ

## ಉತ್ತಮ ಸಾಧನೆಗೆ ಕ್ರೀಡೆ ಸಹಕಾರಿ



ಮಲ್ಲಮ್ಮನುಡಿ ವಾರ್ತೆ

ಬಸವಕಲ್ಯಾಣ : ಇಂದಿನ ಸ್ಪರ್ಧಾತ್ಮಕಯುಗದಲ್ಲಿಉತ್ತಮ ಸಾಧನೆ ಮಾಡಬೇಕಾದರೆ ಕ್ರೀಡಾ ಕ್ಷೇತ್ರ ಸಹಕಾರಿಯಾಗಿದೆ ಎಂದು ಮಾಜಿಸಚಿವರಾಜಶೇಖರಪಾಟೀಲ್ ಹೇಳಿದರು. ತಾಲೂಕಿನರಾಜೇಶ್ವರ ಗ್ರಾಮದ ಹೊರ ವಲಯದಲ್ಲಿ ರಾಯಲ್‌ಕ್ರಿಕೆಟ್‌ಕ್ಲಬ್‌ವತಿಯಿಂದ ಆಯೋಜಿಸಿದ್ದಕ್ರಿಕೆಟ್‌ಟೂರ್ನಮೆಂಟ್ ವಿಜೇತ ತಂಡಕ್ಕೆ ಟ್ರೋಫಿ ಹಾಗೂ ಸದಾ ಹೇಳಿಕೆ ನೀಡಿ ಸುದ್ದಿ ಯಾಗುತ್ತಿರುವ ಸಚಿವ ಪ್ರಿಯಾಂಕ್ ಖರ್ಗೆ ನಿಭಾಯಿಸುತ್ತಿರುವಇಲಾಖೆಗಳು ಅಭಿವೃದ್ಧಿಯಲ್ಲಿ ಹಿನ್ನಡೆ ಅನುಭವಿಸಿದೆ. ಗ್ರಾಮೀಣಾಭಿವೃದ್ಧಿ,

2ನೇ ಪುಟನೋಡಿ

## ಮಹಾನಗರ ಪಾಲಿಕೆಗೆ ವ್ಯಾಪ್ತಿಗೆ ಸೇರದ ಗ್ರಾಮಸ್ಥರು ಅತಂತ್ರ

**ಬೀದರ್ ಮಹಾನಗರ ಪಾಲಿಕೆಗೆ ಸೇರ್ಪಡೆಯಾದ ಆರು ಗ್ರಾ.ಪಂ. ವ್ಯಾಪ್ತಿಯ 16 ಗ್ರಾಮಗಳು**

| ಗ್ರಾಮ ಪಂಚಾಯಿತಿ ಹೆಸರು | ಗ್ರಾಮಗಳು |
|---|---|
| ಅಷ್ಟೂರ | ಓಡವಾಡ, ತಾಜಲಾಪೂರ |
| ಅಮಲಾಪೂರ | ಅಮಲಾಪೂರ, ಗೋರನಳ್ಳಿ (ಬಿ) |
| ಅಲಿಯಾಬಾದ್ | ಅಲಿಯಾಬಾದ್, ಚೋಂಡಿ, ಚೌಳಿ |
| ಗಾದಗಿ | ಶಾಮರಾಜಪೂರ, ಸಿಪ್ಪಲಗೇರಾ, ಮಾಮನಕೇರಿ, ಕಬೀರವಾಡ |
| ಕೊಳಾರ (ಕೆ) | ಕೊಳಾರ(ಕೆ), ನಿಜಾಮಪೂರ, ಹಜ್ಜರಗಿ,ಕಮಲಪುರ |
| ಮರಕಲ್ | ಚಿಕ್ಕಪೇಟೆ |

ಬೀದರ್. ಅ. 28 : ಬೀದರ್ ಮಹಾನಗರ ಪಾಲಿಕೆ ವ್ಯಾಪ್ತಿಗೆ ಸೇರಿದ ಕೆಲವು ಗ್ರಾಮ ಪಂಚಾಯಿತಿಗಳ ಗ್ರಾಮಗಳು ಇದುವರೆಗೆ ಪಾಲಿಕೆಯಾಗಲಿ, ಹೊಸ ಪಂಚಾಯಿತಿ ವ್ಯಾಪ್ತಿಗೆ ಸೇರದ ಕಾರಣ ಆ ಗ್ರಾಮಸ್ಥರು ಅತಂತ್ರರಾಗಿದ್ದಾರೆ. ಬಹಳ ತೊಂದರೆ ಅನುಭವಿಸುತ್ತಿದ್ದಾರೆ. ಬೀದರ್ ತಾಲ್ಲೂಕಿನ ಆರು ಗ್ರಾಮ ಪಂಚಾಯಿತಿಗಳ 16 ಗ್ರಾಮಗಳು ಪಾಲಿಕೆ ವ್ಯಾಪ್ತಿಗೆ ಸೇರಿವೆ. ಆದರೆ, ಆ ಪಂಚಾಯಿತಿಗಳಕೆಲಗ್ರಾಮಗಳನ್ನು ಇದುವರೆಗೆಸಮೀಪದಪಂಚಾಯಿತಿಗಳಿಗೆ ಸೇರ್ಪಡೆಮಾಡಿಲ್ಲ. ಇದರಿಂದ ಗ್ರಾಮಸ್ಥರ ಯಾವುದೇ ಕೆಲಸಗಳು ಆಗುತ್ತಿಲ್ಲ ಎಂದು ಬೇಸರ ತೋಡಿಕೊಂಡಿದ್ದಾರೆ.

2ನೇ ಪುಟನೋಡಿ

## ಭಾಲ್ಕಿ ರಸ್ತೆಗಳು ಕಲ್ಯಾಣಕ್ಕೆ ಮಾದರಿ




ಮಲ್ಲಮ್ಮನುಡಿ ವಾರ್ತೆ

ಭಾಲ್ಕಿ:ಅ.28:ತಾಲೂಕಿನಲ್ಲಿಕಳೆದೆರಡು ದಶಕಗಳಿಂದನಿರ್ಮಾಣವಾಗುತ್ತಿರುವ ರಸ್ತೆಗಳುಕಲ್ಯಾಣಕರ್ನಾಟಕಭಾಗಕ್ಕೆ ಮಾದರಿಯಾಗಿವೆ ಎಂದು ಜಿಲ್ಲಾ

2ನೇ ಪುಟನೋಡಿ

## ಶಾಂತಿ ಸಭೆ: ಸಂಘಟನೆಗಳ ಮಧ್ಯೆ ಮೂಡದ ಒಮ್ಮತ



ಕಲಬುರಗಿ:ಅ.28: ಚಿತ್ತಾಪುರ ಆರ್‌ಎಸ್‌ಎಸ್ ಪಥಸಂಚಲನ ಪ್ರಕರಣ ಸಂಬಂಧ ಕಲಬುರಗಿ ಜಿಲ್ಲಾಡಳಿತ ನಡೆಸಿದ ಶಾಂತಿ ಸಭೆಯಲ್ಲಿಅಶಾಂತಿ ಮೂಡಿದೆ.

ಬೆಳಗ್ಗೆ 11:30ಕ್ಕೆ ಜಿಲ್ಲಾಧಿಕಾರಿ ಫೌಜೀಯಾತರನ್ನುಮ್‌ನೇತೃತ್ವದಲ್ಲಿ ಆರ್‌ಎಸ್‌ಎಸ್, ಭೀಮ್ ಆರ್ಮಿ ಸೇರಿದಂತೆ10ಸಂಘಟನೆಗಳಪ್ರತಿನಿಧಿಗಳು ಸಭೆಯಲ್ಲಿ ಭಾಗಿಯಾಗಿದ್ದರು. ಮೊದಲಿಗೆ ಡಿಸಿಗೆ ಲಿಖಿತ ಹೇಳಿಕೆ ಸಲ್ಲಿಸಿದಸಂಘಟನೆಗಳಿಗೆಸಭೆಯಲ್ಲಿ ಅನಿಸಿಕೆಹೇಳಲುಸೂಚಿಸಲಾಯಿತು.

ಈ ವೇಳೆ ಆರ್‌ಎಸ್‌ಎಸ್ ಲಾಠಿ ಬಿಟ್ಟು ರಾಷ್ಟ್ರಧ್ವಜ ಹಿಡಿದು ಪಥಸಂಚಲನಮಾಡುವಂತೆದಲಿತ ಸಂಘಟನೆಗಳು ಪಟ್ಟು ಹಿಡಿದವು. ಇದಕ್ಕೆಲಾಠಿಹಿಡಿದುಪಥಸಂಚಲನ ಮಾಡುವುದಾಗಿ ಆರ್‌ಎಸ್‌ಎಸ್ ಪರವಾಗಿ ಬಂದ ಬಿಜೆಪಿ ಮು

2ನೇ ಪುಟನೋಡಿ

## ಇಂದು ರಫೇಲ್‌ನಲ್ಲಿ ಹಾರಲಿದ್ದಾರೆ ರಾಷ್ಟ್ರಪತಿ ಮುರ್ಮು

ಚಂಡೀಗಢ:ಅ.28: ಭಾರತೀಯ ಸಶಸ್ತ್ರ ಪಡೆಗಳ ಸುಪ್ರೀಂ ಕಮಾಂಡರ್ ಆಗಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಬುಧವಾರ (ಅ.29) ರಫೇಲ್



ಫೈಟರ್ ಜೆಟ್‌ನಲ್ಲಿ ಹಾರಾಟ ನಡೆಸಲಿದ್ದಾರೆ. 67 ವರ್ಷದ ದ್ರೌಪದಿ ಮುರ್ಮು ಬುಧವಾರ (ಅ.29) ಹರಿಯಾಣದ ಅಂಬಾಲಾ ಏರ್‌ಬೇಸ್‌ಗೆ ತೆರಳಿ ಅಲ್ಲಿ ರಫೇಲ್ ಫೈಟರ್ ಜೆಟ್‌ನಲ್ಲಿ ಹಾರಾಟ ನಡೆಸಲಿದ್ದಾರೆ. ಈ ಮೂಲಕ ಮೊದಲ ಬಾರಿಗೆ ರಫೇಲ್ ಏರಿದ ರಾಷ್ಟ್ರಪತಿ ಎನ್ನುವ ಹೆಗ್ಗಳಿಕೆಗೆ ಪಾತ್ರರಾಗಲಿದ್ದಾರೆ. ಈ ಮೊದಲು 2023ರ ಏಪ್ರಿಲ್ 8ರಂದು ಅಸ್ಸಾಂನ ತೇಜ್‌ಪುರ ಏರ್‌ಬೇಸ್‌ನಲ್ಲಿ ಸುಖೋಯ್ -30 ಯುದ್ಧ ವಿಮಾನದಲ್ಲಿ ಹಾರಾಟ ನಡೆಸಿದ್ದರು. ಇದಕ್ಕೂ ಮುನ್ನ ಭಾರತದ ಮಾಜಿ ರಾಷ್ಟ್ರಪತಿಗಳಾದ ಶ್ರೀಮತಿ ಪ್ರತಿಭಾ ಪಾಟೀಲ್ ಮತ್ತು ಅಬ್ದುಲ್ ಕಲಾಂ ಅಬ್ದುಲ್ ಅವರು ಸುಖೋಯ್-30 ಫೈಟರ್ ಜೆಟ್‌ಗಳಲ್ಲಿ ಹಾರಾಟನಡೆಸಿದ್ದರು. ಆಪರೇಷನ್ ಸಿಂಧೂರ'ದವೇಳೆಅಂಬಾಲಾಏರ್‌ಬೇಸ್‌ನಿಂದ ಟೇಕಾಫ್ ಆದನಮ್ಮ ಫೈಟರ್ ಜೆಟ್‌ಗಳು ಪಾಕಿಸ್ತಾನದಲ್ಲಿರುವ ಉಗ್ರರನೆಲೆಗಳ ಮೇಲೆ ಏರ್‌ಸ್ಟ್ರೈಕ್ ಮಾಡಿದ್ದವು.

## ಕೇಂದ್ರ ಸರ್ಕಾರಿ ನೌಕರರಿಗೆ ಶುಭ ಸುದ್ದಿ: 8ನೇ ವೇತನ ಆಯೋಗ ರಚನೆ

ನವದೆಹಲಿ:ಅ.28:ಕೇಂದ್ರ ಸರ್ಕಾರ ಮಂಗಳವಾರ ತನ್ನ ನೌಕರರಿಗೆಶುಭಸುದ್ದಿನೀಡಿದ್ದು, ಬಹುನಿರೀಕ್ಷಿತ8ನೇಕೇಂದ್ರ ವೇತನಆಯೋಗ(ಸಿಪಿಸಿ) ರಚನೆಗೆಸಚಿವಸಂಪುಟಅನುಮೋದನೆ ನೀಡಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಇಂದು ನಡೆದಸಚಿವಸಂಪುಟಸಭೆಯುಸುಪ್ರೀಂಕೋರ್ಟ್‌ನಮಾಜಿ ನ್ಯಾಯಾಧೀಶೆ ರಂಜನಾ ಪ್ರಕಾಶ್ ಅವರ ನೇತೃತ್ವದಲ್ಲಿ 8ನೇ ವೇತನ ಆಯೋಗ ರಚನೆಗೆ ಅನುಮೋದನೆ ನೀಡಿದೆ. 8ನೇ ವೇತನ ಆಯೋಗಕ್ಕೆ ನ್ಯಾಯಮೂರ್ತಿ ರಂಜನಾ ಪ್ರಕಾಶ್ ದೇಸಾಯಿ ಅಧ್ಯಕ್ಷರಾಗಿ, ಐಐಎಂ ಬೆಂಗಳೂರು ಪ್ರೊಫೆಸರ್ ಪುಲಕ್ ಘೋಷ್ ಅವರುಸದಸ್ಯರಾಗಿಮತ್ತು ಪೆಟ್ರೋಲಿಯಂ ಹಾಗೂ ನೈಸರ್ಗಿಕ ಅನಿಲ ಸಚಿವಾಲಯದ ಕಾರ್ಯದರ್ಶಿ ಪಂಕಜ್ ಜೈನ್ ಅವರು ಸದಸ್ಯ-ಕಾರ್ಯದರ್ಶಿಯಾಗಿ ನೇಮಕಗೊಂಡಿದ್ದಾರೆ. ಈ ಆಯೋಗವು ರಚನೆಯಾದ 18 ತಿಂಗಳೊಳಗೆ ತನ್ನ ವರದಿಯನ್ನು ಸಲ್ಲಿಸಬೇಕು ಎಂದು ಗಡುವು ನೀಡಲಾಗಿದ್ದು, ಆಯೋಗದ ಶಿಫಾರಸು ಆಧರಿಸಿ ಕೇಂದ್ರ ಸರ್ಕಾರ ಸುಮಾರು 50 ಲಕ್ಷ ಸರ್ಕಾರಿ ನೌಕರರು ಮತ್ತು 69 ಲಕ್ಷ ಪಿಂಚಣಿದಾರರ ವೇತನ ಮತ್ತು ಭತ್ಯೆಗಳನ್ನು ಪರಿಷ್ಕರಿಸಲಿದೆ.

ಕೇಂದ್ರ ಸಚಿವಸಂಪುಟ ಸಭೆಯ ನಂತರ ಮಾಧ್ಯಮಗಳಿಗೆ ಮಾಹಿತಿ ನೀಡಿದ ಮಾಹಿತಿ ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಅವರು, 8ನೇಕೇಂದ್ರ ವೇತನಆಯೋಗರಚನೆಮಾಡಲಾಗಿದೆ. ಈಆಯೋಗವುಒಬ್ಬಅಧ್ಯಕ್ಷರು, ಒಬ್ಬಸದಸ್ಯರನ್ನು (ಅರೆಕಾಲಿಕ) ಮತ್ತು ಒಬ್ಬ ಸದಸ್ಯ-ಕಾರ್ಯದರ್ಶಿಯನ್ನು ಒಳಗೊಂಡಿರುತ್ತದೆ ಎಂದರು. ಆಯೋಗ ರಚನೆಯಾದ ದಿನಾಂಕದಿಂದ 18 ತಿಂಗಳೊಳಗೆ ತನ್ನ ಶಿಫಾರಸುಗಳನ್ನು ಮಾಡುತ್ತದೆ ಮತ್ತು ಅಗತ್ಯವಿದ್ದರೆ, ನಿರ್ದಿಷ್ಟಶಿಫಾರಸುಗಳುಅಂತಿಮಗೊಂಡಾಗ, ಮಧ್ಯಂತರ ವರದಿಗಳನ್ನು ಸಲ್ಲಿಸುವ ಅವಕಾಶವೂ ಇದೆ ಇದೆ ಸಚಿವರು ತಿಳಿಸಿದರು.

## ಕೇಂದ್ರ ಚುನಾವಣಾ ಆಯುಕ್ತರು ರಾಜಕೀಯ ಪುಢಾರಿ: ಯತೀಂದ್ರ ಸಿದ್ದರಾಮಯ್ಯ

ಮಲ್ಲಮ್ಮನುಡಿ ವಾರ್ತೆ

ಮೈಸೂರು:ಅ.28: ಉತ್ತರಾಧಿಕಾರಿ ಹೇಳಿಕೆ ನೀಡಿ ಸಂಕಷ್ಟಕ್ಕೆ ಸಿಲುಕಿದ್ದ ಯತೀಂದ್ರ ಸಿದ್ದರಾಮಯ್ಯ ಈಗ ಮತ್ತೊಂದು ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.




ವೋಟ್ ಚೋರಿ ಸಹಿ ಸಂಗ್ರಹ ಸಭೆಯಲ್ಲಿ ಮತಗಳ್ಳತನ ವಿರುದ್ಧ ಮಾತನಾಡುವಾಗ ಕೇಂದ್ರ ಚುನಾವಣಾ ಆಯುಕ್ತರನ್ನು ರಾಜಕೀಯ ಪುಢಾರಿ ಎಂದು ಹೊಸ ವಿವಾದವನ್ನು ಮೈಮೇಲೆ ಎಳೆದುಕೊಂಡಿದ್ದಾರೆ. ವರುಣಾ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ನಡೆದ ವೋಟ್ ಚೋರಿ ಸಹಿ ಸಂಗ್ರಹ ಸಭೆಯಲ್ಲಿ ಈ ವಿವಾದಾತ್ಮಕ ಭಾಷಣ ಮಾಡಿದ್ದಾರೆ. ಕೇಂದ್ರ ಚುನಾವಣಾ ಆಯುಕ್ತ ಒಬ್ಬ ರಾಜಕೀಯ ಪುಢಾರಿ. ಕೇಂದ್ರ ಚುನಾವಣಾ

2ನೇ ಪುಟನೋಡಿ

## ಕ್ಯಾಪ್ ಬದಲಾದಂತೆ ವೃತ್ತಿಯಲ್ಲಿ ಹೆಚ್ಚು ದಕ್ಷತೆಯಿಂದ ಕಾರ್ಯ ನಿರ್ವಹಿಸಲು ಸಿಎಂ ಕರೆ

ಬೆಂಗಳೂರು, ಅ 28:ಬರೀ ಕ್ಯಾಪ್ ಬದಲಾವಣೆಯಾದರೆಸಾಲದು, ಇನ್ನೂಹೆಚ್ಚು ದಕ್ಷತೆಯಿಂದಕಾರ್ಯನಿರ್ವಹಿಸಬೇಕು ಎಂದುಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪೊಲೀಸ್ ಸಿಬ್ಬಂದಿಗಳಿಗೆ ಕರೆ ನೀಡಿದರು. ಅವರು ಇಂದು ಗೃಹ ಇಲಾಖೆಯುವಿಧಾನಸೌಧದಬ್ಯಾಂಕ್ವೆಟ್ ಹಾಲ್‌ನಲ್ಲಿ ಏರ್ಪಡಿಸಿದ್ದ ಪೊಲೀಸ್ ಸಿಬ್ಬಂದಿಗಳಿಗೆಪೀಕ್-ಕ್ಯಾಪ್‌ಪರಿಚಯ ಮತ್ತು ವಿತರಣೆ ಮತ್ತು ಮಾದಕ ದ್ರವ್ಯ ವಿರೋಧಿಕಾರ್ಯಪಡೆಉದ್ಘಾಟನೆಹಾಗೂ ಸನಿಮ್ಮ ತ್ರೈಕೈಪಿಡಿಯನ್ನು ಬಿಡುಗಡೆಮಾಡಿ ಮಾತನಾಡುತ್ತಾ, ಸುಮಾರು ಎಪ್ಪತ್ತು ವರ್ಷಗಳಿಂದಧರಿಸುತ್ತಿದ್ದಕ್ಯಾಪ್‌ನಿಂದ



ಹಲವಾರುಸಮಸ್ಯೆಗಳಿರುವುದನ್ನುಗೃಹ ಸಚಿವರುತಿಳಿಸಿದಪರಿಣಾಮನಾನೇಈ ಹೊಸಪೀಕ್-ಕ್ಯಾಪ್‌ಅನ್ನುಆಯ್ಕೆಮಾಡಿದೆ. ಬಣ್ಣಬೇರೆ, ಆದರೆಹಿರಿಯಅಧಿಕಾರಿಗಳು ಧರಿಸುವಕ್ಯಾಪ್‌ನಂತೆಯೇಇರುವಈ ಕ್ಯಾಪ್‌ಅನ್ನು ಇನ್ನು ಮುಂದೆನೀವೆಲ್ಲರೂ ಧರಿಸಲಿದ್ದೀರಿ. ಇದು ನಿಮ್ಮಲ್ಲಿ ಇನ್ನೂ ಆತ್ಮಸ್ಥೈರ್ಯವನ್ನು ಹೆಚ್ಚುಮಾಡುತ್ತದೆ ಎಂದರು. ಪೊಲೀಸ್‌ಕಾನ್ಸ್‌ಟೇಬಲ್‌ಗಳು ಬಳಸುತ್ತಿದ್ದಕ್ಯಾಪ್‌ಗೆಪರ್ಯಾಯವಾಗಿ ವಿನ್ಯಾಸ ಮಾಡಿರುವ ಈ ನೀಲಿ ಬಣ್ಣದ ನೂತನಪೀಕ್-ಕ್ಯಾಪ್‌ನಿಂದನೀವೆಲ್ಲರೂ ತುಂಬಾಸುಂದರವಾಗಿಕಾಣುತ್ತಿರುವಿರಿ. ಹಾಗೆಯೇ ಅಪರಾಧಿಗಳೊಂದಿಗೆ ಯಾವುದೇ ರೀತಿಯ ಸಂಬಂಧವನ್ನು ಇಟ್ಟುಕೊಳ್ಳಬಾರದು ಎಂದು ಪೊಲೀಸ್ ಅಧಿಕಾರಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಸೂಚನೆನೀಡಿದರು. ಇದೇಸಂದರ್ಭದಲ್ಲಿ ಉಪಸ್ಥಿತರಿದ್ದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರುಮಾತನಾಡಿ ಒಂದು ಐತಿಹಾಸಿಕತೀರ್ಮಾನಮಾಡಿ, ಪೊಲೀಸ್ ಕಾನ್ಸ್‌ಟೇಬಲ್‌ಗಳಿಗೆ ನೂತನ ಕ್ಯಾಪ್ ಅನ್ನು ನೀಡುವ ಮೂಲಕ ಅವರಿಗೆ ದೊಡ್ಡ ಶಕ್ತಿಯನ್ನು ನೀಡಿರುವುದಕ್ಕೆ ಗೃಹ ಇಲಾಖೆಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಗಡಿಯಲ್ಲಿಸೈನಿಕ, ಗಡಿಯೊಳಗೆ ಆರಕ್ಷಕರುನಮಗೆರಕ್ಷಣೆನೀಡುತ್ತಿದ್ದಾರೆ. ಕಾರ್ಯಕ್ರಮದಲ್ಲಿಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹಮದ್, ಶಾಸಕರಾದ ರಿಜ್ವಾನ್‌ಅರ್ಷದ್, ವಿಧಾನಸಭೆಮುಖ್ಯ ಸಚೇತಕರಾದಅಶೋಕ್‌ಪಟ್ಟಣಸರ್ಕಾರದ ಮುಖ್ಯಕಾರ್ಯದರ್ಶಿಗಳಾದಡಾ. ಶಾಲಿನಿ ರಜನೀಶ್, ಮಹಾನಿರ್ದೇಶಕರುಮತ್ತು ಪೊಲೀಸ್ ಮಹಾ ನಿರೀಕ್ಷಕರಾದ ಡಾ. ಎ.ಎಂ. ಸಲೀಂ, ಗೃಹ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ತುಷಾರ್ ಗಿರಿನಾಥ್, ಪೊಲೀಸ್ ಮಹಾ ನಿರ್ದೇಶಕರುಗಳಾದರಾಮಚಂದ್ರರಾವ್, ಪ್ರಣಬ್ ಮೊಹಂತಿ ಹಾಗೂ ಮತ್ತಿತರ ಹಿರಿಯಅಧಿಕಾರಿಗಳುಉಪಸ್ಥಿತರಿದ್ದರು.

**ಕ್ಲಬ್ ಚೆಸ್ ಚಾಂಪಿಯನ್ಸ್ ಶೋಡೌನ್ ಟೂರ್ನಿ:ಅಮೆರಿಕದ ಗ್ರ್ಯಾಂಡ್ ಮಾಸ್ಟರ್ ಹಿಕಾರು ನಕಮುರಾ ವಿರುದ್ಧ ಗೆಲುವು ಸಾಧಿಸಿದ ಭಾರತದ ಗುಕೇಶ್**

## ಒಂದನೇ ಪುಟದಿಂದ

## ಪುಢಾರಿ: ಯತೀಂದ್ರ ಸಿದ್ದರಾಮಯ್ಯ

ಆಯುಕ್ತ ರಾಜಕೀಯ ಪುಢಾರಿ ರೀತಿ ಹೇಳಿಕೆಗಳನ್ನು ಕೊಡುತ್ತಿದ್ದಾರೆ ಎಂದು ಕಿಡಿಕಾರಿದ್ದಾರೆ.

ಮತಗಳ್ಳತನದ ಬಗ್ಗೆ ರಾಹುಲ್ ಗಾಂಧಿ ಸಾಕ್ಷಿ ಸಮೇತ ದೂರು ಕೊಟ್ಟಿದ್ದಾರೆ. ಆದರೆ ದೂರು ಕೊಟ್ಟವರಮೇಲೆಯೇಚುನಾವಣಾಆಯುಕ್ತರುಮಾತನಾಡುತ್ತಿದ್ದಾರೆ. ಆರೋಪಮಾಡಿರುವವರ ಮೇಲೆಯೇದಾಳಿಮಾಡಿತೇಜೋವಧೆಮಾಡುತ್ತಿದ್ದಾರೆಎಂದುಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಬಗ್ಗೆ ಟೀಕಿಸಿದ್ದಾರೆ.

## ಶೇ.30ರಷ್ಟುಮಾತ್ರ ಪ್ರಗತಿ

ಇಲಾಖೆಯಲ್ಲಿ ಶೇ.11.02 ರಷ್ಟು ಮಾತ್ರ ಪ್ರಗತಿ ಆಗಿದ್ದರೆ ಐಟಿ-ಬಿಟಿ, ವಿಜ್ಞಾನ ತಂತ್ರಜ್ಞಾನ ಇಲಾಖೆಯಲ್ಲಿ ಶೇ. 10.86ರಷ್ಟು ಮಾತ್ರ ಆಗಿದೆ. ವಸತಿ ಸಚಿವ ಜಮೀರ್, ಡಿಸಿಎಂ ಡಿಕೆಶಿ ಇಲಾಖೆಗಳು ಹಿನ್ನಡೆ ಸಾಧಿಸಿವೆ. ಇದರಿಂದಾಗಿನಾಯಕತ್ವದಕುರಿತುಚರ್ಚಿಸುವಸಚಿವರಿಂದಅಭಿವೃದ್ಧಿಯತ್ತ ಹೆಚ್ಚುಗಮನವಿಲ್ಲವೋ? ಸರ್ಕಾರದ ಬಳಿ ಹಣವೇ ಇಲ್ಲವೋ? ಪವರ್‌ಶೇರ್ ಬಗ್ಗೆ ಹೈಕಮಾಂಡ್ ಮಂತ್ರ ಪಠಣ ಮಾಡುತ್ತಿರುವ ಸಚಿವರಿಂದ ಅಭಿವೃದ್ಧಿ ಹಿನ್ನಡೆ ಆಗುತ್ತಿದೆಯೋ ಎಂಬ ಪ್ರಶ್ನೆಗೆ ಅವರೇ ಉತ್ತರ ನೀಡಬೇಕಿದೆ.

## ಉತ್ತಮ ಸಾಧನೆಗೆ ಕ್ರೀಡೆ ಸಹಕಾರಿ

ಬಹುಮಾನ ವಿತರಣೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಜೀವನದಲ್ಲಿ ದೈಹಿಕ ಆರೋಗ್ಯ ಬಹಳ ಮುಖ್ಯ. ಆರೋಗ್ಯವೇ ಭಾಗ್ಯ ಎಂಬುದನ್ನು ಮರೆಯಬಾರದು. ವಯಸ್ಸಾ ದಂತೆ ಒತ್ತಡದ ಕಾರಣಕ್ಕೆ ನಾನಾ ಕಾಯಿಲೆ ಬರುತ್ತವೆ. ಆರೋಗ್ಯ ಕಾಪಾಡಿಕೊಳ್ಳಲು ದಿನನಿತ್ಯ ಯೋಗ, ವ್ಯಾಯಾಮ ಮಾಡಬೇಕು. ಕ್ರೀಡೆಯು ಜೀವನದ ಭಾಗವಾಗಬೇಕು. ಕ್ರಿ?ಡಾ ಚಟುವಟಿಕೆಗಳಿಂದ ಮಾನಸಿಕ ನೆಮ್ಮದಿಸಿಗುತ್ತದೆಎಂದರು.ಕ್ರೀಡಾಉತ್ತೇಜಿಸುವುದುಜೊತೆಗೆಬದುಕನ್ನುಕ್ರೀಡಾಸ್ಪೂರ್ತಿಯಿಂದಸ್ವೀಕರಿಸಬೇಕು. ಇಂದಿನ ಯುವ ಜನತೆ ಕ್ರೀಡೆಯ ಮಹತ್ವ ಅರಿತು ತಮ್ಮ ಓದಿನ ಜತೆಗೆ ಕ್ರೀಡೆಯಲ್ಲಿ ಕೂಡಾ ಭಾಗ ವಹಿಸುವ ಮೂಲಕ ಕ್ರೀಡಾ ಕ್ಷೇತ್ರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ವಿನ್ನರ್ ಹಾಗೂ ರನ್ನರ್ ಅಪ್ ತಂಡಕ್ಕೆ ಟ್ರೋಫಿ ಹಾಗೂ ನಗದು ಬಹುಮಾನ ವಿತರಿಸಿ, ತಂಡದ ಎಲ್ಲ ಸದಸ್ಯರಿಗೆ ಸನ್ಮಾನಿಸಿ, ಅಭಿನಂದಿಸಿದರು. ಈ ಸಂದರ್ಭದಲ್ಲಿ ಗುರುರಾಜ ಮುಗಳಿ, ರೇವಣಸಿದ್ದ ಪಾಟೀಲ್, ಶಿವಾನಂದ ಮಚಕುರಿ, ರವಿ ಬುಡಕೆ, ಬಾಬು ಪೋಸ್ತಾರ್, ಅಜಿಮೋದ್ದಿನ್, ವೀರಣ್ಣ ಮುಲಗೆ, ಸತೀಷ ಸೇರಿ ಅನೇಕರಿದ್ದರು.

## ಭಾಲ್ಕಿ ರಸ್ತೆಗಳು ಕಲ್ಯಾಣಕ್ಕೆ ಮಾದರಿ

ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಹೇಳಿದರು. ತಾಲೂಕಿನ ಭಾತಂಬ್ರಾ ಗ್ರಾಮದಲ್ಲಿಮಂಗಳವಾರ5.21 ಕೋಟಿರೂಅನುದಾನದಡಾಂಬರೀಕರಣ, ಸಿಸಿ ರಸ್ತೆ ಮತ್ತು ಚರಂಡಿ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ಪಟ್ಟಣ ಸೇರಿ ಗ್ರಾಮೀಣ ಭಾಗದ ಎಲ್ಲ ರಸ್ತೆಗಳನ್ನು ಕೋಟಿಗಟ್ಟಲೇ ಅನುದಾನ ನೀಡಿ ರಸ್ತೆಗಳನ್ನು ಗುಣಮಟ್ಟದ ರೀತಿಯಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದರು.

> ಕಾಂಗ್ರೆಸ್‌ಸರಕಾರದಜನಪ್ರಿಯ ಪಂಚ ಗ್ಯಾರಂಟಿ ಯೋಜನೆ ಮತ್ತು ಅಭಿವೃದ್ಧಿ ಕೆಲಸಗಳ ಕುರಿತು ಕಾರ್ಯಕರ್ತರು ಮನೆ ಮನೆಗೂ ಭೇಟಿ ನೀಡಿ ಸಾರ್ವಜನಿಕರಿಗೆಮನವರಿಕೆ ಮಾಡಿಕೊಡಬೇಕು.
>
> **– ಈಶ್ವರ ಖಂಡ್ರೆ**
> **ಜಿಲ್ಲಾ ಉಸ್ತುವಾರಿ ಸಚಿವರು ಬೀದರ್**

ಜಿಲ್ಲೆಯಲ್ಲಿ ಆಗಸ್ಟ್ ಮತ್ತು ಸೆಪ್ಟೆಂಬರ್ ತಿಂಗಳಿನಲ್ಲಿ ಸುರಿದ ಮಳೆಗೆ ಮುಂಗಾರಿನ ಹಂಗಾಮಿನಲ್ಲಿ ಬಿತ್ತನೆಯಾದ ಬಹುತೇಕ ಬೆಳೆಗಳು ಜಲಾವೃತಗೊಂಡಿದ್ದವು. ಹಾಗಾಗಿ ಬೆಳೆಹಾನಿ ಪ್ರದೇಶಕ್ಕೆ ಭೇಟಿ ನೀಡಿ ರೈತರಿಗೆಸೂಕ್ತ ಪರಿಹಾರ ಒದಗಿಸುವ ಭರವಸೆನೀಡಿದ್ದೆ. ಹೆಚ್ಚುವರಿ ಪರಿಹಾರ ಒದಗಿಸಲುಸಿಎಂಅವರನ್ನು ಆಹ್ವಾನಿಸಿವೈಮಾನಿಕಸಮೀಕ್ಷೆನಡೆಸಲಾಗಿತ್ತು. ಅದರಂತೆ ಇದೀಗ ರಾಜ್ಯ ಮತ್ತು ಕೇಂದ್ರ ಸರಕಾರ ದಿಂದ ಸೇರಿ ಜಿಲ್ಲೆಗೆ 300 ಕೋಟಿ ರೂ ಬೆಳೆಹಾನಿ ಪರಿಹಾರ ಒದಗಿಸಲಾಗಿದೆ. ಭಾಲ್ಕಿ ತಾಲೂಕಿಗೆ 60 ಕೋಟಿ ರೂ ಬೆಳೆಹಾನಿ ಪರಿಹಾರ ಬಿಡುಗಡೆಗೊಂಡಿದೆ ಎಂದರು.

ಕೆಲಕಡೆಗಳಲ್ಲಿ ಬೆಳೆಹಾನಿ ಸಮೀಕ್ಷೆ ಅಂತಿಮ ಹಂತದಲ್ಲಿದ್ದು ಸಮೀಕ್ಷೆ ಪೂರ್ಣಗೊಳ್ಳುತ್ತಲೇ ಮುಂದಿನ ಎರಡ್ಮೂರುದಿನಗಳಲ್ಲಿರೈತರಖಾತೆಗೆಬೆಳೆಹಾನಿಪರಿಹಾರಜಮಾಮಾಡುವಂತೆಅಧಿಕಾರಿಗಳಿಗೆಸೂಚಿಸಲಾಗಿದೆ ಎಂದರು. ಲೋಕೋಪಯೋಗಿ ಇಲಾಖೆಯ ಇಇ ಶಿವಶಂಕರ ಕಾಮಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಕಾಡಾ ಅಧ್ಯಕ್ಷ ಬಾಬು ಹೊನ್ನಾ ನಾಯಕ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಮಡಿವಾಳಪ್ಪ ಮಂಗಲಗಿ, ಗ್ರಾಪಂ ಅಧ್ಯಕ್ಷ ಮಹಾಂತೇಶ ಪಾಟೀಲ್, ಉಪಾಧ್ಯಕ್ಷೆ ಗೋದಾವರಿ ಬೀರಗೆ, ಸದಸ್ಯ ವಿಶ್ವ ಹೂಗಾರ, ಪ್ರಮುಖರಾದ ಶಂಕರ ಭೋರಾಳೆ, ಕಾಶಿನಾಥ ಲದ್ದೆ, ಭಯ್ಯ, ಅಂಬಾದಾಸ ಕೋರೆ, ಸಂತೋಷ ಬಿರಾದಾರ್, ಮುಸ್ತಾಕ ಅಹ್ಮೆದ್, ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ಇಒ ಸೂರ್ಯಕಾಂತ ಬಿರಾದಾರ್, ಲೋಕೋಪಯೋಗಿ ಎಇಇ ಅಲ್ತಾಫ್ ಸೇರಿದಂತೆ ಹಲವರು ಇದ್ದರು. ಗ್ಯಾರಂಟಿ ಯೋಜನೆ ಸಮಿತಿ ಅಧ್ಯಕ್ಷ ಹಣಮಂತರಾವ ಚವ್ಹಾಣ ಸ್ವಾಗತಿಸಿದರು. ದೀಪಕ ಠಮಕೆ ನಿರೂಪಿಸಿ, ವಂದಿಸಿದರು.

### ಗ್ಯಾರಂಟಿ ಜತೆಗೆ ಅಭಿವೃದ್ಧಿ

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಜಾರಿಗೊಳಿಸಿರುವ ಐದು ಗ್ಯಾರಂಟಿ ಯೋಜನೆ ಬಡ ಜನರಿಗೆ ವರವಾಗಿವೆ. ಅವರ ಆರ್ಥಿಕ ಪರಿಸ್ಥಿತಿ ಸುಧಾರಣೆಗೆ ಸಹಕಾರಿಯಾಗಿವೆ ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದರು.ಜಿಲ್ಲೆಯಲ್ಲಿ 3.5 ಲಕ್ಷ ಮಹಿಳೆಯರು ಗೃಹಲಕ್ಷ್ಮಿ ಯೋಜನೆಯ ಸದುಪಯೋಗ ಪಡೆದು ಕೊಳ್ಳುತ್ತಿದ್ದಾರೆ. ಈ ಯೋಜನೆಯಡಿ ಪ್ರತಿ ತಿಂಗಳು 70 ಕೋಟಿ ರೂ ಖರ್ಚಾಗುತ್ತಿದೆ ಎಂದರು. ತಾಲೂಕಿನ 60 ಸಾವಿರ ಮಹಿಳೆಯರಿಗೆ ಈ ಯೋಜನೆಯ ಲಾಭ ಸಿಗುತ್ತಿದೆ ಎಂದರು. ಪಂಚ ಗ್ಯಾರಂಟಿ ಯೋಜನೆ ಬಗ್ಗೆ ವಿರೋಧಿಗಳು ಟೀಕೆ ಮಾಡುತ್ತಿದ್ದರು. ಈ ಐದು ಯೋಜನೆ ಜಾರಿಯಾದರೇ ಆರ್ಥಿಕ ಪರಿಸ್ಥಿತಿ ಹಾಳಾಗುತ್ತದೆ. ಸರಕಾರ ದಿವಾಳಿ ಆಗುತ್ತದೆ. ಅಭಿವೃದ್ಧಿ ಕೆಲಸಗಳು ಆಗುವುದಿಲ್ಲ ಎಂದು ಟೀಕಿಸುತ್ತಿದ್ದರು. ಆದರೆ ಕಾಂಗ್ರೆಸ್ ಸರಕಾರ ಐದು ಗ್ಯಾರಂಟಿ ಯೋಜನೆ ಅನುಷ್ಠಾನದ ಜತೆಗೆ ಅಭಿವೃದ್ಧಿ ಪರ ಕೆಲಸಗಳು ಭರಪೂರ ಪ್ರಗತಿಯಲ್ಲಿವೆ ಎಂದರು.

### 5.21 ಕೋಟಿ ಅನುದಾನ

ಭಾತಂಬ್ರಾ ಗ್ರಾಮದಲ್ಲಿ 2.75 ಕೋಟಿ ರೂ ಅನುದಾನದಲ್ಲಿ ರಸ್ತೆ ಮರುಡಾಂಬರೀಕರಣ, 1.96 ಕೋಟಿ ರೂ ಅನುದಾನದಲ್ಲಿ ಎಸ್ಸಿ ಮತ್ತು ಎಸ್ಟಿ ಬಡಾವಣೆಗಳಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಈ ಗ್ರಾಮದಲ್ಲಿ ವಿವಿಧ ಭವನ, ದೇಗುಲ ಅಭಿವೃದ್ಧಿ ಕೋಟಿಗಟ್ಟಲೇ ಅನುದಾನ ನೀಡಿದ್ದೇನೆ. ಗಡಿಭಾಗದ ರಸ್ತೆಗಳು ಹೈವೆ ಮಾದರಿಯಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದು ಸಚಿವ ಖಂಡ್ರೆ ತಿಳಿಸಿದರು.

## ವ್ಯಾಪ್ತಿಗೆ ಸೇರದ ಗ್ರಾಮಸ್ಥರು ಅತಂತ್ರ

ಪಂಚಾಯಿತಿಯಲ್ಲಿ ಮ್ಯುಟೇಶನ್, ಡಿಜಿಟಲ್ ಖಾತಾ, ಉದ್ಯೋಗ ಖಾತ್ರಿ ಜಾಬ್ ಕಾರ್ಡ್, ಕಟ್ಟಡ ನಿರ್ಮಾಣದ ಪರವಾನಗಿ, ವಾಸಸ್ಥಳ ಪ್ರಮಾಣ ಪತ್ರ ಸೇರಿದಂತೆ ಇತರೆ ದಾಖಲೆಗಳನ್ನು ಕೊಡುತ್ತಾರೆ. ಆದರೆ, ಅವರ ಗ್ರಾಮಗಳನ್ನು ಇದುವರೆಗೆ ಎಲ್ಲೂ ಕೂಡ ಸೇರ್ಪಡೆ ಮಾಡದ ಕಾರಣ ದಿಕ್ಕು ತೋಚದೆ ಇಕ್ಕಟ್ಟಿಗೆ ಸಿಲುಕಿದ್ದಾರೆ. ಈಸಂಬಂಧಅಧಿಕಾರಿಗಳನ್ನು ಪ್ರಶ್ನಿಸಿದರೆ, ಯಾವ ಗ್ರಾಮಪಂಚಾಯಿತಿಗೆಸೇರಿಸಬೇಕೆನ್ನುವುದರ ಬಗ್ಗೆ ಚರ್ಚೆ ನಡೆದಿದೆ ಎಂದು ಹೇಳುತ್ತಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಉದಾಹರಣೆಗೆ ಬೀದರ್ ತಾಲ್ಲೂಕಿನ ಕೊಳಾರ (ಕೆ) ಗ್ರಾಮ ಪಂಚಾಯಿತಿಯಿಂದ ಕೊಳಾರ (ಕೆ), ಹಜ್ಜರಗಿ, ಕಮಲಪೂರ, ನಿಜಾಮಪೂರ ಗ್ರಾಮಗಳು ಪಾಲಿಕೆಗೆ ಸೇರ್ಪಡೆಯಾಗಿವೆ. ಆದರೆ, ಈ ಪಂಚಾಯಿತಿ ವ್ಯಾಪ್ತಿಯ ಬಕಚೌಡಿ, ಬೆಳ್ಳೂರ ಗ್ರಾಮಗಳನ್ನು ಇದುವರೆಗೆ ಎಲ್ಲೂ ಸೇರಿಸಿಲ್ಲ. ಇತರೆ ಗ್ರಾಮಗಳ ಪರಿಸ್ಥಿತಿಯೂ ಹೀಗೆ ಇದೆ. ಅದೇ ರೀತಿ ಮರಕಲ್ ಗ್ರಾಮ ಪಂಚಾಯಿತಿಯಿಂದ ಚಿಕ್ಕಪೇಟೆ ಗ್ರಾಮ ಪಾಲಿಕೆಗೆ ಸೇರಿಸಲಾಗಿದೆ. ಮರಕಲ್,

ಬೆನಕನಳ್ಳಿ ಸೇರಿಲ್ಲ. ಆದರೆ, ಪಂಚಾಯಿತಿ ಕಚೇರಿ ಇರುವ ಮರಕಲ್ ಪಾಲಿಕೆಗೆ ಸೇರದ ಕಾರಣ ಹೆಚ್ಚೇನೂ ಸಮಸ್ಯೆ ಆಗಿಲ್ಲ. ಆದರೆ, ಪಾಲಿಕೆ ಮೇಲ್ದರ್ಜೆಗೊಂಡ ನಂತರ ಗ್ರಾಮಗಳ ದಾಖಲೆಗಳನ್ನು ಪಾಲಿಕೆಗೆ ಹಸ್ತಾಂತರಿಸಲಾಗಿದ್ದು, ಅವುಗಳನ್ನು ಡಿಜಿಟಲೀಕರಣಗೊಳಿಸುವ ಪ್ರಕ್ರಿಯೆ ಇನ್ನೂ ನಡೆಯುತ್ತಿದ್ದು, ಪಾಲಿಕೆ ಸೇರಿದ ಗ್ರಾಮಗಳ ಗ್ರಾಮಸ್ಥರಿಗೂ ಸಮಸ್ಯೆ ಎದುರಾಗಿದೆ. 'ಆದಷ್ಟು ಶೀಘ್ರ ಸಮೀಪದ ಪಂಚಾಯಿತಿಗಳಿಗೆ ಬಿಟ್ಟು ಹೋದ ಗ್ರಾಮಗಳನ್ನು ಸೇರಿಸಬೇಕು. ಗ್ರಾಮಸ್ಥರನ್ನು ಇಕ್ಕಟ್ಟಿನಿಂದ ಪಾರು ಮಾಡಬೇಕು. ಪಂಚಾಯಿತಿ ಇಲ್ಲದ ಕಾರಣ ದಾಖಲೆಗಳಿಲ್ಲದೇ ಸುಮ್ಮನೆ ಕೂರುವ ಪರಿಸ್ಥಿತಿ ಇದೆ. ಇದನ್ನು ಜಿಲ್ಲಾಡಳಿತ ಗಂಭೀರವಾಗಿ ತೆಗೆದುಕೊಂಡು ಸಮಸ್ಯೆ ಬಗೆಹರಿಸಬೇಕು'

ಎಂದು ಬಕಚೌಡಿ, ಬೆಳ್ಳೂರ ಗ್ರಾಮಸ್ಥರು ಆಗ್ರಹಿಸಿದ್ದಾರೆ. ಬೀದರ್ ನಗರಸಭೆ ಮಹಾನಗರ ಪಾಲಿಕೆಯಾಗಿ 2025ರಫೆಬ್ರುವರಿಯಲ್ಲಿಮೇಲ್ದರ್ಜೆಗೇರಿಸಲಾಗಿದೆ. ಎಂಟು ತಿಂಗಳು ಕಳೆದರೂ ಗ್ರಾಮಗಳ ಸೇರ್ಪಡೆ ಇನ್ನೂ ನನೆಗುದಿಗೆ ಬಿದ್ದ ಕಾರಣ ಗ್ರಾಮಸ್ಥರು ಅಸಮಾಧಾನಗೊಂಡಿದ್ದಾರೆ. ವಿನೋದ್ ಚಿಂತಾಮಣಿ ಬಕಚೌಡಿ ಗ್ರಾಮಸ್ಥಕೊಳಾರ ಪಂಚಾಯಿತಿ ಮಹಾನಗರ ಪಾಲಿಕೆಗೆ ಸೇರಿದೆ. ಆದರೆ ಬಕಚೌಡಿ ಬೆಳ್ಳೂರ ಗ್ರಾಮಗಳನ್ನು ಇದುವರೆಗೆ ಯಾವುದೇ ಪಂಚಾಯಿತಿಗೆ ಸೇರ್ಪಡೆ ಮಾಡಿಲ್ಲ. ಯಾವುದೇ ಕೆಲಸಗಳು ಆಗುತ್ತಿಲ್ಲ. ಬಹಳ ತೊಂದರೆಯಾಗುತ್ತಿದೆ. ಗಣೇಶ ಬಕಚೌಡಿ ಗ್ರಾಮಸ್ಥಇನ್ನೂ ಯಾವುದೇ ಪಂಚಾಯಿತಿಗೆ ನಮ್ಮ ಗ್ರಾಮ ಸೇರ್ಪಡೆ ಮಾಡಿಲ್ಲ. ಯಾವುದೇ ಕೆಲಸವಿದ್ದರೆ ಎಲ್ಲಿ ಅರ್ಜಿ ಕೊಡಬೇಕು ಗೊತ್ತಾಗುತ್ತಿಲ್ಲ. ಐದಾರು ತಿಂಗಳಿಂದ ಹುಚ್ಚರಂತೆ ಓಡಾಡುತ್ತಿದ್ದೇವೆ. ಅಧಿಕಾರಿಗಳನ್ನು ಕೇಳಿದರೆ ಸಮಂಜಸ ಉತ್ತರ ಸಿಗುತ್ತಿಲ್ಲ. ಡಾ. ಗಿರೀಶ ಬದೋಲೆ ಕಾರ್ಯನಿರ್ವಾಹಕ ಅಧಿಕಾರಿ ಜಿ.ಪಂ. ಬೀದರ್‌ಮಹಾನಗರ ಪಾಲಿಕೆಗೆ ಸೇರದ ಕೆಲವು ಗ್ರಾಮಗಳನ್ನು ಸಮೀಪದ ಪಂಚಾಯಿತಿಗೆ ಸೇರ್ಪಡೆ ಮಾಡಬೇಕೆಂದು ಜಿಲ್ಲಾಧಿಕಾರಿಗೆ ಪ್ರಸ್ತಾವ ಸಲ್ಲಿಸಲಾಗಿದೆ. ಮಿಕ್ಕುಳಿದ ಪ್ರಕ್ರಿಯೆ ಅವರ ಹಂತದಲ್ಲಿಯೇ ನಡೆಯಲಿದೆ. ಶಿಲ್ಪಾ ಶರ್ಮಾ ಜಿಲ್ಲಾಧಿಕಾರಿ ಬೀದರ್ಮಹಾನಗರ ಪಾಲಿಕೆಗೆ ಕೆಲ ಪಂಚಾಯಿತಿಗಳು ಸೇರಿದ್ದು ಅವುಗಳ ವ್ಯಾಪ್ತಿಯ ಕೆಲ ಗ್ರಾಮಗಳು ಸೇರಿಲ್ಲ. ಅವುಗಳನ್ನು ಸಮೀಪದ ಪಂಚಾಯಿತಿಗಳಿಗೆ ಸೇರಿಸುವ ಪ್ರಕ್ರಿಯೆ ಈ ತಿಂಗಳ ಅಂತ್ಯಕ್ಕೆ ಕೊನೆಗೊಳ್ಳಲಿದೆ.

## ಸಂಘಟನೆಗಳ ಮಧ್ಯೆ ಮೂಡದ ಒಮ್ಮತ

ಖಂಡ ಅಂಬಾರಾಯ್ ಅಷ್ಟಗಿ ಹೇಳಿದರು. ಎರಡು ಕಡೆ ವಾಗ್ವಾದ ಜೋರಾದ ಬೆನ್ನಲ್ಲೇ ಪರಿಸ್ಥಿತಿ ಅರಿತ ಜಿಲ್ಲಾಧಿಕಾರಿಗಳು ಶಾಂತಿ ಸಭೆಯನ್ನು ಅರ್ಧಕ್ಕೆ ಅಂತ್ಯಗೊಳಿಸಿದರು.

ಸಭೆಯ ಬಳಿಕ ಹೊರಬಂದ ಆರ್‌ಎಸ್‌ಎಸ್ ಮುಖಂಡರ ವಿರುದ್ಧ ಸಂಘಟನೆಗಳು ಧಿಕ್ಕಾರ ಕೂಗಿದರು. ಪೊಲೀಸರು ಮಧ್ಯಪ್ರವೇಶಿಸಿ ಆರ್ ಎಸ್‌ಎಸ್ ಮುಖಂಡರನ್ನು ಕಾರಿನವರೆಗೆ ಕರೆದೊಯ್ದು ಕಳಿಸಿದರು.

ಮಾಧ್ಯಮಗಳಜೊತೆಮಾತಾಡಿದದಲಿತಸಂಘಟನೆಮುಖಂಡರು, ಆರ್ ಎಸ್‌ಎಸ್ ಪಥಸಂಚನಲದ ದಿನವೇ ನಾವೂ ಪಥಸಂಚಲನ ಮಾಡುತ್ತೇವೆ ಎಂದರು. ಇದಕ್ಕೆ ಕಿಡಿಕಾರಿದ ಆರ್‌ಎಸ್‌ಎಸ್ ಪರ ಬಿಜೆಪಿ ಮುಖಂಡ ಅಂಬಾರಾಯ್ ಅಷ್ಟಗಿ, ಪ್ರಿಯಾಂಕ್ ಖರ್ಗೆ ಜಿದ್ದಿಗೆ ಬಿದ್ದು ಈ ರೀತಿ ಮಾಡುತ್ತಿದ್ದಾರೆ ದೂರಿದರು.

ಅ.30 ರಂದು ಕಲಬುರಗಿ ಹೈಕೋರ್ಟ್ ಆದೇಶದತ್ತ ಎಲ್ಲರ ಚಿತ್ತ ಇದೆ. ನವೆಂಬರ್ 2ರಂದು ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥಸಂಚಲನ ಮಾಡುತ್ತಾ ಎನ್ನುವ ಕುತೂಹಲ ಹೆಚ್ಚಾಗಿದೆ.

### ಹೈಕೋರ್ಟ್ ಮಧ್ಯಂತರ ತಡೆ

ನ್ಯಾಯಾಲಯದಈಆದೇಶದಿಂದಆರ್‌ಎಸ್‌ಎಸ್‌ನಚಟುವಟಿಕೆಗಳಿಗೆ ನಿರ್ಬಂಧಹೇರಲುಮುಂದಾಗಿದ್ದಸರ್ಕಾರಕ್ಕೆಹಿನ್ನಡೆಯಾಗಿದೆ. ಸಾರ್ವಜನಿಕ ಹಾಗೂಸರ್ಕಾರಿಜಾಗದಲ್ಲಿ10ಕ್ಕಿಂತಹೆಚ್ಚುಜನಸೇರಿದರೆಅದನ್ನುಅಕ್ರಮ ಕೂಟ ಎಂದು ಪರಿಗಣಿಸಿ ಆರ್‌ಎಸ್‌ಎಸ್‌ನ ಪಥ ಸಂಚಲನಕ್ಕೆ ಅನುಮತಿ ನೀಡದೆ ಇರುವ ಸರ್ಕಾರದ ಕ್ರಮ ಪ್ರಶ್ನಿಸಿ ಪುನಶ್ಚೇತನ ಸೇವಾ ಸಂಸ್ಥೆ ಹೈಕೋರ್ಟ್‌ನ ಧಾರವಾಡ ಪೀಠಕ್ಕೆ ರಿಟ್ ಅರ್ಜಿ ಸಲ್ಲಿಸಿತ್ತು. ಇಂದು ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾ. ಎನ್ ನಾಗಪ್ರಸನ್ನ ಇದ್ದ ಅವರ ಪೀಠ ಸರ್ಕಾರದ ಆದೇಶಕ್ಕೆ ಮಧ್ಯಂತರ ತಡೆ ನೀಡಿ ಸರ್ಕಾರ, ಗೃಹ ಇಲಾಖೆ, ಹುಬ್ಬಳ್ಳಿ ಪೊಲೀಸ್ ಆಯುಕ್ತರಿಗೆ ನೋಟಿಸ್ ಜಾರಿ ಮಾಡಿದೆ.ಮುಂದಿನ ವಿಚಾರಣೆಯನ್ನು ನವೆಂಬರ್ 17ಕ್ಕೆ ನಿಗದಿಪಡಿಸಿದರು.

ರಾಜ್ಯಸರ್ಕಾರ2025ರಅಕ್ಟೋಬರ್18ರಂದುಹೊರಡಿಸಿದ್ದಆದೇಶದಲ್ಲಿ ಅನುಮತಿ ಇಲ್ಲದೆ ಹತ್ತು ಜನ ಸೇರಿದರೆ ಅಪರಾಧ ಎಂದು ಹೇಳಿದೆ. ರಸ್ತೆ, ಪಾರ್ಕ್, ಮೈದಾನ, ಕೆರೆ ಇತ್ಯಾದಿ ಪ್ರವೇಶಕ್ಕೂ ನಿರ್ಬಂಧ ವಿಧಿಸಿದೆ. ಪೊಲೀಸ್ ಕಾಯ್ದೆಯಲ್ಲಿ ಇರುವ ಅಧಿಕಾರವನ್ನು ಸರ್ಕಾರ ಆದೇಶದ ಮೂಲಕಚಲಾಯಿಸಿದೆ. ಸಂವಿಧಾನದಆರ್ಟಿಕಲ್19(1)ಎ,ಬಿನೀಡಿರುವ ಹಕ್ಕನ್ನು ಸರ್ಕಾರಕಿತ್ತುಕೊಂಡಿದೆ. ಸಂವಿಧಾನನೀಡಿರುವಹಕ್ಕನ್ನು ಸರ್ಕಾರಿ ಆದೇಶ ಕಿತ್ತುಕೊಳ್ಳಲಾಗದು ಎಂದು ನ್ಯಾಯಪೀಠ ಹೇಳಿದೆ.

ಸರ್ಕಾರದಆದೇಶದಸಂವಿಧಾನಬಾಹಿರಎಂದುಪುನಶ್ಚೇತನಸೇವಾಸಂಸ್ಥೆ ಪರವಕೀಲಅಶೋಕ್‌ಹಾರ್ನಳ್ಳಿವಾದಮಂಡಿಸಿದ್ದರು. ಇದನ್ನುಪುರಸ್ಕರಿಸಿದ ನ್ಯಾಯಾಲಯ ಈ ಆದೇಶ ಮೇಲ್ನೋಟಕ್ಕೆ ಕಾನೂನುಬಾಹಿರವಾಗಿದೆ ಎಂದು ಕಂಡು ಬಂದಿದ್ದು, ಸಂವಿಧಾನ ಕೊಟ್ಟ ಮೂಲಭೂತ ಹಕ್ಕನ್ನು ಸರ್ಕಾರದ ಒಂದು ಆದೇಶದ ಮೂಲಕ ಕಿತ್ತುಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿ ಆದೇಶಕ್ಕೆ ಮಧ್ಯಂತರ ತಡೆ ನೀಡಿದೆ.

ಈಸಂದರ್ಭದಲ್ಲಿರಾಜ್ಯ ಸರ್ಕಾದರ ಪರವಕೀಲರು ವಾದ ಮಂಡಿಸಲು ಒಂದು ದಿನ ಕಾಲಾವಕಾಶ ಕೇಳಿದ್ದು, ನ್ಯಾಯಾಲಯ ನಿಮಗೆ ನೋಟಿಸ್ ಕೊಡಲಾಗುತ್ತದೆ. ನೀವು ವಾದ ಮಾಡಿ ಎಂದು ಹೇಳಿ ವಿಚಾರಣೆಯನ್ನು ಮುಂದೂಡಿತು.

#### ಹೈಕೋರ್ಟ ಆದೇಶ ಪ್ರಶ್ನಿಸಿ ಮೇಲ್ಮನವಿ:ಸಿಎಂ

ಸರ್ಕಾರಿ, ಸಾರ್ವಜನಿಕಸ್ಥಳಗಳಲ್ಲಿ ಖಾಸಗಿ ಚಟುವಟಿಕೆಗಳಿಗೆ ಅನುಮತಿ ಸಂಬಂಧರಾಜ್ಯಸರ್ಕಾರಹೊರಡಿಸಿರುವಆದೇಶಕ್ಕೆಹೈಕೋರ್ಟ್‌ತಡೆಯಾಜ್ಞೆ ನೀಡಿದೆ. ಧಾರವಾಡಹೈಕೋರ್ಟ್ ಆದೇಶಪ್ರಶ್ನಿಸಿಮೇಲ್ಮನವಿಸಲ್ಲಿಸುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

## ಆರೋಪಿಗಳಿಗೆ ಬಂಧಿಸದಿದ್ದರೆ ಸಾಮೂಹಿಕ ಆತ್ಮಹತ್ಯೆ: ಸುಶಿಲಾಬಾಯಿ




ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 28 : ಅಕ್ಟೋಬರ್ 21 ರಂದು ಸಾಯಂಕಾಲ ಭಾಲ್ಕಿ ತಾಲೂಕಿನ ಕಣಜಿ ಗ್ರಾಮದ ಟೋಕರೆ ಕೋಳಿ ಕಬ್ಬಲಿಗ ಸಮಾಜದ ಸುಶೀಲಾಬಾಯಿ ಎನ್ನುವ ಮಹಿಳೆಯೊಬ್ಬಳನ್ನು ಅದೇ ಗ್ರಾಮದ ಪ್ರಕಾಶ ತಂದೆ ವಿಶ್ವನಾಥ, ನಾಗೇಶ ತಂದೆ ಪ್ರಕಾಶ ಹಾಗೂ ಕಾರ್ತಿ ಕ ತಂದೆ ಕ-ಂಟಯ್ಯಾ ಎನ್ನುವವರು ಕೊಲೆಗೆ ಯತ್ನಿಸಿ, ಮಹಿಳೆಗೆ ಸಾರಾಯಿ ಕುಡಿಸಿ ಕೆರೆಯೊಳಗೆ ಎಸೆದಿದ್ದು ಖಂಡನೀಯ ಎಂದು ಕೋಲಿ ಕಬ್ಬಲಿಗ ಎಸ್‌ಟಿ ಹೋರಾಟ ಸಮಿತಿಯ ಕಲ್ಯಾಣ ಕರ್ನಾಟಕ ಮಹಿಳಾ ಘಟಕದ ಅಧ್ಯಕ್ಷೆ ಜೈಶ್ರೀ ಕಟ್ಟಿಮನಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ ಕ-ರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಹಣದ ವ್ಯವಹಾರದ ವಿಷಯದಲ್ಲಿ ಮಹಿಳೆಗೆ ಅನ್ಯಾಯ ಮಾಡಲಾಗಿದೆ. ಜೊತೆಗೆ ಕೊಲೆಗೆ ಯತ್ನ ನಡೆದಿದೆ. ಈ ಎಲ್ಲಾ ವಿಷಯ ಧನ್ನೂರಾ ಎಚ್. ಪೊಲೀಸ್ ಠಾಣೆಯ ಪಿಎಸ್‌ಐ ಅವರಿಗೆ ಮಾಹಿತಿ ಇದೆ. ಸಂತ್ರಸ್ತೆ ಆಸ್ಪತ್ರೆಯಲ್ಲಿದ್ದಾಗ ಎಂಎಲ್‌ಸಿ ಕೂಡಾ ಅದೇ ದಿವಸ ರಾತ್ರಿ ಆಗಿದೆ. ಘಟನೆ ನಡೆದ 24 ಗಂಟೆಯೊಳಗೆ ಎಫ್‌ಐಆರ್ ಆಗಬೇಕು. ಆದರೆ ಏಳು ದಿವಸಗಳು ಕಳೆದರೂ ಇಂದಿಗೂ ಎಫ್‌ಐಆರ್ ಆಗದಿರುವುದು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ. ಬಸವಾದಿ ಶರಣರು, ಸೂಫಿ ಸಂತರ ನಾಡಿನಲ್ಲಿ ಒಬ್ಬ ಮಹಿಳೆಗೆ ಇಷ್ಟೆಲ್ಲಾ ಅನ್ಯಾಯ ಆದರೂ, ಕೊಲೆ ಯತ್ನ ನಡೆದರೂ ನ್ಯಾಯ ಸಿಗದೇ ಇರುವುದು ವಿಷಾದನೀಯ. ಕೂಡಲೇ ಆರೋಪಿಗಳ ಮೇಲೆ ಜಾತಿನಿಂದನೆ ಕೇಸ್ ದಾಖಲಾಗಬೇಕು. ಆರೋಪಿಗಳ ಬಂಧನವಾಗಬೇಕು. ಇಲ್ಲದಿದ್ದರೆ ಎಸ್‌ಪಿಯವರಿಗೆ, ಐಜಿ ಕಲಬುರಗಿ ಯವರಿಗೆ ಹಾಗೂ ಮಹಿಳಾ ಆಯೋಗಕ್ಕೆ ದೂರ ಸಲ್ಲಿಸಲಾಗುವುದು ಎಂದು ಜೈಶ್ರೀ ತಿಳಿಸಿದರು.

ಹಲ್ಲೆಗೊಳಗಾದ ಟೋಕರೆ ಕೋಲಿ ಕಬ್ಬಲಿಗ ಸಮಾಜದ ಮಹಿಳೆ ಸುಶೀಲಾಬಾಯಿ ಮಾತನಾಡಿ ಅ. 21 ರಂದು ಈ ಮೇಲಿನ ಮೂವರಿಗೆ ಹಣದ ವ್ಯವಹಾರದ ವಿಷಯದಲ್ಲಿ ನನ್ನ ಬಂಗಾರ ಹಾಗೂ ಹಣ ನನಗೆ ವಾಪಸ್ ಕೊಡಿ ಎಂದು ಕೇಳಿದ್ದೆ. ಅದನ್ನೇ ಮನಸ್ಸಿನಲ್ಲಿಟ್ಟುಕೊಂಡು ಕೆರೆ ಕಡೆಗೆ ಬಹಿರ್ದೆಸೆಗೆ ಒಬ್ಬಳೇ ಹೋದಾಗ ನನ್ನ ಬಾಯಿ ಮುಚ್ಚಿ, ಪೊದೆಯೊಳಗೆ ಕರೆದುಕೊಂಡು ಹೋದರು. ಅಲ್ಲಿ ನನ್ನ ಬಾಯೊಳಗೆ ಸಾರಾಯಿ ಹಾಕಿ, ಈ ಮೂವರು ಕೆರೆಯೊಳಗೆ ಎಸೆದರು. ಅಂದು ಕೆಲವು ಗ್ರಾಮಸ್ಥರು ಹಾಗೂ ಕುಟುಂಬಸ್ಥರು ಬಂದು ನನಗೆ ಕಾಪಾಡದಿದ್ದರೆ ನಾನು ಸಾಯುತಿ-ದ್ದೆ. ಇಷ್ಟೆಲ್ಲಾ ಘಟನೆಗಳ ಬಗ್ಗೆ ಧನ್ನೂರಾ ಪೊಲೀಸರಿಗೆ ಮಾಹಿತಿ ಇದ್ದರೂ, ಅವರ ಮೇಲೆ ಇಂದಿಗೂ ಕೇಸ್ ದಾಖಲಿಸಲಿಲ್ಲ. ನನಗೆ ಅನ್ಯಾಯವಾಗಿದೆ. ಆರೋಪಿಗಳನ್ನು ಕೂಡಲೇ ಬಂಧಿಸಬೇಕು. ಇಲ್ಲದಿದ್ದರೆ ಧನ್ನೂರಾ ಪೊಲೀಸ್ ಠಾಣೆ ಮುಂದೆ ನಾನು ಹಾಗೂ ನನ್ನ ಕುಟುಂಬಸ್ಥರು ವಿಷ ಸೇವಿಸಿ ಸಾಮೂಹಿಕ ಆತ್ಮಹತ್ಯೆ ಮಾಡಿಕೊಳ್ಳುತ್ತೇವೆ ಎಂದು ಕಣ್ಣೀರಿಟ್ಟರು.

ಸಂತ್ರಸ್ತ ಮಹಿಳೆಯ ಮಗ ಹಣಮಂತ ಬಸವರಾಜ ಮಾತನಾಡಿ ಈ ಕುರಿತು ಧನ್ನೂರಾ ಪೊಲೀಸ್ ಠಾಣೆಯ ಪಿಎಸ್‌ಐ ಅವರಿಗೆ ಕೇಳಿದಾಗ ನೀನೇನು ನನಗೆ ಹಣ ಕೊಟ್ಟಿದ್ದಿಯಾ? ನೀನು ಹೇಳಿದ ಹಾಗೆ ಕೇಳಲು ನಾವೇನು ನಿಮ್ಮ ಆಳುಗಳಾ? ನಿನ್ನ ಮೇಲೆ ಹಳೆಯ ಕೇಸ್ ಇದೆ. ಆ ಫೈಲ್ ತೆಗೆದು ನಿನಗೆ ಒಳಗೆ ಹಾಕ್ತಿನಿ ಎಂದು ಧಮ್ಕಿ ಹಾಕುತ್ತಿದ್ದಾರೆ. ನಮ್ಮ ತಾಯಿ ನ್ಯಾಯ ಒದಗಿಸಿಕೊಡದಿದ್ದರೆ ಸಾಮೂಹಿಕಆತ್ಮಹತ್ಯೆಮಾಡಿಕೊಳ್ಳುತ್ತೇವೆ ಎಂದರು.

ಇದೇ ವೇಳೆ ಸುದ್ದಿಗೋಷ್ಠಿಯಲ್ಲಿ ಕೋಲಿ ಕಬ್ಬಲಿಗ ಎಸ್‌ಟಿ ಹೋರಾಟ ಸಮಿತಿಯ ಬೀದರ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಇಂದುಬಾಯಿ ರವೀಂದ್ರ, ಸಂತ್ರಸ್ತೆಯ ಸೊಸೆ ಸುರೇಖಾಹಣಮಂತಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.28: ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ಸರಕಾರಿ ನೌಕರರಿಗೆ ರಾಜ್ಯ ಮಟ್ಟದ ಗುಂಪು ಸ್ಪರ್ಧೆಗಳಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ತಿಳಿಸಿದ್ದಾರೆ.

ನವೆಂಬರ್ ತಿಂಗಳಿನಲ್ಲಿ ರಾಜ್ಯ ಸರಕಾರಿ ನೌಕರರಿಗೆ ಜಾನಪದ/ ಚಿತ್ರ ಗೀತೆಗಳ ಸಾಮೂಹಿಕ ನೃತ್ಯ (ಗುಂಪುಸ್ಪರ್ಧೆ)ಆಯೋಜಿಸಲಾಗಿದೆ. ಪ್ರಥಮ ಬಹುಮಾನ 1ಲಕ್ಷ, ದ್ವಿತೀಯ-75,000/-,-50,000/-20,000/- ನಗದು ಬಹುಮಾನ ನೀಡಲಾಗುತ್ತಿದ್ದು, ಸರಕಾರಿ ನೌಕರರು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ನ.2 ಕೊನೆ ದಿನ. ನಿಗದಿತ ದಿನದೊಳಗೆ ಅರ್ಜಿ ಸಲ್ಲಿಸಬಹುದು. ಆನ್‌ಲೈನ್ ಲಿಂಕ್ https://forms.gle/8pR3m5nXowwQzcç9 ಸಲ್ಲಿಸುವಂತೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇಶ ರಕ್ಷಣೆಗೆ ಮಾಜಿ ಸೈನಿಕರ ಕೊಡುಗೆ ಅಪಾರ : ನಾಗಮಾರಪಳ್ಳಿ




ಮಲ್ಲಮ್ಮ ನುಡಿ ವಾರ್ತೆ

ಬೀದರ್:ಅ.28: ದೇಶ ರಕ್ಷಣೆಗೆ ಅಂದಿನ ದಿನಗಳಲ್ಲಿ ಮಾಜಿ ಸೈನಿಕರ ಕೊಡುಗೆ ಅಪಾರ ಎಂದು ಜೆಡಿಎಸ್ ಮುಖಂಡ ಸೂರ್ಯಕಾಂತ್ ನಾಗಮಾರಪಳ್ಳಿ ಹೇಳಿದರು.

ನಗರದ ಡಾ. ಚನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ನಡೆದ ಮಾಜಿ ಸೈನಿಕರ ಸಂಘದ ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಾಜಿ ಸೈನಿಕರು ದೇಶಕ್ಕಾಗಿ ಅದ್ಭುತ ಸೇವೆ ಸಲ್ಲಿಸಿದ್ದಾರೆ. ಗಡಿಯಲ್ಲಿ ನಿಂತು ಶತ್ರುಗಳು ದೇಶದ ಒಳಗೆ ನುಗ್ಗದಂತೆ ಕಾವಲು ಕಾದಿರುವ ಕೀರ್ತಿ ಅವರಿಗೆ ಸಲ್ಲುತ್ತದೆ. ಅವರ ಸೇವೆಯನ್ನು ಪರಿಗಣಿಸಿ, ಇಂದಿನ ಪೀಳಿಗೆ ಮಾಜಿ ಸೈನಿಕರಿಗೆ ಗೌರವ ನೀಡುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಹೇಳಿದರು.ಮುಂದುವರಿದು ಅವರು, ಮಾಜಿ ಸೈನಿಕರ ಕಷ್ಟ-ಸುಖಗಳಲ್ಲಿ ನಾಗಮಾರಪಳ್ಳಿ ಪರಿವಾರ ಸದಾ ಅವರೊಂದಿಗೆ ಇರುತ್ತದೆ. ಗುರುಪಾದಪ್ಪ ನಾಗಮಾರಪಳ್ಳಿ ಆಸ್ಪತ್ರೆಯಲ್ಲಿ ಮಾಜಿ ಸೈನಿಕರಿಗೆ ಉಚಿತ ಚಿಕಿತ್ಸೆ ನೀಡುವ ಎಂದು ಭರವಸೆ ನೀಡಿದರು.

ಕಾರ್ಯಕ್ರಮದ ಮುಖ್ಯ ಅತಿಥಿ ಈಶ್ವರ್ ಸಿಂಗ್ ಠಾಕೂರ್ ಮಾತನಾಡಿ, ಅಂದಿನ ಕಾಲದಲ್ಲಿ ಸೈನಿಕರ ಕೈಯಲ್ಲಿ ಅತ್ಯಾಧುನಿಕ ಉಪಕರಣಗಳು ಇರಲಿಲ್ಲದರೂ ಅವರು ದೇಶದ ಗಡಿಯನ್ನು ಸಮರ್ಥವಾಗಿ ರಕ್ಷಿಸಿದರು. ಇಂದಿಗೂ ಭಾರತೀಯ ಸೈನ್ಯವು ಅದೇ ಶೌರ್ಯದಿಂದ ದೇಶದ ಭದ್ರತೆ ಕಾಪಾಡುತ್ತಿದೆ ಎಂದು ಹೇಳಿದರು. ಮತ್ತು ಕಳೆದ 42 ವರ್ಷಗಳಿಂದ ಅಧಿಕಾರಿಗಳು ಹಾಗೂ ಮಾಜಿ ಸೈನಿಕರು ಎಷ್ಟೇ ಹೋರಾಟ ನಡೆಸಿದರು ಒಂದು ರಾಂಕ್ ಒಂದು ಪೆನ್ಷನ್ ಕಾರ್ಯರೂಪಕ್ಕೆ ತರಲು ಸಾಧ್ಯವಾಗಿಲ್ಲ ಆದರೆ 2014 ರಲ್ಲಿ ಕೇಂದ್ರ ಸರ್ಕಾರದ ಪ್ರಧಾನಿ ನರೇಂದ್ರ ಮೋದಿ ಅವರು ಒಂದು ರಾಂಕ್ ಒಂದು ಪೆನ್ಷನ್ ಅನುಷ್ಠಾನ ತಂಡಿದರು ಅದರಿಂದ ಲಕ್ಷಾಂತರ ಅಧಿಕಾರಿಗಳು ಮಾಜಿ ಸೈನಿಕರಿಗೆ ಇದರ ಸದುಪಯೋಗ ಪಡೆದುಕೊಂಡಿದ್ದಾರೆ ಎಂದರು.ಮಾಜಿ ಸೈನಿಕ ಸಂಘದ ಗೌರವ ಅಧ್ಯಕ್ಷ ರು ಅಶೋಕ್ ಕುಮಾರ್ ಕರಂಜಿ ಮಾತನಾಡಿ, ಅಕ್ಟೋಬರ್ 20 , 1975ರಲ್ಲಿ ಬೀದರ್ ಜಿಲ್ಲೆಯ ಚಿಟಗುಪ್ಪದಲ್ಲಿ ಸಂಘ ಸ್ಥಾಪನೆ ಮಾಡಲಾಯಿತು ಸಂಘದ ಸಂಸ್ಥಾಪಕ ರಾದ ವೆಂಕಟರಾವ್ ತೆಲಂಗ, ಗುರುಪ್ಪ ಬಿರಾದಾರ ಚಿದ್ರಿ, ಚೆನ್ನಬಸವ ಚೌಬಾರಾ, ರಾಮುಲು ಮತ್ತು ಸಿದ್ದಪ್ಪ ಅಣದುರ , ಮೋಹನ್ ಬಚ್ಚಾ ಅವರ ನೇತೃತ್ವದಲ್ಲಿ ಬೀದರ್ ಜಿಲ್ಲಾ ಮಾಜಿ ಸೈನಿಕರ ಸಂಘ ಸ್ಥಾಪಿಸಲಾಯಿತು. ಬಳಿಕ ಕೆ.ಕೆ. ಶಿವರಾಜ, ಸತ್ಯಂದರ್ ಸಿಂಗ್, ಪಾಂಡಪ್ಪ ಮೇತ್ರೆ ಮುಂತಾದವರ ನೇತೃತ್ವದಲ್ಲಿ ಸಂಘವು ಉನ್ನತ ಮಟ್ಟದಲ್ಲಿ ಬೆಳೆಯಿತು ಎಂದರು.

ಅವರು ಮುಂದುವರಿದು, 1982ರಲ್ಲಿ ಸರ್ಕಾರದಿಂದ ನಿವೇಶನ ದೊರೆತಿದ್ದು, 2007□08ರಲ್ಲಿ ಮಾಜಿ ಸೈನಿಕರ ಕರ

ನಿವೇಶನ ವಿನಾಯಿತಿಯನ್ನು ಸಾಧಿಸಲಾಯಿತು. ಬೀದರ್ ಜಿಲ್ಲೆಯ ಮಾಜಿ ಸೈನಿಕರ ಸತತ ಪ್ರಯತ್ನದಿಂದ ಈಗ ಇಅಊಖ ಆಸ್ಪತ್ರೆ ಇಲ್ಲಿನ ಏರ್ ಫೋರ್ಸ್ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ನೂರಾರು ಮಾಜಿ ಸೈನಿಕರು ದಿನನಿತ್ಯ ಇದರ ಪ್ರಯೋಜನ ಪಡೆಯುತ್ತಿದ್ದಾರೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾಶಿನಾಥ್ ಬೆಲ್ದಾಳೆ, ಜಿಲ್ಲಾ ಅಧ್ಯಕ್ಷ ಪಾಂಡಪ್ಪ ಮೇತ್ರಿ ಸೇರಿದಂತೆ ಹಲವರು ಮಾತನಾಡಿದರು. ಈ ಸಂದರ್ಭ ಕರ್ನಲ್ ದೀಪಕ ಚೌಕಡ, ವೆಂಕಟರಾವ್ ತೆಲಂಗ, ಶಿವಕುಮಾರ್, ಎಂ.ಕೆ.ಹಬೀಬೋದಿನ್, ತುಕ್ಕಪ್ಪ, ಧನರಾಜ್, ಮೋಹನ್ ಬಚ್ಚಾ, ಶಂಕರಾವ್ ಬಿರಾದರ್, ರಾಜೇಶ್ ಚೆಲುವಾ, ವೆಂಕಟರಾವ್ ಜಾದವ್, ಸೇರಿದಂತೆ ಅನೇಕ ಮಾಜಿ ಸೈನಿಕರು ಮತ್ತು ಮಹಾರಾಷ್ಟ್ರ ಮಾಜಿ ಸೈನಿಕರು ಹಾಗೂ ವೀರನಾರಿಯರು ಉಪಸ್ಥಿತರಿದ್ದರು.

## ನಾಳೆ ಟೇಬಲ್ ಟೆನ್ನಿಸ್ ಪಂದ್ಯಾವಳಿಯ ಉದ್ಘಾಟನಾ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.28 : ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಬೀದರ ಹಾಗೂ ಅಲ್ಲಮಾ ಇಕ್ಬಾಲ್ ಪದವಿ ಪೂರ್ವ ಕಾಲೇಜು ಬೀದರ ಇವರ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್.30 ರಂದು ಬೆಳಿಗ್ಗೆ 9.30 ಗಂಟೆಗೆ ಅಲ್ಲಮಾ ಇಕ್ಬಾಲ್ ಪದವಿ ಪೂರ್ವ ಕಾಲೇಜು ಶಾಹಪೂರ ಗೇಟ್, ಶಾಹಿನ್ ನಗರ ಬೀದರದಲ್ಲಿ 2025-26ನೇ ಸಾಲಿನ ರಾಜ್ಯ ಮಟ್ಟದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಟೇಬಲ್ ಟೆನ್ನಿಸ್ ಪಂದ್ಯಾವಳಿಯ ಉದ್ಘಾಟನಾ ಸಮಾರಂಭ ಜರುಗಲಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಮಾಡಲಿದ್ದಾರೆ.

ಪೌರಾಡಳಿತ ಹಾಗೂ ಹಜ್ ಸಚಿವ ರಹೀಮ್ ಖಾನ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯ ಸಾಗರ ಈಶ್ವರ ಖಂಡ್ರೆ, ಔರಾದ (ಬಿ) ಶಾಸಕ ಪ್ರಭು ಬಿ.ಚವ್ಹಾಣ್, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕ, ಡಾ. ಸಿದ್ದು ಪಾಟೀಲ ಹಾಗೂ ವಿಧಾನ ಪರಿಷತ್ ಸದಸ್ಯರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಡಾ.ಎಂ.ಜಿ.ಮೂಳೆ,

ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಮಾಲಾ ನಾರಾಯಣರಾವ, ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕೃಷ್ಣಾ ಮೇಲ್ದಂಡೆ ಯೋಜನೆ (ಕಾಡಾ) ಭೀಮರಾಯನ ಗುಡಿ ಕಲಬುರಗಿಯ ಅಧ್ಯಕ್ಷರಾದ ಬಾಬು ಹೊನ್ನನಾಯ್ಕ, ಬೀದರ ನಗರಸಭೆ ಅಧ್ಯಕ್ಷ ಮಹಮ್ಮದ ಗೌಸ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಬೀದರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಅಮೃತರಾವ ಚಿಮಕೋಡೆ, ಬೀದರ ಶಾಹೀನ್ ಸಮೋಹ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ.ಅಬ್ದೂಲ್ ಖದೀರ್ ಇವರುಗಳು ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರುಗಳು ಭಾಗವಹಿಸಲಿದ್ದಾರೆ.

# ಕರ್ನಾಟಕ ಗ್ರಾಮೀಣ ಬ್ಯಾಂಕ್ ನಿಂದ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ.




ನಗರದ ಸ್ಟೇಷನ್ ರಸ್ತೆಯ ಶ್ರೀ ರಾಮ ಮಂದಿರ ಹತ್ತಿರವಿರುವ ಕರ್ನಾಟಕ ಗ್ರಾಮೀಣ ಬ್ಯಾಂಕ್ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ವ್ಯವಸ್ಥಾಪಕರಾದ ವಿಜಯ ಅಶೋಕ ದೋಟಿಹಾಳ ಇವರ ಅಧ್ಯಕ್ಷತೆಯಲ್ಲಿ ಭ್ರಷ್ಠಾಚಾರ ವಿರೋಧ್ಧಿ ಜಾಗೃತಿ ಅರಿವು ಸಪ್ತಾಹ ಜಾಥಾವನ್ನು ಕರ್ನಾಟಕ ಗ್ರಾಮೀಣ ಬ್ಯಾಂಕ್ ಆವರಣದಿಂದ ಡಾ.ಬಿ.ಆರ್. ಅಂಬೇಡ್ಕರ ವೃತ್ತದವರೆಗೆ ನಗರದ ಸರ್ವ ಶಾಖೆಗಳ ಸಿಬ್ಬಂಧಿಗಳೊಂದಿಗೆ ಜಾಗೃತ ಪಾದಯಾತ್ರಾ ನಡಿಗೆಯನ್ನು ಹಮ್ಮಿಕೊಳ್ಳಲಾತ್ತು. ಕರ್ನಾಟಕ ಗ್ರಾಮೀಣ ಬ್ಯಾಂಕ್ ಪ್ರತಿ ವರ್ಷ ಅಕ್ಟೋಬರ್/ನವೆಂಬರ್ ತಿಂಗಳಲ್ಲಿ ಕೇಂದ್ರ ಜಾಗೃತಿ ಆಯೋಗ (CVC) ನೀಡಿರುವ ನಿರ್ದೇಶನಗಳ ಪ್ರಕಾರ "ಜಾಗೃತಿ ವಾರ"ವನ್ನು ಆಚರಿಸುತ್ತದೆ. ಈ ವರ್ಷ, ಜಾಗೃತಿ ವಾರವನ್ನು 27 ಅಕ್ಟೋಬರದಿಂದ 02 ನವೆಂಬರ ವರೆಗೆ ಆಚರಿಸಲಾಗುವುದು. ಈ ವರ್ಷ ಜಾಗೃತಿ ವಾರವನ್ನು ಆಚರಿಸುವ ನಿರೂಪಣಾ ವಿಷಯ "ಜಾಗೃತಿ ನಮ್ಮ ಸಂಯುಕ್ತ ಹೊಣೆ ಎಂಬ ಘೋಷಣೆಯೊಂದಿಗೆ ಪ್ರಾರಂಭಿಸಲಾಯಿತು.

ಭ್ರಷ್ಟಾಚಾರವು ನಮ್ಮ ದೇಶದ ಆರ್ಥಿಕ, ರಾಜಕೀಯ ಮತ್ತು ಸಾಮಾಜಿಕ ಪ್ರಗತಿಗೆ ಪ್ರಮುಖ ಅಡಚಣೆಗಳೆಂದು ನಾವು ನಂಬಿದ್ದು, ಸರ್ಕಾರ ನಾಗರಿಕರು ಮತ್ತು ಖಾಸಗಿ ಕ್ಷೇತ್ರದಂತಹ ಎಲ್ಲಾ ಪಾಲುದಾರೆಗಳು ಭ್ರಷ್ಟಾಚಾರದ ನಿವಾರಣೆಗೆ ಒಟ್ಟಿಗೆ ಕೆಲಸ ಮಾಡಬೇಕು. ನಾವು ನಮಗಿರುವ ಹೊಣೆಗಾರಿಕೆಯನ್ನು ಉದಾಹರಣೆ ಮೂಲಕ ಮುನ್ನಡೆಸಲು ಮತ್ತು ಯಾವುದೇ ಭ್ರಷ್ಟಾಚಾರದ ಅಂಶಕ್ಕೆ ನಾವು ಭಾಗಿಯಾಗದಂತೆ ನೋಡಿಕೊಳ್ಳಲು ರಕ್ಷಣಾ ಕ್ರಮಗಳು, ಅಖಂಡತಾ ವಿನ್ಯಾಸಗಳು ಮತ್ತು ನೈತಿಕತೆ ಕೊಡನ್ನು ಸ್ಥಾಪಿಸುವ ಅಗತ್ಯವಿರುವುದನ್ನು ಒಪ್ಪಿಕೊಳ್ಳುತ್ತೇವೆ.

ವಾಥವುದವರೊಂದಿಗೆ ಮಾತನಾಡಿದ ಪ್ರಾದೇಶಿಕ ವ್ಯವಸ್ಥಾಪಕರಾದ ವಿಜಯ ಅಶೋಕ ದೋಟಿಹಾಳರವರು ಭ್ರಷ್ಟಾಚಾರವನ್ನು ನಿರ್ಮೂಲಗೊಳಿಸುವಲ್ಲಿ ಮತ್ತು ನಮ್ಮ ಎಲ್ಲಾ ಚಟುವಟಿಕೆಗಳಲ್ಲಿ ಅಖಂಡತೆ, ಪಾರದರ್ಶಕತೆ ಮತ್ತು ಉತ್ತಮ ಆಡಳಿತದ ಅತ್ಯುಚ್ಚ ಮಾನಕಗಳನ್ನು ಕಾಯ್ದುಕೊಳ್ಳುವಲ್ಲಿ ಮುಂದಾಳತ್ವ ವಹಿಸಲು ನಾವು ಬಧರಾಗಿದ್ದೇವೆ.

ಈ ಸಂದರ್ಭದಲ್ಲಿ ನಾಗೇಶ ಎಂ.ಸಿ. ಮುಖ್ಯ ವ್ಯವಸ್ಥಾಪಕರು, ವಿಜಯಕುಮಾರ ಹಿರಿಯ ವ್ಯವಸ್ಥಾಪಕರು,

ಶ್ರೀನಿವಾಸ ವ್ಯವಸ್ಥಾಪಕರು, ತೀನ್ ಕಂದೀಲ ಶಾಖೆ, ಮಂಜುನಾಥ್ ವ್ಯವಸ್ಥಾಪಕರು, ಐ.ಡಿ.ಎಸ್.ಎಂ.ಟಿ. ಲೇಔಟ್ ಶಾಖೆ, ಸುವರ್ಣ ವ್ಯವಸ್ಥಾಪಕರು, ಜವಾಹರನಗರ ಶಾಖೆ, ಅವಿನಾಶ ಯು. ವ್ಯವಸ್ಥಾಪಕರು, ರಾಜೇಂದ್ರ ಗಂಜ್ ಶಾಖೆ, ಹಾಗು ಪ್ರಾದೇಶಿಕ ಕಚೇರಿಯ ಸರ್ವ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಇಂದು "ವಿಶ್ವ ಪಾರ್ಶ್ವವಾಯು ದಿನ-2025" ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಅಕ್ಟೋಬರ್ 28-ರಾಷ್ಟ್ರೀಯ ಮಾನಸಿಕ ಹಾಗೂ ನರವಿಜ್ಞಾನಗಳ ಸಂಸ್ಥೆ ಬೆಂಗಳೂರು, ಜಿಲ್ಲಾ ಪಂಚಾಯತ್, ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ, ಸರ್ಕಾರಿ ಜಿಲ್ಲಾ ಆಸ್ಪತ್ರೆ ಜಿಮ್ಸ್ ಕಲಬುರಗಿ ಇವುಗಳ ಸಹಯೋಗದೊಂದಿಗೆ "ಪ್ರತಿ ನಿಮಿಷವು ಅಮೂಲ್ಯ" ಎಂಬ ಘೋಷವಾಕ್ಯದೊಂದಿಗೆ "ವಿಶ್ವ ಪಾರ್ಶ್ವವಾಯು ದಿನ-2025" ಕಾರ್ಯಕ್ರಮವನ್ನು ಇದೇ ಅಕ್ಟೋಬರ್ 29 ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ಜಿಮ್ಸ್ ಮೆಡಿಕಲ್ ಕಾಲೇಜಿನ ಎರಡನೇ ಮಹಡಿಯಲ್ಲಿನ ಮೈಕ್ರೋ ಬಯೋಲೋಜಿ ಹಾಲ್‌ದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಲಬುರಗಿ ವಿಭಾಗೀಯ ಸಹ ನಿರ್ದೇಶಕರ ಕಚೇರಿಯ ಉಪನಿರ್ದೇಶಕರುಗಳಾದ ಡಾ. ಶರಣಬಸಪ್ಪಾ ಗಣಜಲಖೇಡ ಮತ್ತು ಡಾ. ಅಂಬಾರಾಯ ರುದ್ರವಾಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ ಹಾಗೂ ಜಿಲ್ಲಾ ಆಸ್ಪತ್ರೆಯ ಜಿಮ್ಸ್‌ನ ಅಧೀಕ್ಷಕರು ಹಾಗೂ ಜಿಲ್ಲಾ ಶಸ್ತ್ರಜ್ಞರಾದ ಡಾ. ರುಖಿಯಾ ಅಸ್ನಾರಬಾ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಜಿಮ್ಸ್ ಮೆಡಿಕಲ್ ಕಾಲೇಜಿನ ಡಿನ್ ಕಮ್ ಡೈರೆಕ್ಟರ್‌ರಾದ ಡಾ. ಉಮೇಶ ಎಸ್.ಆರ್. ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕಲಬುರಗಿ ಜಿಲ್ಲಾ ಕುಷ್ಠರೋಗ ಅಧಿಕಾರಿ ಡಾ. ವಿವೇಕಾನಂದ ರೆಡ್ಡಿ, ಆರ್.ಸಿ.ಹೆಚ್.ಓ. ಡಾ. ಸಿದ್ರಾಮಪ್ಪ, ತಾಲೂಕು ಆರೋಗ್ಯ ಅಧಿಕಾರಿ ಡಾ. ಮಾರುತಿ ಕಾಂಬಳೆ, ಜಿಮ್ಸ್ ವೈದ್ಯಕೀಯ ಅಧೀಕ್ಷಕ ಡಾ. ಸಿ.ಆರ್. ಶಿವಕುಮಾರ್ ಹಾಗೂ ಕಲಬುರಗಿ ಜಿಮ್ಸ್ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲ ಡಾ. ಅಜಯಕುಮಾರ್ ಜಿ. ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ಜಿಮ್ಸ್ ಆಸ್ಪತ್ರೆ ಜಿಮ್ಸ್‌ನ ಆರ್.ಎಮ್.ಓ. ಡಾ. ನಾಗರಾಜ ಪಾಟೀಲ, ಓ.ಪಿ.ಡಿ. ಸರ್ಜನ್ ಡಾ. ಶಾಲಿನಿ ಸಜ್ಜನಶೆಟ್ಟಿ, ಜನರಲ್ ಮೆಡಿಸಿನ್ ಮುಖ್ಯಸ್ಥ ಡಾ. ದೊಡಮನಿ, ನರರೋಗ ತಜ್ಞರಾದ ಡಾ. ಆಕಾಶ ಅವಟೆ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ಜಿಲ್ಲಾ ಆಸ್ಪತ್ರೆಯ ಜಿಮ್ಸ್ ಮನೋರೋಗ ವಿಭಾಗದ ಮುಖ್ಯಸ್ಥ ಡಾ. ಪ್ರಭುಕಿರಣ ಗೋಗಿ, ನರರೋಗ ತಜ್ಞರಾದ ಡಾ. ಶ್ವೇತಾ ಪಾಟೀಲ ಅವರು ಅತಿಥಿ ಉಪನ್ಯಾಸ ನೀಡುವರು. ಜಿಲ್ಲಾ ಆಸ್ಪತ್ರೆ ಜಿಮ್ಸ್‌ನ "ಕಭಿ" ಜಿಲ್ಲಾ ಸಂಯೋಜಕ ಶಾಂತಿ ಜಕಾತಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

ಜಾಥಾಕ್ಕೆ ಚಾಲನೆ:

"ವಿಶ್ವ ಪಾರ್ಶ್ವವಾಯು ದಿನ-2025" ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಳ್ಳಲಾದ ಜಾಥಾಕ್ಕೆ ಅಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಆಸ್ಪತ್ರೆ ಜಿಮ್ಸ್ ಆವರಣದಲ್ಲಿ ಚಾಲನೆ ನೀಡಲಾಗುತ್ತದೆ. ಜಿಲ್ಲಾ ಆಸ್ಪತ್ರೆ ಜಿಮ್ಸ್ ಆವರಣದ ಮುಂಭಾಗದಿಂದ ಆರಂಭಗೊಂಡ ಜಾಥಾವು ಎಸ್.ಟಿ.ಬಿ.ಟಿ. ಮಾರ್ಗವಾಗಿ ಜಗತ್ ವೃತ್ತ, ಅನ್ನಪೂರ್ಣ ಕ್ರಾಸ್ ಮಾರ್ಗವಾಗಿ ಜಿಮ್ಸ್ ಆಸ್ಪತ್ರೆಗೆ ಬಂದು ಕೊನೆಗೊಳ್ಳಲಿದೆ.

# ಕರ್ನಾಟಕ ಮಾಧ್ಯಮ ಅಕಾಡೆಮಿಯಿಂದ ವಿವಿಧ ದತ್ತಿನಿಧಿ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಅಕ್ಟೋಬರ್ 28-ಕರ್ನಾಟಕ ಮಾಧ್ಯಮ ಅಕಾಡೆಮಿಯು 2025ನೇ ಸಾಲಿನ ವಿವಿಧ ದತ್ತಿನಿಧಿ ಪ್ರಶಸ್ತಿಗಳಿಗಾಗಿ ಪತ್ರಕರ್ತರಿಂದ ಲೇಖನಗಳನ್ನು ಆಹ್ವಾನಿಸಿದೆ.

ಕರ್ನಾಟಕಮಾಧ್ಯಮ ಅಕಾಡೆಮಿಯಲ್ಲಿ ರಾಜ್ಯದ ವಿವಿಧ ಮಾಧ್ಯಮ ಸಂಸ್ಥೆಗಳು ಈ ಕೆಳಕಂಡಂತೆ ದತ್ತಿನಿದಿ ಪ್ರಶಸ್ತಿಗಳನ್ನು ಸ್ಥಾಪಿಸಿವೆ: ಬೆಂಗಳೂರಿನ 'ಅಭಿಮಾನಿ ಪ್ರಕಾಶನ' ಸಂಸ್ಥೆಯು ರಾಜ್ಯ ಮತ್ತು ಜಿಲ್ಲಾಮಟ್ಟದ ಕನ್ನಡ ಪತ್ರಿಕೆಗಳಲ್ಲಿ 'ಸಾಮಾಜಿಕ ಸಮಸ್ಯೆ' ಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಲೇಖನ-ವರದಿಗಳಿಗೆ "ಅಭಿಮಾನಿ ಪ್ರಶಸ್ತಿ", ಮೈಸೂರಿನ "ಮೈಸೂರು ದಿಗಂತ" ಪತ್ರಿಕಾ ಸಂಸ್ಥೆಯು "'ಮಾನವೀಯ ಸಮಸ್ಯೆ' ಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಲೇಖನ-ವರದಿಗಳಿಗೆ "ಮೈಸೂರು ದಿಗಂತ ಪ್ರಶಸ್ತಿ", ಬೆಂಗಳೂರಿನ ಅಭಿಮನ್ಯು ಪತ್ರಿಕೆ ಸಂಸ್ಥೆಯು ದಮನಿತ ಸಮುದಾಯಗಳ ಪರ ದನಿಯಾದ ಅತ್ಯುತ್ತಮ ಲೇಖನ/ಅಂಕಣ/ಸಂಪಾದಕೀಯ/ಪರಿಣಾಮಕಾರಿ ವರದಿಗೆ "ಅಭಿಮನ್ಯು ಪ್ರಶಸ್ತಿ", ಬೆಂಗಳೂರಿನ " ಪ್ರಜಾ ಸಂದೇಶ ಪತ್ರಿಕಾ ಸಂಸ್ಥೆಯು ಶೋಷಣೆಯನ್ನು ಪರಿಣಾಮಕಾರಿಯಾಗಿ ಬಿಂಬಿಸುವ ಲೇಖನಕ್ಕೆ : ಪ್ರಜಾ ಸಂದೇಶ ದತ್ತಿ ಪ್ರಶಸ್ತಿ"ಗಳನ್ನು ಸ್ಥಾಪಿಸಿವೆ. ಈ ದತ್ತಿ ಪ್ರಶಸ್ತಿಗಳು ತಲಾ ಹತ್ತು ಸಾವಿರ ರೂ ನಗದು ಬಹುಮಾನ ಒಳಗೊಂಡಿವೆ.

ಈ ಪ್ರಶಸ್ತಿಗಳಿಗೆ ಆಸಕ್ತ ಪತ್ರಕರ್ತರು 01-01-2025 ರಿಂದ 25-10-2025ರ ವರೆಗೆ ಪ್ರಕಟವಾಗಿರುವ ತಮ್ಮ ಒಂದು ಲೇಖನ-ವರದಿಯನ್ನು ಕಳುಹಿಸ ಬಹುದು.

ಕನ್ನಡ ದೈನಿಕ-ಟಿವಿ-ವಾಹಿನಿ, ವಾರ ಪತ್ರಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರು ಹೆಸರು (ಬೈಲೈನ್) ಬರೆದಿರುವ ವರದಿ ಲೇಖನಿಗಳಿಗೆ ಮಾತ್ರ ಪ್ರಶಸ್ತಿಗೆ ಅವಕಾಶ. ಲೇಖನ-ವರದಿಗಳಲ್ಲಿ ಹೆಸರು (ಬೈಲೈನ್) ಪ್ರಕಟವಾಗದಿದ್ದಲ್ಲಿ ಸಂಬಂಧಿಸಿದ ಪತ್ರಿಕೆಯ ಸಂಪಾದಕರಿಂದ ದೃಢೀಕರಣ ಪತ್ರವನ್ನು ಪಡೆದು ಕಳುಹಿಸಬೇಕು. ಲೇಖನ ವರದಿಗಳ ಲಕೋಟೆಯಲ್ಲಿ ಯಾವ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸುತ್ತಿರುವುದು ಎಂಬುದನ್ನು 'ಅಭಿಮಾನಿ ಪ್ರಶಸ್ತಿ- 2025' , 'ಮೈಸೂರು ದಿಗಂತ ಪ್ರಶಸ್ತಿ-2025', "ಅಭಿಮನ್ಯು ಪ್ರಶಸ್ತಿ-2025" ಹಾಗೂ "ಪ್ರಜಾ ಸಂದೇಶ ದತ್ತಿ ಪ್ರಶಸ್ತಿ-2025" ಎಂದು ಸ್ಪಷ್ಟವಾಗಿ ಬರೆದು ಲೇಖನಗಳನ್ನು ಇದೇ 12-11-2025 ರ ಒಳಗಾಗಿ ಕಾರ್ಯದರ್ಶಿ, ಕರ್ನಾಟಕ ಮಾಧ್ಯಮ ಅಕಾಡೆಮಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560001. ಇವರಿಗೆ ಅಂಚೆ ಮೂಲಕ ಅಥವಾ ಖುದ್ದಾಗಿ ತಲುಪಿಸ ಬಹುದು ಎಂದು ಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿ ಆಯೇಶಾ ಖಾನಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ

# ಮತದಾರರ ನೋಂದಣಿಗೆ ಮುತುವರ್ಜಿ ವಹಿಸಿ ಜಿ.ಪಂ. ಉಪಕಾರ್ಯದರ್ಶಿ. ಲಕ್ಷ್ಮಣ ಶೃಂಗೇರಿ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಅ.28-ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾ ಮತದಾರರ ನೋಂದಣಿ ಪ್ರಕ್ರಿಯೆ ಈಗಾಗಲೇ ಆರಂಭವಾಗಿದ್ದು, ನಿರೀಕ್ಷಿತ ಮಟ್ಟದಲ್ಲಿ ನೋಂದಣಿಗೆ ಅಧಿಕಾರಿಗಳು ಮುತುವರ್ಜಿ ವಹಿಸಬೇಕೆಂದು ಎಂದು ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ ಹೇಳಿದರು.



ಅವರು ಇಂದು ಕೆ.ಬಿ.ಎನ್. ಇಂಜಿನಿಯರಿಂಗ್ ಕಾಲೇಜಿನ ಸಭಾಂಗಣದಲ್ಲಿ ಭಾರತ ಚುನಾವಣಾ ಆಯೋಗ ಜಿಲ್ಲಾಡಳಿತ ಮತ್ತು ಜಿಲ್ಲಾ ಸ್ವೀಪ್ ಕಲಬುರಗಿ ಮತದಾರರ ಜಾಗೃತಿ ಅಭಿಯಾನದಲ್ಲಿ ಭಾಗವಹಿಸಿ ಮಾತನಾಡಿದರು. ಎಲ್ಲಾ ಅರ್ಹ ಮತದಾರರ ನೋಂದಣೆಯನ್ನು ಮಾಡಲು ಅಕ್ಟೋಬರ್ 30 ಹಾಗೂ ನವೆಂಬರ್ 03 ರಂದು ಮತದಾರರು ಮಿಂಚಿನ ನೋಂದಣಿ ಅಭಿಯಾನ ಆಯೋಜಿಸಲಾಗಿದೆ.

01-11-2025ಕ್ಕೆ ಅರ್ಹತಾ ದಿನಾಂಕಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಕ್ಷೇತದಾದ್ಯಂತ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಕ್ಷೇತ್ರದಾದ್ಯಂತ ನಡೆದಿದ್ದು, ಅರ್ಹ ಮತದಾರರು ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ನವೆಂಬರ್ 6 ಕೊನೆಯ ದಿನವಾಗಿದೆ. ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯಬಾರದು ಎಂದರು.

ಅಭಿಯಾನದ ದಿನಗಳಂದು ತಮ್ಮ ಕ್ಷೇತ್ರವ್ಯಾಪ್ತಿಗೆ ಒಳಪಡುವ ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳ ಸೇವೆಯನ್ನು ಪಡೆದು ಅರ್ಹ ಶಿಕ್ಷಣ ಸಂಸ್ಥೆಗಳನ್ನು ಗುರುತಿಸಿ ಅಲ್ಲಿ ನೋಂದಣಿಗಾಗಿ ಅರ್ಹರಿರುವ ಮತದಾರರ ಕಚೇರಿ ಮುಖ್ಯಸ್ಥರ ಸಂಪರ್ಕಿಸಿ ನಿಗದಿಪಡಿಸಿದ ಸಮಯದೊಳಗೆ ನಿಯಮಾನುಸಾರ ನಮೂನೆ-19 ರ ಅರ್ಜಿಯೊಂದಿಗೆ ಪೂರಕ ದಾಖಲೆಗಳನ್ನು ಕಲಬುರಗಿ ಮಹಾನಗರ ಪಾಲಿಕೆ ಹಾಗೂ ತಹಶೀಲ್ದಾರ ಕಚೇರಿಗೆ ಸಲ್ಲಿಸಬೇಕು ಎಂದರು. ಜಿಲ್ಲೆಯ ಎಲ್ಲಾ ಶಾಲಾ ಕಾಲೇಜು ವಿದ್ಯಾಸಂಸ್ಥೆ, ವಿಶ್ವವಿದ್ಯಾಲಯಗಳಿಗೆ ಈಗಾಗಲೇ ನಮೂನೆ 19 ಅರ್ಜಿಗಳನ್ನು ವಿತರಣೆ ಮಾಡಲಾಗಿದೆ.

ಅಭಿಯಾನದಲ್ಲಿ ಎಲ್ಲ ಅರ್ಹ ಶಿಕ್ಷಕರು ಹಾಗೂ ಡೀನ್‌ಗಳು ನಮೂನೆ 19ರ ಅರ್ಜಿ ಪಡೆದುಕೊಂಡರು. ಅಭಿಯಾನದಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಹ್ಮದ್ ಸೈಯದ್ ಪಟೇಲ್ ಸೇರಿದಂತೆ ಶಾಲಾ ಶಿಕ್ಷಕರು, ಕಾಲೇಜಿನ ಡೀನರು ಭಾಗವಹಿಸಿದರು.

# ಗುರುವಿನ ಋಣ ತೀರಿಸಲಾಗದು




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಅ 28 ಗುರುವಿನ ಸೇವೆ ಎಷ್ಟು ಮಾಡಿದರೂ ಸಹ ಕಡಿಮೆ ಗುರುವಿನ ಋಣ ತೀರಿಸಲಾಗದು. ಎಂದು ನಿವೃತ್ತ ಮುಖ್ಯಗುರುಗಳಾದ ವೆಂಕಟ ಪುಣೆ ತಿಳಿಸಿದರು. ತಾಲೂಕಿನ ಸರ್ಕಾರಿ ಪ್ರೌಢಶಾಲೆ ಅಲಗೂಡನಲ್ಲಿ ನಲ್ಲಿ 2010-11 ನೇ ಸಾಲಿನ ವಿದ್ಯಾರ್ಥಿನಿಯರಿಂದ ಹಮ್ಮಿಕೊಂಡ ಗುರುವಂದನಾ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಇಂತಹ ಗುರುಗಳನ್ನು ಸ್ಮರಿಸಿ ಸನ್ಮಾನಿಸಿರುವುದು ಶ್ಲಾಘನೀಯ ಎಂದರು. ಸದರಿ ಶಾಲೆಯಲ್ಲಿ ಸೇವೆ ಸಲ್ಲಿಸಿದ ಸರ್ಕಾರಿ ಪ್ರೌಢಶಾಲೆ ಚಿಟ್ಟಾ (ಕೆ) ಮುಖ್ಯ ಗುರುಗಳಾದ ಗೋವಿಂದರಾವ್ ಪಾಟೀಲ್. ಸರ್ಕಾರಿ ಪ್ರೌಢಶಾಲೆ ಏಕಂಬಾ ಶಿಕ್ಷಕಿಯರಾದ ರೇವತಿ ಕುಲಕರ್ಣಿ. ಸದರಿ ಶಾಲೆಯ ಶಿಕ್ಷಕಿಯರಾದ ಸುಜಾತ ಖೈರಾಟಕರ್ ಮತ್ತು ಸರ್ಕಾರಿ ಪದವಿಪೂರ್ವ ಕಾಲೇಜು ಚಿತ್ರಕಲಾ ಶಿಕ್ಷಕರಾದ ವೀರೇಶ ಹೆಗ್ಗೆ. ವಿಜ್ಞಾನ ಶಿಕ್ಷಕರಾಗಿದ್ದ ಅಪ್ಪಾರಾವ. ಹಾಗೂ ಎಸ್ಡಿಎಂಸಿ ಲಕ್ಷ್ಮಣ ಉಕ್ಕಾವಾಲೆ. ರವರು ಸನ್ಮಾನ ಗೊಂಡು ಮಾತನಾಡಿದರು. ಭೌಧ್ಧ ಪ್ರಕಾಶ್ ಸಿಂಗ್. ರಾಜಕುಮಾರ ಬಿರಾದಾರ್. ನಾಗಪ್ಪ ನಿಣ್ಣೆ. ಬೊಮ್ಮಲಿಂಗಪ್ಪ ಕೆ. ಶ್ರೀ ರಾಮ ಅಲಗೂಡೆ. ದೇವಿಕಾ ರಾಜೋಳೆ. ಸುಚಿತಾ ಮೇತ್ರೆ ಇನ್ನಿತರರು. ವಿದ್ಯಾರ್ಥಿಗಳಾದ ವೀರನಾಥ್ ಭ್ಯಾಡಗೆ. ನೇತಾಜಿ. ಜಿತೇಂದ್ರ. ಉತ್ತಮ್ ಬಾಯಿ. ಕೋಮಲ್. ಉಷಾಬಾಯಿ. ಭಾಗ್ಯಶ್ರೀ. ಜೋಷ್ನಾ ಸೇರಿದಂತೆ ಎಲ್ಲಾ ಶಿಕ್ಷಕರಿಗೆ ಸನ್ಮಾನಿಸಿ ನೆನಪಿನ ಕಾಣಿಕೆ ಕೊಟ್ಟು ಗೌರವಿಸಿದರು ಕಾರ್ಯಕ್ರಮದ ಅಧ್ಯಕ್ಷತೆ ಶಾಲೆಯ ಮುಖ್ಯ ಗುರುಗಳಾದ ರಮೇಶ್ ರಾಜೋಳೆ ವಹಿಸಿ ಮಾತನಾಡಿದರು ಗುರು ಶಿಷ್ಯರ ಸಂಬಂಧ ಹೇಗಿರುತ್ತದೆ ಎಂಬುದನ್ನು ನೋಡಬೇಕಾದರೆ ಈ ಕಾರ್ಯಕ್ರಮವೇ ಸಾಕ್ಷಿ ಎಂದು ಹೇಳಿದರು.

# ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಅ.28-2025-26ನೇ ಶೈಕ್ಷಣಿಕ ಸಾಲಿಗೆ ಕಲಬುರಗಿಯ ಗುಲಬರ್ಗಾ ವಿಶ್ವವಿದ್ಯಾಲಯದ ಮುಖ್ಯ ಆವರಣ ಹಾಗೂ ಆಳಂದ ಸ್ನಾತಕೋತ್ತರ ಕೇಂದ್ರದಲ್ಲಿ ಬೋಧನಾ ಕಾರ್ಯದ ನಿರ್ವಹಣೆಗಾಗಿ ಯು.ಜಿ.ಸಿ. ನಿಯಮಾನುಸಾರ ಬೋಧನಾ ಕಾರ್ಯ ಅನುಗುಣವಾಗಿ ಪೂರ್ಣಕಾಲಿಕ/ಅರೆಕಾಲಿಕ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ (ಕಾರ್ಯಬಾಹುಳ್ಯಕ್ಕೆ ಅನುಗುಣವಾಗಿ) ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿಯ ಗುಲಬರ್ಗಾ ವಿಶ್ವವಿದ್ಯಾಲಯದ ಕುಲಸಚಿವರು ತಿಳಿಸಿದ್ದಾರೆ. ಕಲಬುರಗಿಯ ಗುಲಬರ್ಗಾ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿನ ಸ್ನಾತ-ಕೋತ್ತರ ವಿಭಾಗಗಳಾದ ಸಸ್ಯಶಾಸ್ತ್ರ, ಜೀವರಸಾಯನಶಾಸ್ತ್ರ, ಪ್ರಾಣಿಶಾಸ್ತ್ರ, ಪರಿಸರ ವಿಜ್ಞಾನ, ಜೈವಿಕ ತಂತ್ರಜ್ಞಾನ, ರಸಾಯನಶಾಸ್ತ್ರ (ಫಿಜಿಕಲ್ ಕೆಮಿಸ್ಟ್ರಿ, ಇನ್‌ಆರ್ಗನಿಕ್ ಕೆಮಿಸ್ಟ್ರಿ, ಆರ್ಗನೇಕ್ ಕೆಮಿಸ್ಟ್ರಿ ಮತ್ತು ಅನಾಲೆಟಿಕಲ್ ಕೆಮಿಸ್ಟ್ರಿ), ಸೂಕ್ಷ್ಮಜೀವಶಾಸ್ತ್ರ, ಗಣಕ ವಿಜ್ಞಾನ (ಎಂ.ಸಿ.ಎ., ಎಂ.ಎಸ್ಸಿ. (ಗಣಕ ವಿಜ್ಞಾನ), ಸಂಖ್ಯಾಶಾಸ್ತ್ರ, ಭೌತಶಾಸ್ತ್ರ, ಗಣಿತಶಾಸ್ತ್ರ, ಅರ್ಥಶಾಸ್ತ್ರ, ಇತಿಹಾಸ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ, ಸಮಾಜಕಾರ್ಯ, ಸಮಾಜಶಾಸ್ತ್ರ, ಮನೋವಿಜ್ಞಾನ, ರಾಜ್ಯಶಾಸ್ತ್ರ, ಕನ್ನಡ, ಪಾಲಿ ಮತ್ತು ಬೌದ್ಧ ಅಧ್ಯಯನ, ಇಂಗ್ಲೀಷ, ಮರಾಠಿ, ಸಂಗೀತ, ಹಿಂದಿ, ಸಂಸ್ಕೃತ, ಉರ್ದು ಮತ್ತು ಪರ್ಶಿಯನ್, ದೃಶ್ಯಕಲಾ (ಎಂ.ವಿ.ಎ. ಪೇಂಟಿಂಗ್, ಎಂ.ವಿ.ಎ. ಸ್ಕಲ್ಪಚರ್), ನಿರ್ವಹಣಾಶಾಸ್ತ್ರ, ವಾಣಿಜ್ಯ ಎಂ.ಕಾಂ., ಶಿಕ್ಷಣ ಮತ್ತು ಕಾನೂನು ಹಾಗೂ ಆಳಂದ ಸ್ನಾತಕೋತ್ತರ ಕೇಂದ್ರದಲ್ಲಿ ವಾಣಿಜ್ಯ, ಗಣಕ ವಿಜ್ಞಾನ, ಗಣಿತ, ಇಂಗ್ಲೀಷ ಹಾಗೂ ಕನ್ನಡ ವಿಭಾಗಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಕೆ ಪ್ರಕ್ರಿಯೆಯು ಈಗಾಗಲೇ ಅಕ್ಟೋಬರ್ 27 ರಿಂದ ಆರಂಭಗೊಂಡಿದ್ದು, ಅರ್ಜಿ ಸಲ್ಲಿಕೆಗೆ ನವೆಂಬರ್ 7 ರಂದು ಕೊನೆಯ ದಿನವಾಗಿದೆ. ವಿವಿಧ ಅಧ್ಯಯನ ವಿಭಾಗಗಳ ಮುಖ್ಯಸ್ಥರು ಮೆರಿಟ್ ಲಿಸ್ಟ್‌ನ್ನು ಆಡಳಿತ ವಿಭಾಗಕ್ಕೆ ಸಲ್ಲಿಸಲು ಕೊನೆಯ ದಿನ ನವೆಂಬರ್ 10 ರಿಂದ 12 ರವರೆಗೆ ಇರುತ್ತದೆ. ನವೆಂಬರ್ 14 ರಂದು ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಿಸಲಾಗುತ್ತದೆ.

ಅಭ್ಯರ್ಥಿಗಳು ಆಕ್ಷೇಪಣೆ ಸಲ್ಲಿಕೆಗೆ ನವೆಂಬರ್ 17 ರಂದು ಕೊನೆಯ ದಿನವಾಗಿದೆ.

ನವೆಂಬರ್ 18 ರಂದು ಅಂತಿಮ ಮೆರಿಟ್ ಪಟ್ಟಿ ಪ್ರಕಟಿಸಲಾಗುತ್ತದೆ. ನವೆಂಬರ್ 24 ರಿಂದ ಸಂದರ್ಶನ ಪ್ರಾರಂಭವಾಗಲಿದೆ. ಸಾಮಾನ್ಯ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕ 600 ರೂ. ಹಾಗೂ ಪ.ಜಾ./ಪ.ಪಂ, ಪ್ರವರ್ಗ-1 ಅಭ್ಯರ್ಥಿಗಳಿಗೆ 300 ರೂ. ನಿಗದಿಪಡಿಸಲಾಗಿದೆ.

ಅತಿಥಿ ಉಪನ್ಯಾಸಕರನ್ನು ಯು.ಜಿ.ಸಿ. ಹಾಗೂ ಕಾಲಕಾಲಕ್ಕೆ ಹೊರಡಿಸುವ ಸರ್ಕಾರಿ ನಿಯಮಾವಳಿಯ ಪ್ರಕಾರ ನೇಮಕ ಮಾಡಲಾಗುತ್ತದೆ. ಈ ಹುದ್ದೆಗಳು ಸಂಪೂರ್ಣವಾಗಿ ತಾತ್ಕಾಲಿಕವಾಗಿದ್ದು, 2025-26ನೇ ಶೈಕ್ಷಣಿಕ ಸಾಲಿಗೆ ಮಾತ್ರ ಸೀಮಿತವಾಗಿದ್ದು, ಯಾವುದೇ ಕಾರಣವನ್ನು ನೀಡದೇ ಯಾವುದೇ ಸಮಯದಲ್ಲಿ ರದ್ದುಗೊಳಿಸಲಾಗುತ್ತದೆ.

ವಿವಿಧ ವಿಭಾಗಗಳ ವಿವರವನ್ನು ಹಾಗೂ ನಿಗದಿತ ಅರ್ಜಿ ನಮೂನೆಯನ್ನು ವಿಶ್ವವಿದ್ಯಾಲಯದ www.gug.ac.in ವೆಬ್‌ಸೈಟ್‌ದಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು. ಭರ್ತಿ ಮಾಡಿದ ಅರ್ಜಿ ನಿಗದಿತ ಶುಲ್ಕ ಮತ್ತು ಲಗತ್ತುಗಳೊಂದಿಗೆ ಶೈಕ್ಷಣಿಕ ಅರ್ಹತೆ, ಅನುಭವದ ವಿವರ, ಜಾತಿ, ವರ್ಗ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಗೆಜೆ-ಟೆಡ್ ಅಧಿಕಾರಿಯಿಂದ ದೃಢೀಕರಿಸಿದ ಪ್ರತಿಗಳನ್ನು ಕಡ್ಡಾಯವಾಗಿ ಸಲ್ಲಿಸಬೇಕು.

ಸಂದರ್ಶನದ ದಿನಾಂಕ ಮತ್ತು ಸಮಯವನ್ನು ಹಾಗೂ ಇದಕ್ಕೆ ಸಂಬಂಧಿಸಿದ ಇನ್ನಿತರೆ ಮಾಹಿತಿಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ದಲ್ಲಿ ಪ್ರಕಟಿಸಲಾಗುತ್ತದೆ. ಅಭ್ಯರ್ಥಿಗಳು ವಿಶ್ವವಿದ್ಯಾಲಯದ ವೆಬ್‌ಸೈಟ್ ಗಮನಿಸಬೇಕು. ಅತಿಥಿ ಉಪನ್ಯಾಸಕರ ನೇಮಕಾತಿಗಳು ಷರತ್ತಿಗೆ ಒಳಪಟ್ಟಿರುತ್ತವೆ. ಹಾಗೆ ನೇಮಕಗೊಂಡ ಅತಿಥಿ ಉಪನ್ಯಾಸಕರು ತಮ್ಮ ಸೇವೆಯನ್ನು ಕ್ರಮಬದ್ಧಗೊಳಿಸಲು ಯಾವುದೇ ಹಕ್ಕನ್ನು ಹೊಂದಿರುವುದಿಲ್ಲ.

ಭರ್ತಿ ಮಾಡಿದ ಅರ್ಜಿಯೊಂದಿಗೆ ಎಲ್ಲಾ ಅವಶ್ಯಕ ದಾಖಲೆಗಳನ್ನು ಲಗತ್ತಿಸಿ ಕಲಬುರಗಿ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿನ ವಿಭಾಗದ ಮುಖ್ಯಸ್ಥರ ಕಚೇರಿಗೆ ಖುದ್ದಾಗಿ/ ರಜಿಸ್ಟರ್ಡ್ ಅಂಚೆ ಮೂಲಕ 2025ರ ನವೆಂಬರ್ 7 ರೊಳಗಾಗಿ ತಲುಪುವಂತೆ ಸಲ್ಲಿಸಬೇಕು. ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

# 2025 ರ ಕನ್ನಡ ರಾಜ್ಯೋತ್ಸವದ ಗುಂಪು ಸ್ಪರ್ಧೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:ಹುಲಸೂರ:-ಅ 28 ಕನ್ನಡ ರಾಜ್ಯೋತ್ಸವದ ನಿಮಿತ್ಯ ಆಯೋಜಿಸಿರುವ ಗುಂಪು ಸ್ಪರ್ಧೆಗಳಿಗೆ ಸರ್ಕಾರಿ ನೌಕರರಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಹುಲಸೂರ ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ನಾಗರಾಜ ಹಾವಣ್ಣಾ ತಿಳಿಸಿದ್ದಾರೆ. ರಾಜ್ಯ ಸರ್ಕಾರಿ ನೌಕರರ ಸಂಘ ಬೆಂಗಳೂರು ವತಿಯಿಂದ 2025 ನೇ ವರ್ಷದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ನವೆಂಬರ್ ತಿಂಗಳಿನಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಜನಪದ /ಚಿತ್ರಗೀತೆಗಳ ಸಾಮೂಹಿಕ ನೃತ್ಯ (ಗುಂಪು ಸ್ಪರ್ಧೆ) ಆಯೋಜಿಸಲಾಗಿದೆ. ಪ್ರಥಮ ಬಹುಮಾನ 1ಲಕ್ಷ, ದ್ವಿತೀಯ-75,000. ತೃತೀಯ-50,000. ಸಮಾಧಾನಕರ 20,000. ಬಹುಮಾನ ನೀಡಲಾಗುತ್ತಿದ್ದು, ಆದ್ದರಿಂದ ಸರ್ಕಾರಿ ನೌಕರರು



ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು ನವೆಂಬರ್ 2 ಕೊನೆ ದಿನ. ನಿಗದಿತ ದಿನದೊಳಗೆ ಅರ್ಜಿ ಸಲ್ಲಿಸಬಹುದು. ಆನ್ಲೈನ್ ಲಿಂಕ್: https://forms.gle/8pR3m5nXowwQzccs9

ಅರ್ಜಿ ಸಲ್ಲಿಕೆ ಸಹಾಯಕ್ಕಾಗಿ ಸಂಪರ್ಕಿಸಿ: ಗುರುಪ್ರಸಾದ್-9886116622. ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದ್ದಾರೆ

# ಸಿಂಧನಕೇರಾದಲ್ಲಿ ಅ. 30 ರಂದು ಕಾನೂನು ಅರಿವು ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಜನಸಾಮ್ಯಾರಿಗೆ ಕಾನೂನು ಅರಿವು ಮೂಡಿಸುವ ಕಾರ್ಯಕ್ರಮವನ್ನು ಅಕ್ಟೋಬರ್ 30 ರಂದು ಶೇಕ್ ಫಿರ್ದೋಸ್ ಸ್ನೇಹಿತರ ಬಳಗದ ವತಿಯಿಂದ ಸಿಂಧನಕೇರಾ ಗ್ರಾ.ಪಂ.ನಲ್ಲಿ ಜರುಗಲಿದೆ. ದಿವ್ಯಸಾನ್ನಿಧ್ಯವನ್ನು ಮಹಮ್ಮದ ಇಬ್ರಾಹಿಂ ಸಾಹೇಬ್ ಬಗ್ದಲ್ ವಹಿಸುವರು. ಸಿಂಧನಕೇರಾ ಗ್ರಾಮದ ಎಲ್ಲಾ ಶಾಲಾ ಮಕ್ಕಳಿಗೆ ವರಿಷ್ಠಾಧಿಕಾರಿ ಪ್ರದೀಪ ಗುಂಟೆರವರು ನೋಟ್‌ಬುಕ್ ವಿತರಣೆ ಮಾಡುವರು. ಕಾರ್ಯಕ್ರಮದ ಉದ್ಘಾಟಕರಾಗಿ ತಹಸೀಲ್ದಾರ್ ಅಂಜುಮ್ ತಬಸುಮ್ ಆಗಮಿಸುವರು. ಮುಖ್ಯ ಅತಿಥಿಗಳಾಗಿ ಚಿಟಗುಪ್ಪ ತಹಸೀಲ್ದಾರ್ ಮಂಜುನಾಥ ಪಂಚಾಳ, ಡಿವೈಎಸ್‌ಪಿ ಮಡಿವಾಳಪ್ಪ ಪಿ.ಎಸ್., ಸಿಪಿಐ ಗುರು ಪಾಟೀಲ, ಚಿಟಗುಪ್ಪ ಸಿಪಿಐ ಶ್ರೀನಿವಾಸ್ ಅಲ್ಲಾಪೂರೆ, ಹುಮನಾಬಾದ ಪಿಎಸ್ಐ ಸುರೇಶ್ ನಾಯ್ಕ, ಚಿಟಗುಪ್ಪ ಪಿಎಸ್ಐ ಬಸವಲಿಂಗಪ್ಪಾ, ಹುಮನಾಬಾದ ಸಂಚಾರಿ ಠಾಣೆಯ ಪಿಎಸ್ಐ ಹುಲೇಪ್ಪ ಗೌಡಗೊಂಡ, ಹುಮನಾಬಾದ ಕಂದಾಯ ಇಲಾಖೆಯ ಅಧಿಕಾರಿ ರಾಹುಲ್ ಪ್ರಸಾದ್ ಭಾಗವಹಿಸುವರು. ಅತಿಥಿಗಳಾಗಿ ಸಿಂಧನಕೇರಾ ಪಿಡಿಓ ಗ್ರಾಮ ಪಂಚಾಯತ್ ಅಧಿಕಾರಿ ಶ್ರೀಮತಿ ಸುಗಂಧಾ ಎಸ್, ಸಿಂಧನಕೇರಾ ಗ್ರಾಮ ಪಂಚಾಯತ್ ಅಧ್ಯಕ್ಷ ರವಿಕಾಂತ್ ಮಿತ್ರಾ, ಹುಮನಾಬಾದ ಸಮಾಜ ಸೇವಕರಾದ ಅನೀಲ ದೊಡ್ಡಿ, ಗ್ರಾಮದ ಮುಖಂಡರಾದ ಶೇಖ್ ಮಕ್ಸೂದ್, ಬೀದರ ಪ್ರೌಢ ಶಾಲೆಯ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಮಹಬೂಬ ಪಟೇಲ್, ಚಿಟಗುಪ್ಪ ಸಮಾಜ ಸೇವಕ ನುಜಾಮೋದ್ದಿನ್ ಹಕೀಂ ಭಾಗವಹಿಸುವರು. ಹುಮನಾಬಾದ ತಾಲ್ಲೂಕಿನ ಎಲ್ಲಾ ಪತ್ರಿಕಾ ಬಾಂಧವರಿಗೂ ಹಾಗೂ ಮಾಧ್ಯಮ ಮಿತ್ರರಿಗೂ ಸನ್ಮಾನಿಸಲಾಗುವುದು ಎಂದು ಶೇಕ್ ಫಿರ್ದೋಸ್ ಸ್ನೇಹಿತರ ಬಳಗ ತಿಳಿಸಿದೆ.

**PAPER PUBLICATION**
**IN THE COURT OF THE II ADDL. SR. CIVIL JUDGE AT BIDAR**
**MVC NO.616/2023**

Md. Sohail ...... Claimant

**//Versus//**

Anilkumar and others .... Respondents

Sub:- Claim petition Under Section 166 of Motor Vehicle Act 1988.

To,

Anilkumar s/o Shamrao Rathod, Age: Major, Occu: Business, R/oTilaka Nagar, Kalburgi, Tq. Kalburgi.

(Owner of Car bearing Reg. No.KA-32 Z-1728).

Whereas the above named claimant, has filed the claim petition U/s 166 of M.V Act through his counsel Shivsharnappa Patil Advocate Bidar against the respondents for grant of compensation on account of accidental injuries sustained by him in a motor vehicle accident and this court has issued the notices on several times, through the court also through Regd.post, which were got returned un-served, which shows that you are willfully and deliberately avoiding the service of notice.

Therefore you are hereby directed to appear before this court on 24/11/25 at 11.00 am, either in person or through your pleader duly instructed to answer the claim of claimant, failing which the claim petition will be heard and decided in you absence, in accordance with law.

Given under my hand and seal of the Court on this the 09th day of October 2025 at Bidar.

**//BY ORDER OF THE COURT//**
**Chief Ministerial Officer,**
**ADDL: Civil Judge at Bidar.**

# ಅಂಗಡಿ ಗ್ಯಾರೇಜ್, ಹೊಟೇಲ್ ಹಠಾತ್ ದಾಳಿ: ತಪಾಸಣೆ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 28 : ಯಾದಗಿರಿ ನಗರದ ವಿವಿಧ ಅಂಗಡಿ ವಾಣಿಜ್ಯ ಸಂಸ್ಥೆಗಳ ಮಾಲೀಕರಿಗೆ "ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986, ತಿದ್ದುಪಡಿ 2016"ರ ಕುರಿತು ಜಾಗೃತಿ ಮೂಡಿಸಲಾಯಿತು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕರಾದ ಶ್ರೀ ರಿಯಾಜ್ ಪಟೇಲ್ ವರ್ಕನಳ್ಳಿ ಅವರು ಹೇಳಿದರು.


ಯಾದಗಿರಿ ನಗರದ ಇಂದು ಅ.28ರ ಮಂಗಳವಾರ ರಂದು ಚಿತ್ತಾಪೂರ ರಸ್ತೆಯಲ್ಲಿರುವ ಕಾರ್ಮಿಕ ನಿರೀಕ್ಷಕರ ನೇತೃತ್ವದಲ್ಲಿ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು, ಗ್ಯಾರೇಜ್‌ಗಳು ಮತ್ತು ಹೊಟೇಲ್‌ಗಳಲ್ಲಿ ಹಠಾತ್ ದಾಳಿ, ತಪಾಸಣೆ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯನ್ನು ಬಾಲಕಾರ್ಮಿಕ ಮುಕ್ತ ಜಿಲ್ಲೆಯನ್ನಾಗಿಸಬೇಕೆಂದು ಕಾರ್ಮಿಕ ಇಲಾಖೆಯಿಂದ ನಿರಂತರವಾಗಿ ಜನ ಜಾಗೃತಿ, ಕಾನೂನು ಅರಿವು ನೆರವು ಕಾರ್ಯಕ್ರಮ, ಬೀದಿನಾಟಕ ಮತ್ತು ಆಟೋ ಪ್ರಚಾರ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ. ಇದನ್ನು ಮೀರಿಯೂ ಸಹ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡಲ್ಲಿ ಅಂತಹ ಅಂಗಡಿ ಮಾಲೀಕರ ವಿರುದ್ಧ ಕಾನೂನು ರೀತಿ ಕ್ರಮ ತೆಗೆದುಕೊಳ್ಳಲಾಗುವುದೆಂದು ತಿಳಿಸಿದರು.

ಯಾದಗಿರಿ ಕಾರ್ಮಿಕ ನಿರೀಕ್ಷಕರಾದ ಶ್ರೀಮತಿ ಸಂಗೀತಾ ಹೊನ್ನೂರು ಅವರು ಮಾತನಾಡಿ, ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ಕೆಲಸಕ್ಕೆ ಇಟ್ಟುಕೊಂಡಲ್ಲಿ ಅಂತಹ ಅಂಗಡಿ ಮಾಲೀಕರ ವಿರುದ್ಧ 20,000 ರಿಂದ 50,000 ರೂ.ಗಳ ವರೆಗೆ ದಂಡ ಮತ್ತು 6 ತಿಂಗಳಿಂದ 2 ವರ್ಷದವರೆಗೆ ಜೈಲು ಶಿಕ್ಷೆ ಅಥವಾ ಎರಡನ್ನು ಸಹ ವಿಧಿಸಲಾಗುವುದು ಎಂದು ತಿಳಿಸಿದರು.

1 ಬಾಲ ಕಾರ್ಮಿಕ ಮಗುವನ್ನು ರಕ್ಷಿಸಿ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ಒಪ್ಪಿಸಲಾಯಿತು.ತಪಾಸಣೆ, ಹಠಾತ್ ದಾಳಿ ಸಂದರ್ಭದಲ್ಲಿ ಕಾರ್ಮಿಕ ಇಲಾಖೆಯ ಲೆಕ್ಕಿಗರಾದ ಬಾಲು ನಾಯಕ, ವೆಂಕಟೇಶ್ ಶಿವಾಂಗೆ ಉಪಸ್ಥಿತರಿದ್ದರು.

# ಜಾತಿ, ಮತ, ಪಂಥ, ಪಕ್ಷ ಮರೆತು ರಾಷ್ಟ್ರೀಯ ಏಕತಾ ಶಪಥ ಗ್ರಹಣ



ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 28 : ಬೀದರ್ ನಗರದಲ್ಲಿ ದಿನಾಂಕ ಅಕ್ಟೋಬರ್ 31ರಂದು ಸರ್ದಾರ್ ವಲ್ಲಭ ಭಾಯಿ ಪಟೇಲರ 151ನೇ ಜಯಂತಿ ನಿಮಿತ್ಯ 12 ನೇ ರಾಷ್ಟ್ರೀಯ ಏಕತಾ ದಿವಸದ ಸಾಮೂಹಿಕ ಶಪಥ ಗ್ರಹಣ ತೆಗೆದುಕೊಳ್ಳಲಾಗುವುದು ಎಂದು ಸರ್ದಾರ್ ವಲ್ಲಭ ಭಾಯಿ ಪಟೇಲ್ ಪ್ರತಿಷ್ಠಾನದ ಅಧ್ಯಕ್ಷರಾದ ಶಿವಶರಣಪ್ಪ ವಾಲಿ ಅವರು ಪ್ರತಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಈ ಕಾರ್ಯಕ್ರಮದಲ್ಲಿ ಸರ್ದಾರ್ ವಲ್ಲಭ ಭಾಯಿ ಪಟೇಲ್ ಪ್ರತಿಷ್ಠಾನ, ಜಿಲ್ಲಾಡಳಿತ, ಸಾರ್ವಜನಿಕ ಶಿಕ್ಷಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸರ್ವೋದಯ ನ್ಯಾಸ, ಭಾರತ ಸೇವಾದಳ, ಬೀದರ್ ಮಹಾನಗರ ಪಾಲಿಕೆ ಮತ್ತು ಭಾರತ ಸಂರಕ್ಷಣಾ ಸಮಿತಿ ಬೀದರ್ ಇವರ ಸಂಯುಕ್ತಾಶ್ರಯದಲ್ಲಿ ಆಚರಿಸಲಾಗುವುದೆಂದು ಮಾಹಿತಿ ನಿಡಿದ್ದಾರೆ.

ಸರ್ದಾರ್ ವಲ್ಲಭ ಭಾಯಿ ಪಟೇಲರ ಜಯಂತಿ ಉತ್ಸವವನ್ನು 26 ವರ್ಷಗಳಿಂದ ಸರ್ದಾರ್ ವಲ್ಲಭ ಭಾಯಿ ಪಟೇಲ್ ಪ್ರತಿಷ್ಠಾನ ಆಚರಿಸುತ್ತಾ ಬಂದಿದೆ. ಈ ಕಾರ್ಯಕ್ರಮದಲ್ಲಿ ಜಾತಿ ಮತ ಪಂಥಗಳ ಭೇದವಿಲ್ಲದೆ ಎಲ್ಲಾ ಪಕ್ಷದ ಜನಪ್ರತಿನಿಧಿಗಳು, ಹಾಲಿ ಮತ್ತು ಮಾಜಿ ಸಂಸದರು, ಶಾಸಕರು, ನಗರಸಭೆ ಸದಸ್ಯರು ಮತ್ತು ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ವಿಶೇಷವಾಗಿ ಶಾಲಾ ಕಾಲೇಜಿನ ಮಕ್ಕಳು, ಓಅಅ ಮತ್ತು ಶಾಲಾ ಸಂಸ್ಥೆಗಳ ಪದಾಧಿಕಾರಿಗಳು ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಪ್ರತಿಷ್ಠಾನದ ವತಿಯಿಂದ ವಿನಂತಿಸಿಕೊಂಡಿದ್ದಾರೆ.

ಕಾರ್ಯಕ್ರಮವು ಸರಿಯಾಗಿ ಸಮಯದ ಮೇಲೆ ನಡೆಯುವುದರಿಂದ ಮುಂಜಾನೆ 10 ಗಂಟೆಗೆ ದಿನಾಂಕ 31–10–2025 ಶುಕ್ರವಾರ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ವೃತ್ತದಲ್ಲಿ ಬಂದು ತಮ್ಮ ಸ್ಥಾನವನ್ನು 15 ನಿಮಿಷಗಳ ಮೊದಲೇ ಸ್ವಿಕರಿಸಬೇಕೆಂದು ಪ್ರತಿಷ್ಠಾನದ ಅಧ್ಯಕ್ಷರಾದ ಶಿವಶರಣಪ್ಪ ವಾಲಿ ಅವರು ಕೇಳಿಕೊಂಡಿದ್ದಾರೆ.

# ರಾಜ್ಯಮಟ್ಟದ ವಿವಿಧ ಸ್ಪರ್ಧೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 28 : ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಘಟಕದ ವತಿಯಿಂದ ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ಸರ್ಕಾರಿ ನೌಕರರಿಗೆ ಬೆಂಗಳೂರಿನ ಸಂಘದ ಆವರಣದಲ್ಲಿ ನ. 8 ರಂದು ರಾಜ್ಯಮಟ್ಟದ ಜನಪದ, ಕನ್ನಡ ಗೀತೆಗಳ ಗುಂಪು ನೃತ್ಯ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ.

ಸ್ಪರ್ಧೆಯಲ್ಲಿ ಪಾಲ್ಗೊಳ್ಳ ಬಯಸ ುವವರು https://forms.gle/8pR3m5nXowwQzccs9 ಲಿಂಕ್ ಬಳಸಿ ಹೆಸರು ನೋಂದಾಯಿಸಬಹುದು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ ತಿಳಿಸಿದ್ದಾರೆ.



ವಿಜೇತರಿಗೆ ರೂ. 1 ಲಕ್ಷ ಪ್ರಥಮ, ರೂ. 75 ಸಾವಿರ ದ್ವಿತೀಯ, ರೂ. 50 ಸಾವಿರ ತೃತೀಯ ಹಾಗೂ ರೂ. 20 ಸಾವಿರ ಸಮಾಧಾನಕರ ಬಹುಮಾನ ಇದೆ ಎಂದು ಹೇಳಿದ್ದಾರೆ.

ಜಿಲ್ಲೆಯ ನೌಕರರು ಸ್ಪರ್ಧೆಯಲ್ಲಿ ಪಾಲ್ಗೊಂಡು, ಪ್ರತಿಭೆ ಪ್ರದರ್ಶಿಸಿ ಜಿಲ್ಲೆಗೆ ಕೀರ್ತಿ ತರಬೇಕು ಎಂದು ಕೋರಿದ್ದಾರೆ.

# ಒಳಮೀಸಲಾತಿ ಗ್ರಹಣ : ಸಚಿವ ದರ್ಶನಾಪುರ ಮಾತು ಮರೀಚಿಕೆ:ಆಲೂರ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಅ.27:ಮೂವತ್ತು ವರ್ಷಗಳ ಒಳ ಮೀಸಲಾತಿ ಜಾರಿಗೆ ತರುವಲ್ಲಿ ಮಾದಿಗರು ನಿತ್ಯ ನಿರಂತರ ಹೋರಾಟ ಮಾಡುತ್ತಾ ಜೀವಮಾನವನ್ನೆ ಮುಡುಪಾಗಿಟ್ಟಿದ್ದಾರೆ, ಆದರೆ ಇಂದು ಕಾಂಗ್ರೆಸ್ ಸರ್ಕಾರ ಸಚಿವ ಸಂಪುಟದಲ್ಲಿ ಒಳ ಮೀಸಲಾತಿ ಜಾರಿಗೆ ಒಪ್ಪಿಗೆ ನೀಡಿ ವರ್ಗಿಕರಿಸಿತು, ಆದರೆ ಇಂದಿನವರೆಗೂ ಒಳ ಮೀಸಲಾತಿ ಜಾರಿಗೆ ಕನಸ್ಸಿನ ಮಾತಾಗಿದೆ, ಸಣ್ಣ ಕೈಗಾರಿಕಾ ಮತ್ತು ಸಾರ್ವಜನಿಕ ಉಧ್ಯಮಗಳ ಮಂತ್ರಿಗಳಾದ ಶರಣಬಸಪ್ಪಗೌಡ ದರ್ಶನಾಪುರವರು ಪ್ರತಿ ಹೊಲೆಯ ಮತ್ತು ಮಾದಿಗರ ಸಮಾರಂಭದಲ್ಲಿ ಬಹುದಿನಗಳ ಹೋರಾಟದ ಕನಸ್ಸು ನನಸಾಗಿದ ಕಾಂಗ್ರಸ್ ಒಳ ಮೀಸಲಾತಿ ಜಾರಿಗೆ ತಂದಿದೆ, ಎಂದು ಹೆಳುತ್ತಿರುವದು ಶೋಚನೀಯ ಸಂಗತಿಯಾಗಿದೆ, ಆದರೆ ಇಂದಿನವರೆಗೂ ಒಳ ಮೀಸಲಾತಿ ಸಮಪರ್ಕವಾಗಿ ಜಾರಿಗೆ ಬಾರದೆ ಗ್ರಹಣ ಹಿಡಿದುಕೊಂಡು ಕುಳಿತ್ತಿದ್ದು ನಿತ್ಯ ಮಾದಿಗರು ಮೀಸಲಾತಿ ಜಾರಿಗಾಗಿ ಹೋರಾಟ ಮಾಡುತ್ತಿದ್ದಾರೆ, ಸರ್ಕಾರ ಅವರನ್ನು ಬಂಧಿಸಿದೆ, ಹೀಗೆ ಇನ್ನೂ ಮೀಸಲಾತಿ ಜಾರಿಗೆ ಕುರಿತು ಸಚಿವ ದರ್ಶನಾಪುರವರು ಮುಖ್ಯಮಂತ್ರಿಗಳಾದ ಸಿದ್ರಾಮಯ್ಯನವರಿಗೆ ಕುರಿತು ಚರ್ಚೆ ಮಾಡಲಿ ಎಂದು ಸಾಮಾಜಿಕ ನ್ಯಾಯಕ್ಕಾಗಿ ಪ.ಜಾ. ಗಳ ಒಳಮೀಸಲಾತಿ ಹೋರಾಟ ಸಮಿತಿ ಜಿಲ್ಲಾ ಸಂಚಾಲಕರಾದ ವೆಂಕಟೇಶ ಆಲೂರ ಆಕ್ಷೇಪ ವ್ಯಕ್ತಪಡಿಸಿದ್ದಾರೆ,.ಮುಂದುವರೆದು ಹೇಳಿಕೆ ನೀಡಿದ ವೆಂಕಟೇಶ ಆಲೂರ ರವರು, ಇತ್ತಿಚೆಗೆ ತಾಲುಕಿನ ಗೋಗಿ ನಡೆದ ಶ್ರೀಗುರು ಜೈಗುರು ಮಠದ ಮೂತಿ ಪ್ರತಿಷ್ಠಾನ ಸಮಾರಂಭದಲ್ಲಿ ಸಚಿವ ದರ್ಶನಾಪುರವರು ಕಲ್ಯಾಣ ಕರ್ನಾಟಕದಲ್ಲಿ ಎಐಸಿಸಿ ರಾಷ್ಟ್ರೀಯ ಅಧ್ಯಕ್ಷರಾದ ಡಾ.ಮಲ್ಲಿಕಾಜುನ ಖರ್ಗೇಜೀಯವರು ಕಲಂ, 371 ಜೆ, ಜಾರಿಗೆ ತಂದಿದ್ದು. ಒಳ ಮೀಸಲಾತಿ ಜಾರಿಗೆ ಬಂದಿದ್ದು ಪ.ಜಾ.. ಗಳಿಗೆ ಮಾತ್ರ ಎನ್ನವಂತ ಮಾತನಾಡಿದ ಸಚಿವರು ಈ ಎರಡು ನೀಯಮಗಳು ಜಾರಿಗೆ ಬಂದಿದ್ದು ಸರ್ವ ಜಾತಿಗಳಿಗೆ ಲಾಭ ಪಡೆಯುತ್ತಿದ್ದಾರೆ. ಕೇವಲ ಪ.ಜಾ, ಜನಾಂಗದವರು 371/ ಜೆ ಲಾಭ ಪಡೆಯುತ್ತಿಲ್ಲ, ಎಂದ ವೆಂಕಟೇಶ ಆಲೂರವರು ಅವರು ಸಚಿವರು ಮೀಸಲಾತಿ ಕುರಿತು ಇನ್ನು ಹೆಚ್ಚು ಗಮನ ಹರಿಸಿ ಸಮಪರ್ಕವಾಗಿ ಜಾರಿಗೆ ತರುವಲ್ಲಿ ಮುಖ್ಯಮಂತ್ರಿಗಳಿಗೆ ಚರ್ಚೆ ಮಾಡಬೇಕು, ಭಾಷಣಗಳಲ್ಲಿ ಮಾದಿಗ ಮತ್ತು ಹೊಲೆಯರ ಓಲೈಕೆಗಳಿಗೆ ಈ ಎರಡು ಅಸ್ತ್ರಗಳನ್ನು ಬಳಿಕೆ ಮಾಡಿಕೊಳ್ಳುತ್ತಿರುವದು ಮುಜುಗುರದ ಸಂಗತಿಯಾಗಿದೆ ಎಂದು ವೆಂಕಟೇಶ ಆಲೂರವರು ಪತ್ರಿಕೆ ಪ್ರಕಟಣೆಯ ಮುಖಾಂತರ ತಿಳಸಿದ್ದಾರೆ,

# ಸೋಯಾ ಬೆಂಬಲ ಬೆಲೆಗೆ ಖರೀದಿ ಪ್ರಾರಂಭ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಅ.28:ತಾಲೂಕಿನ ಮುಧೋಳ (ಬಿ) ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ 2025ನೇ ಸಾಲಿನ ಸೊಯಾಬೀನ್ ಖರೀದಿಗೆ ಮಂಗಳವಾರ ಪೂಜೆ ಮಾಡಿ ಪಿ.ಕೆ.ಪಿ.ಎಸ್. ಅಧ್ಯಕ್ಷರಾದ ಗುರುನಾಥ ವಟಗೆ ಅವರು ಚಾಲನೆ ನೀಡಿದರು.

ನಂತರ ಮಾತನಾಡಿ, ರೈತರು ಬೆಳೆದ ಸೋಯಾ ಬೆಳೆಯನ್ನು ಸರಕಾರ ಪ್ರತಿ ಕ್ವಿಂಟಾಲ್‌ಗೆ 5,328 ರೂ. ಬೆಂಬಲ ಬೆಲೆ ನೀಡಿ ಖರೀದಿ ಮಾಡುತ್ತಿದೆ. ಹಾಗಾಗಿ ಇನ್ನೂ ಯಾರಾದರೂ ನೊಂದಣಿ ಮಾಡದೇ ಇದ್ದಲ್ಲಿ ನ.30 ಒಳಗಾಗಿ ತಮ್ಮ ಹೆಸರು ನೋಂದಣಿ ಮಾಡಿಕೊಳ್ಳಬಹುದು. ನೊಂದಣಿ ಮಾಡಿದ ರೈತರ ಸೋಯಾವನ್ನು ಕ್ರಮಬದ್ಧವಾಗಿ ಖರೀದಿ ಮಾಡಲಾಗುವುದು ಹಾಗೂ ಕನಿಷ್ಠ ಮೋಚರ (ಒಣ ಗಿದ ಪ್ರಮಾಣು) 12 ಇರಬೇಕು ಒಣ ಸೋಯಾಬಿನ ತರುವಂತೆ ಹೇಳಿದರು.

ಈ ಸಂದರ್ಭದಲ್ಲಿ ಸಂಘದ ಸದಸ್ಯರಾದ ಉಪಾಧ್ಯಕ್ಷರು ವಿಠಲರಾವ ಬೋರಗಾವೆ, ರಾಜಕುಮಾರ ಬಿಚ್ಚುಕುಂದೆ, ಶಿವಾಜಿರಾವ ಬಿರಾದಾರ, ಪಂಡರಿ ಶರಿಕಾರ,

ವಿಶ್ವನಾಥ ಹಲ್ಲಾಳೆ, ರಾಜೇಂದ್ರ ಜಾಧವ, ಬಾಬುರಾವ ರಕ್ಷಾಳೆ, ಶ್ರೀಮತಿ ಸಂಗೀತ ಗುಡ್ಡಾ, ಸುನೀತಾ ಹಳಕಾಯಿ, ನಾಗಯ್ಯ ಸ್ವಾಮಿ, ಕಲಿಮೋದ್ದಿನ ಶೇಖ, ಕಾರ್ಯದರ್ಶಿ ಬಸವರಾಜ ಸ್ವಾಮಿ ಹಾಗೂ ರೈತರು ಇದ್ದರು.

# ಅರ್ಥಪೂರ್ಣವಾಗಿ ಭಕ್ತ ಕನಕದಾಸರ ಜಯಂತಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಅ:28: ಜಿಲ್ಲಾಡಳಿತ , ಜಿಲ್ಲಾ ಪಂಚಾಯತ್, ವಿವಿಧ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ನವೆಂಬರ್ 8 ರಂದು ಭಕ್ತ ಶ್ರೀ ಕನಕದಾಸರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಭಕ್ತ ಶ್ರೀ ಕನಕದಾಸರ ಜಯಂತಿ ಆಚರಿಸುವ ಕುರಿತು ಅಪರ ಜಿಲ್ಲಾಧಿಕಾರಿ ರಮೇಶ್ ಕೋಲಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಅಂದು ನಗರದ ಕನ್ನಡ ಸಾಹಿತ್ಯ ಪರಿಷತ್ ಸಭಾಭವನದಲ್ಲಿ ಬೆಳಿಗ್ಗೆ 11 ಗಂಟೆಗೆ ಈ ಜಯಂತಿ ಆಯೋಜಿಸಲು,ಭಕ್ತ ಶ್ರೀ ಕನಕದಾಸರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಗೌರವ ಅರ್ಪಿಸಲು,ವೇದಿಕೆ, ಆಸನದ ವ್ಯವಸ್ಥೆ, ಶಿಷ್ಟಾಚಾರದಂತೆ ಗಣ್ಯರನ್ನು ಆಹ್ವಾನಿಸಲು ನಿರ್ಧರಿಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪಾರ ಜಿಲ್ಲಾಧಿಕಾರಿ ರಮೇಶ ಕೋಲಾರ್ ಅವರು ಕಾರ್ಯಕ್ರಮದ ಸಂದರ್ಭದಲ್ಲಿ , ಸೂಕ್ತ ಪೋಲಿಸ್ ಬಂದೋಬಸ್ತ್, ವೇದಿಕೆ ಸಿದ್ಧತೆ ನೋಡಿಕೊಳ್ಳಲು , ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಆಮಂತ್ರಣ ಪತ್ರಿಕೆ ವಿತರಿಸುವ ವ್ಯವಸ್ಥೆಗೆ ಸೂಚಿಸಲಾಯಿತು.

ಕಾರ್ಯಕ್ರಮವನ್ನು ತಾಲೂಕ ಮಟ್ಟದಲ್ಲಿ ಶಾಲಾ, ಕಾಲೇಜು, ಗ್ರಾಮ ಪಂಚಾಯತ್, ವಿವಿಧ ಕಚೇರಿ ಗಳಲ್ಲಿ ಈ ಜಯಂತಿ ಆಚರಣೆ, ಮುಖ್ಯ ಕಾರ್ಯಕ್ರಮಕ್ಕೆ, ಅಗತ್ಯ ಸಿದ್ಧತೆ ಮಾಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಸಮಾಜದ ಮೂಲಕ ಹಮ್ಮಿಕೊಳ್ಳಲಾಗುವ ಮೆರವಣಿಗೆ ಕಾರ್ಯಕ್ರಮ ಶಾಂತಿಯುತವಾಗಿ ಕೈಗೊಳ್ಳಲು ಹಾಗೂ ಮುಂಚಿತವಾಗಿ ಜಿಲ್ಲಾಡಳಿತಕ್ಕೆ ಈ ಕುರಿತು ಮಾಹಿತಿ ನೀಡಲು ಸೂಚಿಸಿದರು. ಕನಕದಾಸರ ವೃತ್ತದ ಸ್ವಚ್ಛತೆ, ಅಲಂಕಾರ ಕುರಿತು ಕ್ರಮ ಕೈಗೊಳ್ಳಲು,ಕಲಾತಂಡಗಳ ಕುರಿತು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಶ್ರೀಮತಿ ಉತ್ತರಾದೇವಿ ಮಠಪತಿ, ಮಲ್ಲಯ್ಯ ಕಸಬಿ, ಕರ್ನಾಟಕ ಪ್ರದೇಶ ಕುರುಬರ ಸಂಘದ ಅಧ್ಯಕ್ಷ ಮಲ್ಲಣ್ಣ ಐಕೂರ್, ಪ್ರಧಾನ ಕಾರ್ಯದರ್ಶಿ ಮಲ್ಲಯ್ಯ, ಕಾರ್ಯಾಧ್ಯಕ್ಷ ಹಣುಮಂತ ತೇಕರಾಳ, ತಾಲೂಕು ಪ್ರಧಾನ ಕಾರ್ಯದರ್ಶಿ ಬೀರೇಶ್ ಚಿರತೆಣ್ಣವರ, ಸಾಯಿಬಣ್ಣ ಕೆಂಗೇರಿ, ರವಿಕಡೆಚೂರ್, ಸಿದ್ದು ಪೂಜಾರಿ, ವಿಜಯ ಕರಿದಳ್ಳಿ, ಇತರರು ಉಪಸ್ಥಿತರಿದ್ದರು.

# ನ.3 ರಿಂದ ಚಾಂಗಲೇರಾ ವೀರಭದ್ರದೇಶ್ವರ ಜಾತ್ರಾ ಮಹೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಅ.28: ಚಿಟಗುಪ್ಪ ತಾಲೂಕಿನ ಚಾಂಗಲೇರಾ ಗ್ರಾಮದ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವವವು ನವೆಂಬರ್.3 ರಿಂದ ನವೆಂಬರ್.7 ರವರೆಗೆ ಜರುಗಲಿದೆ.

ನವೆಂಬರ್.3 ರಂದು ಬೆಳಗ್ಗೆ 6 ಗಂಟೆಗೆ ದೇವರಿಗೆ ರುದ್ರಾಭಿಷೇಕ ಪೂಜೆ, ಮಹಾ ಮಂಗಳಾರತಿ, 9 ಗಂಟೆಗೆ ರಥಕ್ಕೆ ಕಳಸಾರೋಹಣ ಹಾಗೂ ರಾತ್ರಿ 9ರಿಂದ 12ರವರೆಗೆ ವೀರಭದ್ರೇಶ್ವರ ಭಜನೆ ಹಾಗೂ ಪುರವಂತರ ಸೇವೆಯೊಂದಿಗೆ ದೇವರ ಪಲ್ಲಕ್ಕಿ ವೈಭವದಿಂದ ಸಕಲ ವಾದ್ಯ ಬಿರುದಾವಳಿಗಳೊಂದಿಗೆ ದೇವಸ್ಥಾನದಲ್ಲಿ ಜರುಗಲಿದೆ.

ನವೆಂಬರ್.4 ಬೆಳಿಗ್ಗೆ ರುದ್ರಾಭಿಷೇಕ, ಅಗ್ನಿ ಪೂಜೆ, ಸಾಯಮಕಾಲ ಕ್ಷೀರ ರುದ್ರಾಭಿಷೇಕ ಪೂಜೆ ನಂತರ ಪಶುಗಳ ಪ್ರದರ್ಶನ ಮತ್ತು ಕ್ರಿಕೇಟ್ ಟೂರ್ನಾಮೆಂಟ್, ಶಿವಾನುಭವ ಗೋಷ್ಠಿ ಹಾಗೂ ಸಂಗೀತ ದರಬಾರ ಹಾಗೂ ಬೆಳ್ಳಿ ಪಲ್ಲಕ್ಕಿ ಉತ್ಸವ ನಡೆಯಲಿದೆ. ಬೆಳಗ್ಗೆ 5 ಗಂಟೆಯಿಂದ ಷ.ಬ್ರ.ಗುರುಲಿಂಗ ಶಿವಾಚಾರ್ಯರು ಹಾಗೂ ಶ್ರೀ ಷ.ಬ್ರ.ಮರುಳಾರಾಧ್ಯ ಶಿವಾಚಾರ್ಯರು ಹಿರೇಮಠ ಸಂಸ್ಥಾನ ಚಾಂಗಲೇರಾ–ಚಿಟಗುಪ್ಪ ಇವರ ನೇತೃತ್ವದಲ್ಲಿ ಮತ್ತು ಮಹೇಶಕುಮಾರ ಹಾಗೂ ಇವರ ಧರ್ಮಪತ್ನಿ ಮಂಜುಳಾ ಮಾಲಿಪಾಟೀಲ ಚಾಂಗಲೇರಾ ದಂಪತಿಗಳಿಂದ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶ್ರೀ ವೀರಭದ್ರೇಶ್ವರ ದೇವರಿಗೆ ರುದ್ರಾಭಿಷೇಕ ಪೂಜೆ ಹಾಗೂ ಮಹಾಮಂಗಳಾರತಿ. ಬೆಳಿಗ್ಗೆ 9 ರಿಂದ 12 ಗಂಟೆಯವರೆಗೆ ಗುರುಗಳಿಂದ ವೇದ ಮಂತ್ರ ಘೋಷಣೆಗಳೊಂದಿಗೆ ಅಗ್ನಿ ಪೂಜೆ ಜರುಗಲಿದೆ. ಸಾಯಂಕಾಲ 4 ಗಂಟೆಯಿಂದ ಶ್ರೀ ಬೀರಭದ್ರೇಶ್ವರರಿಗೆ ಮಹಾ ಕ್ಷೀರಾಭಿಷೇಕ ವಿಶೇಷ (ಹಾಲಿನಿಂದ) ಜರುಗಲಿದೆ. ಅಂದು ಮಧ್ಯಾಹ್ನ 12 ರಿಂದ ಕ್ರೀಕೇಟ್ ಫೈನರ್ ಪಂದ್ಯ ಜರುಗುವುದು. ಸಾಯಂಕಾಲ 4 ಗಂಟೆಯಿಂದ ಪಶುಗಳ ಪ್ರದರ್ಶನದಲ್ಲಿ ಭಾಗವಹಿಸುವ ಪಶುಗಳಿಗೆ ಬಹುಮಾನ ವಿತರಿಸಲಾಗುವುದು. ಸಾಯಂಕಾಲ 6 ಗಂಟೆಗೆ ಶಿವಾನುಭವ ಗೋಷ್ಠಿ ಹಾಗೂ ಸಂಗೀತ ದರ್ಬಾರ ಕಾರ್ಯಕ್ರಮ ಉದ್ಘಾಟನೆಗೊಳ್ಳುವುದು. ರಾತ್ರಿ 9 ಗಂಟೆಗೆ ದೇವರ ಬೆಳ್ಳಿ ಪಲ್ಲಕ್ಕಿ ಉತ್ಸವ ಹಾಗೂ ಮುತ್ತಿನ ಪಲ್ಲಕ್ಕಿ ಉತ್ಸವ ಪುರವಂತರ ಸೇವೆ, ವೀರಗಾಸಿ ನಂದಿಕೋಲು ಹಾಗೂ ಸಕಲ ವಾದ್ಯ ವೈಭವಗಳೊಂದಿಗೆ ಬೆಳ್ಳಿ ಪಲ್ಲಕ್ಕಿ ಉತ್ಸವವು ಅಗ್ನಿಕುಂಡದವರೆಗೆ ಜರುಗಲಿದೆ.

ನವೆಂಬರ್. 5 ರಂದು ಬೆಳಿಗ್ಗೆ ಪುರವಂತರ ಸೇವೆ, ವೀರಗಾಸಿ ಸೇವೆ ಸಕಲ ವಾದ್ಯ ವೈಭವಗಳೊಂದಿಗೆ ಶ್ರೀ ವೀರಭದ್ರೇಶ್ವರ ದೇವರ ಬೆಳ್ಳಿ ಪಲ್ಲಕ್ಕಿ ಉತ್ಸವ ಹಾಗೂ ಮುತ್ತಿನ ಪಲ್ಲಕ್ಕಿ ಉತ್ಸವದೊಂದಿಗೆ ಬೆಳಗ್ಗೆ 5.50ಕ್ಕೆ ವೀರಗಾಸಿ ಸೇವೆ ಸಕಲ ವಾದ್ಯ ಅಗ್ನಿ ಪ್ರವೇಶ (ಅಗ್ಗಿ ತುಳಿಯುವುದು) ಹಾಗೂ ಅಗ್ನಿ ಕಟ್ಟೆಯಲ್ಲಿ ಗುರುಗಳ ದರ್ಶನ ಪಡೆಯುವುದು. ಸಾಯಂಕಾಲ 6.00 ಗಂಟೆಗೆ ರಥೋತ್ಸವ ಉದ್ಘಾಟನೆಯೊಂದಿಗೆ ಶ್ರೀ ವೀರಭದ್ರೇಶ್ವರ ದೇವರ ಬೆಳ್ಳಿ ಪಲ್ಲಕ್ಕಿ ಹಾಗೂ ಮುತ್ತಿನ ಪಲ್ಲಕ್ಕಿ. ಪುರದಂತರ ಸೇವೆ, ವೀರಗಾಸಿ ಸೇವೆಯೊಂದಿಗೆ ದೇವರ ಪಲ್ಲಕಿ ಥೇರ ಮೈದಾನದ ವರೆಗೆ ಜರುಗುವುದು.

ರಾತ್ರಿ 11 ಗಂಟೆಗೆ ರಥೋತ್ಸವ ಮತ್ತು ಮದ್ದು ಸುಡುವುದು.. ವಿದ್ಯುತ್ ಅಲಂಕಾರ ಹಾಗೂ ಹೂವಿನಿಂದ ಅಲಂಕರಿಸಿದ ರಥೋತ್ಸವ ಜರಗುವುದು. ರಥೋತ್ಸವ ನಂತರ ಗೀಗೀ ಪದ, ಕಲಗಿ ತುರಾಯಿ ದೇವಸ್ಥಾನದ ಆವರಣದಲ್ಲಿ ಜರಗುವುದು.

ನವೆಂಬರ್.6 ರಂದು ದೇವಸ್ಥಾನದ ಥೇರ ಮೈದಾನದಲ್ಲಿ ಬೆಳಿಗ್ಗೆ 8 ರಿಂದ 12 ಗಂಟೆಯವರೆಗೆ ಮಹಿಳೆಯರ ಮತ್ತು ಪುರುಷರ ಬಿರುದು ಜಂಗೀ ಕುಸ್ತಿಗಳು ಜರಗುವುದು.ನವೆಂಬರ್.7 ರಂದು ದೇವರ ಬೆಳ್ಳಿ ಪಲ್ಲಕ್ಕಿ ಉತ್ಸವವು ಪುರವಂತರ ಸೇವೆಯೊಂದಿಗೆ ದೇವಾಲಯದಿಂದ ಚಾಂಗಲೇರಾ ಗ್ರಾಮದ ವರೆಗೆ ಉತ್ಸವ ಜರಗುವುದು ಎಂದು ಬಸವಕಲ್ಯಾಣ ಸಹಾಯಕ ಆಯುಕ್ತರು ಹಾಗೂ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿರಿಯರಿಗೆ ಕೊಟ್ಟ ಮಾತು ನಡೆಸಿಕೊಟ್ಟಿದ್ದಕ್ಕೆ ಸಮಾಧಾನವಿದೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 28 : ತಾನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಸ್ಥಾನದ ಅಕಾಂಕ್ಷಿ ಇದ್ದುದು ನಿಜ. ಆದರೆ ಹಿರಿಯ ಪತ್ರಕರ್ತರಿಗೆ ಮಾತು ಕೊಟ್ಟಂತೆ ಕಣದಿಂದ ಹಿಂದೆ ಸರಿದು ಆನಂದ ದೇವಪ್ಪ ಅವರಿಗೆ ಸಾಥ ನೀಡಬೇಕೆಂಬ ಹಿರಿಯರ ಮಾತಿಗೆ ಸಮ್ಮತಿಸಿ ಕಕಾಪಸಂ ಜಿಲ್ಲಾಧ್ಯಕ್ಷರನ್ನಾಗಿ ಮಾಡಲು ಎಲ್ಲ ರೀತಿಯ ಸಹೋಯೋಗ ನೀಡಿದ್ದೇವೆ ಎಂಬ ಸಮಾಧಾನ ನಮಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ನಿಕಟಪೂರ್ವ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ತಿಳಿಸಿದ್ದಾರೆ. ಪ್ರಕಟಣೆ ಹೇಳಿಕೆ ನೀಡಿರುವ ಅವರು, ಹಿರಿಯರ ಅಭಿಪ್ರಾಯದಂತೆ ಆನಂದ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಬೇಕೆಂಬ ಎಲ್ಲರ ತಿರ್ಮಾನಕ್ಕೆ ಈಗಲೂ ಬದ್ದರಾಗಿದ್ದೇವೆ. ಮಾಧ್ಯಮವೊಂದರಲ್ಲಿ ಬಂದ ಹೇಳಿಕೆ ಪ್ರಕಾರ ಹಿರಿಯರ ಸಭೆ ಫಲ ನೀಡಲಿಲ್ಲ ಎಂದು ಹೇಳಿಲ್ಲ. ಬದಲಿಗೆ ರಾಜ್ಯ ಚುನಾವಣಾ ಇಲಾಖೆ ಒಂದು ಸಂವಿಧಾನಿಕ ಪ್ರಕ್ರಿಯ ನಡೆಸಲು ಸೂಚಿಸಿತು. ಆದರೆ ಹಿರಿಯರೆಲ್ಲರು ಸೇರಿ ಯಾವುದೇ ನಾಮಪತ್ರ ಸಲ್ಲಿಸಬಾರದೆಂಬ ತಿರ್ಮಾನಕ್ಕೆ ಬದ್ದರಾಗಿ ನಡೆದುಕೊಂಡಿದ್ದೇವೆ. ಯಾವುದೇ ನಾಮಪತ್ರ ಸಲ್ಲಿಸದೇ ಜಿಲ್ಲೆಯಲ್ಲಿ ಒಗ್ಗಟ್ಟು ಪ್ರದರ್ಶನಕ್ಕೆ ಕೈಜೋಡಿಸಿದ್ದಕ್ಕೂ ಸಮಾಧಾನವಿದೆ. ರಾಜ್ಯ ಚುನಾವಣೆ ಇಲಾಖೆ ಸೂಚಿಸಿರುವ ಪ್ರಕಾರ ತಾನು ನಡೆದುಕೊಂಡಿಲ್ಲವೆಂಬ ಕೊರಗೂ ನನಗಿದೆ. ಅದಕ್ಕಾಗಿ ಬೇಷರತ್ ಕ್ಷಮೆಯಾಚಿಸುತ್ತೇನೆ. ಜಿಲ್ಲೆಯ ಪತ್ರಕರ್ತರ ಹಿತದೃಷ್ಟಿಯಿಂದ ಎಲ್ಲರ ತಿರ್ಮಾನಕ್ಕೆ ತಾನು ಸಹ ಬದ್ದನಾಗಿದ್ದೇನೆ ಎಂದು ಸ್ವಾಮಿ ಹೇಳಿದ್ದಾರೆ.

# ಕನ್ನಡ ನಾಮಫಲಕ ಅಳವಡಿಸಲು ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.28: ಪಟ್ಟಣ ಸೇರಿ ಗ್ರಾಮೀಣ ಭಾಗದ ಎಲ್ಲ ಅಂಗಡಿ ಮುಗ್ಗಟ್ಟು, ಸರಕಾರಿ ಕಚೇರಿ, ಶಾಲಾ–ಕಾಲೇಜು ನಾಮಫಲಕ ಕಡ್ಡಾಯವಾಗಿ ಕನ್ನಡಗೊಳಿಸಬೇಕು ಎಂದು ನಮ್ಮ ಕರ್ನಾಟಕ ಸೇನೆಯ ಜಿಲ್ಲಾ ಘಟಕ ಒತ್ತಾಯಿಸಿದೆ. ಈ ಕುರಿತು ಪಟ್ಟಣದ ತಹಸೀಲ್ ಕಚೇರಿಯಲ್ಲಿ ನಮ್ಮ ಕರ್ನಾಟಕ ಸೇನೆಯ ಜಿಲ್ಲಾಧ್ಯಕ್ಷ ಗಣೇಶ ಪಾಟೀಲ್ ನೇತೃತ್ವದಲ್ಲಿ ಪದಾಧಿಕಾರಿಗಳು ಸೋಮವಾರ ಮನವಿ ಪತ್ರ ಸಲ್ಲಿಸಿದರು.

ತಾಲೂಕಿನ ಎಲ್ಲ ಕಡೆಗಳಲ್ಲಿ ಕನ್ನಡ ನಾಮಫಲಕ ಕಡ್ಡಾಯಗೊಳಿಸುವಂತೆ ನಮ್ಮ ಕರ್ನಾಟಕ ಸೇನೆ ನಿರಂತರವಾಗಿ ಹೋರಾಟ ಮಾಡಿಕೊಂಡು ಬರಲಾ ಗುತ್ತಿದೆ. ಆದರೂ ಕೂಡ ತಾಲೂಕು ಆಡಳಿತದ ಅಧಿಕಾರಿಗಳ ನಿರ್ಲಕ್ಷ ??ದಿಂದ ಎಲ್ಲೆಡೆ ಅನ್ಯ ಭಾಷೆಗಳ ನಾಮಫಲಕ ರಾರಾಜಿಸುತ್ತಿವೆ. ಸರಕಾರ ಈಗಾಗಲೇ ಕನ್ನಡ ನಾಮಫಲಕ ಕಡ್ಡಾಯಗೊಳಿಸಿದೆ. ಆದರೂ ಕೂಡ ಪಟ್ಟಣದ ಬಹುತೇಕ ಅಂಗಡಿ ಮುಗ್ಗಟ್ಟುಗಳ ನಾಮಫಲಕಗಳ ಮೇಲೆ ಅನ್ಯ ಭಾಷೆ ಇರುವುದು ಕಂಡು ಬರುತ್ತಿದ್ದರೂ ಸಂಬಂಧಿತ ಅಧಿಕಾರಿ ವಿರುದ್ಧ ಕ್ರಮ ಆಗುತ್ತಿಲ್ಲ. ತಾಲೂಕು ಆಡಳಿತ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಕೂಡಲೇ ಸುತ್ತೋಲೆ ಹೊರಡಿಸಿ ಎಲ್ಲ ಕಡೆಗಳಲ್ಲಿ ಕನ್ನಡ ನಾಮಫಲಕ ಅಳವಡಿಸುವ ಕೆಲಸ ಆಗಬೇಕು ವಿಳಂಬವಾದರೇ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಮನವಿ ಪತ್ರದಲ್ಲಿ ಎಚ್ಚರಿಸಿದ್ದಾರೆ.ಈ ಸಂದರ್ಭದಲ್ಲಿ ಪ್ರಮುಖರಾದ ಲೋಕೇಶ ಪಾಟೀಲ್, ಭದ್ರಯ್ಯ ಸ್ವಾಮಿ, ಬಸವರಾಜ ಕಾರಬಾರಿ, ಸಂಗಮೇಶ ಮಾರ್ಗೆ, ವೀರಭದ್ರ ಸ್ವಾಮಿ ಸೇರಿದಂತೆ ಹಲವರು ಇದ್ದರು.

# ಬಸವಕಲ್ಯಾಣದಲ್ಲಿ ರಾಜ್ಯಮಟ್ಟದ ವಚನ ಕಂಠಪಾಠ ಸ್ಪರ್ಧೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಅ.28: ಬಸವಕಲ್ಯಾಣ, ಬಸವಾದಿ ಶರಣರ ವಚನಗಳು ಜನಮನಗಳಿಗೆ ತಲುಪಿಸುವ ನಿಟ್ಟಿನಲ್ಲಿ ಇಲ್ಲಿಯ ಅನುಭವ ಮಂಟಪದಲ್ಲಿ ನ.23 ರಂದು ಭಾನುವಾರ ಬೆಳಿಗ್ಗೆ 9.30 ಗಂಟೆಗೆ ಅನುಭವ ಮಂಟಪ ಉತ್ಸವ ನಿಮಿತ್ತ ಲಿಂಗೈಕ್ಯ ಸುಶೀಲಾದೇವಿ ಜಾ.ಬಿ.ವಿ.ಪಟೇಲ್ ಸ್ಮರಣೆಯ ಅಂಗವಾಗಿ ರಾಜ್ಯಮಟ್ಟದ ವಚನ ಕಂಠಪಾಠ ಸರ್ಧೆ ಏರ್ಪಡಿಸಲಾಗಿದೆ.

ಹೆಚ್ಚು ವಚನಗಳು ಕಂಠಪಾಠ ಹೇಳಿ ವಿಜೇತರಾದವರಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು. ಪ್ರಥಮ ಬಹುಮಾನ 20,000, ದ್ವಿತೀಯ 15,000 ಮತ್ತು ತೃತೀಯ ಬಹುಮಾನ 10,000 ರೂಪಾಯಿಗಳನ್ನು ನೀಡಲಾಗುವುದು. ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲರಿಗೂ ಪ್ರಶಸ್ತಿ ಪತ್ರ ನೀಡಲಾಗುವುದು. ಹಾಗಾಗಿ ರಾಜ್ಯದ ಎಲ್ಲ ಜಿಲ್ಲೆಯ ಸ್ಪರ್ಧಾಳುಗಳು ಈ ಸ್ಪರ್ಧೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅನುಭವ ಮಂಟಪದ ಅಧ್ಯಕ್ಷ ನಾಡೋಜ



ಡಾ.ಬಸವಲಿಂಗ ಪಟ್ಟದ್ದೇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಶಿವಾನಂದ ಸ್ವಾಮೀಜಿ 8971948583, ಬಾಬು ಬೆಲ್ದಾಳ 9880768662, ಅಶೋಕ ಕುಂಬಾರ 9172319620 ಮತ್ತು ಗಂಗಾಧರ ಬಿರಾದಾರ್ 9964036949 ಅವರನ್ನು ಸಂಪರ್ಕಿಸಲು ಕೋರಲಾಗಿದೆ.

# ಗ್ರಾಹಕ ಹಕ್ಕು ಸಂರಕ್ಷಣೆಯಲ್ಲಿ ಗ್ರಾಹಕ ಪಂಚಾಯತ್ ಮುಂಚೂಣಿ–ಪ್ರೊ.ನಕ್ಷತ್ರಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.28–ಗ್ರಾಹಕರಹಕ್ಕು ರಕ್ಷಣೆಯ ಹೋರಾಟದಲ್ಲಿ ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಪ್ರಮುಖ ಪಾತ್ರ ವಹಿಸಿದೆ ಎಂದು ಗ್ರಾಹಕ ಪಂಚಾಯತ್ ಕರ್ನಾಟಕ ಪ್ರಾಂತದ ಅಧ್ಯಕ್ಷ ಪ್ರೊ. ನರಸಿಂಹ ನಕ್ಷತ್ರಿ ಹೇಳಿದ್ದಾರೆ.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 1974ರಿಂದ ಗ್ರಾಹಕರ ಹಿತಕ್ಕಾಗಿ ಸಂಸ್ಥೆ ಕಾರ್ಯನಿರತವಾಗಿದ್ದು, ಯಾವುದೇ ಕಾನೂನು ರಕ್ಷಣೆಯಿಲ್ಲದ ಸಂದರ್ಭದಲ್ಲೂ ಹಕ್ಕುಗಳಿಗಾಗಿ ಹೋರಾಟ ಮುಂದುವರಿಸಿತು. ಇದರ ಫಲವಾಗಿ 1986ರಲ್ಲಿ ಕೇಂದ್ರ ಸರ್ಕಾರ ಗ್ರಾಹಕ ಸಂರಕ್ಷಣಾ ಕಾಯ್ದೆ ಜಾರಿಗೆ ತಂದಿತು. ಅದರ ಹಿನ್ನೆಲೆಯಾಗಿ ಡಿಸೆಂಬರ್ 24 ರಾಷ್ಟ್ರೀಯ ಗ್ರಾಹಕರ ದಿನವಾಗಿ ಆಚರಿಸಲಾಗುತ್ತದೆ ಎಂದು ಹೇಳಿದರು.

ಇಂದಿನ ಡಿಜಿಟಲ್ ಯುಗದಲ್ಲಿ ಹೊಸರೀತಿಯ ಮೋಸಗಳು, ಆನ್‌ಲೈನ್ ವಂಚನೆಗಳು ಮತ್ತು ಖೋಟಾ ಮಾರುಕಟ್ಟೆ ಚಟುವಟಿಕೆಗಳ ವಿರುದ್ಧ ಹೋರಾಡಲು 2020ರ ಗ್ರಾಹಕ ಕಾಯ್ದೆ ಪರಿಣಾಮಕಾರಿಯಾಗಿದೆ. ರಾಜ್ಯಾದ್ಯಂತ ಜಾಗೃತಿ ಮತ್ತು ಶಿಕ್ಷಣ ಕಾರ್ಯಕ್ರಮಗಳ ಮೂಲಕ ಗ್ರಾಹಕರಿಗೆ ಅರಿವು ಮೂಡಿಸಲಾಗುತ್ತಿದೆ. ನಮ್ಮ ಒತ್ತಾಸೆಯಿಂದಾಗಿ ಕೇಂದ್ರ ಸರ್ಕಾರ ಆನ್‌ಲೈನ್ ಗೇಮಿಂಗ್‌ನ ದುಷ್ಪರಿಣಾಮಗಳನ್ನು ಗಮನಿಸಿ ಕ್ರಮ ಕೈಗೊಂಡಿದೆ ಎಂದು ಹೇಳಿದರು.

ಗ್ರಾಹಕ ಪಂಚಾಯತ್‌ನ ಗುರಿ ಕೇವಲ ದೂರು ಸ್ವೀಕರಿಸುವುದಲ್ಲ. ಜಾಗೃತ, ನುರಿತ ಮತ್ತು ಜವಾಬ್ದಾರಿಯುತ ಗ್ರಾಹಕರ ಸಂಘಟಿತ ಶಕ್ತಿ ನಿರ್ಮಾಣವೇ ನಮ್ಮ ಧ್ಯೇಯ. ಆಹಾರ, ಆರೋಗ್ಯ, ಶಿಕ್ಷಣ, ವಸತಿ, ಪರಿಸರ ಹಾಗೂ ವ್ಯವಹಾರ ಕ್ಷೇತ್ರಗಳಲ್ಲಿ ಗ್ರಾಹಕರ ಹಿತ ಕಾಯಲು ಸಂಘಟನೆ ಸತತವಾಗಿ ಶ್ರಮಿಸುತ್ತಿದೆ ಎಂದು ನಕ್ಷತ್ರಿ ಹೇಳಿದರು.

ಮಹಿಳಾ ಪ್ರಮುಖ ಡಾ.ಚಂದ್ರಿಕಾ ಕುರಂದವಾಡ ಮಾತನಾಡಿ, ಮಹಿಳೆ ಮತ್ತು ಗರ್ಭಿಣಿ ಗ್ರಾಹಕರು. ಮಹಿಳೆಯರಿಗೆ ಪೌಷ್ಟಿಕ ಆಹಾರ ಹಾಗೂ ನೈಸರ್ಗಿಕ ಹೆರಿಗೆ ಕುರಿತು ಜಾಗೃತಿ ಮೂಡಿಸಲು ಡಿಸೆಂಬರ್‌ನಲ್ಲಿ ಬಾದಾಮಿ ಅಥವಾ ಬಾಗಲಕೋಟೆಯಲ್ಲಿ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘಟನಾ ಸಚಿವ ರಂಗನಗೌಡ ದಂಡಣ್ಣವರ, ಜಿಲ್ಲಾ ಅಧ್ಯಕ್ಷ ಪ್ರೊ. ಎ.ಬಿ.ಸಿದ್ಧನಗೌಡ, ಕಾರ್ಯದರ್ಶಿ ಪ್ರೊ.ಮಹದೇವ ದೀಕ್ಷಿತ, ಮಹಿಳಾ ಪ್ರಮುಖ ಶ್ರೀಮತಿ ವೀಣಾ ಮೋಟಗಿ ಹಾಗೂ ಕಾನೂನು ಘಟಕದ ಪ್ರಮುಖ ಪ್ರೊ. ಜಯತೀರ್ಥ ಕುಲಕರ್ಣಿ ಉಪಸ್ಥಿತರಿದ್ದರು.

# ಅಯೋಡಿನ್ ಕೊರತೆಯಾಗದಂತೆ ಎಚ್ಚರವಹಿಸಿ–ಡಾ.ದಯಾನಂದ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.28–ಉಪ್ಪು ಮಾನವನಿಗೆ ಅಮೂಲ್ಯ ನೈಸರ್ಗಿಕ ಪೋಷಕಾಂಶವಾಗಿದೆ. ದಿನನಿತ್ಯ ಆಹಾರದಲ್ಲಿ ಅಯೋಡಿನ್ ಉಪ್ಪು ಬಳಕೆ ಮಾಡಬೇಕು. ಅಯೋಡಿನ್ ಕೊರತೆ ಉಂಟಾದರೆ ಹುಟ್ಟುವ ಮಗುವಿನಲ್ಲಿ ದೈಹಿಕ ಮತ್ತು ಮಾನಸಿಕ ವಿಕಲತೆ ಉಂಟಾಗುತ್ತದೆ. ಅಯೋಡಿನ್ ಕೊರತೆಯಾಗದಂತೆ ಎಚ್ಚರ ವಹಿಸಬೇಕು ಎಂದು ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೆಣವರ ಹೇಳಿದರು.

ನವನಗರದ ಸಕ್ರಿ ಹೈಸ್ಕೂಲ್‌ನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹಾಗೂ ಜಿಲ್ಲಾ ಸಮೀಕ್ಷಣಾ ಘಟಕ ಮತ್ತು ಸಕ್ರಿ ಹೈಸ್ಕೂಲ್ ಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ ರಾಷ್ಟ್ರೀಯ ಅಯೋಡಿನ್ ಕೊರತೆಯ ನ್ಯೂನತೆಗಳ ನಿಯಂತ್ರಣ ದಿನ ಹಾಗೂ ಸಪ್ತಾಹ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಯೋಡಿನ್ ಕೊರತೆಯಿಂದ ಗರ್ಭಿಣಿಯರಲ್ಲಿ ಪದೇ ಪದೆ ಗರ್ಭಪಾತ, ಥೈರಾಯ್ಡ್ ಸಮಸ್ಯೆ, ನಿರ್ಜೀವ ಶಿಶುವಿನ ಜನನ ಆಗುತ್ತದೆ. ದೇಹದಲ್ಲಿ ಅಯೋಡಿನ್ ಕೊರತೆಯುಂಟಾಗದಂತೆ ಎಚ್ಚರವಹಿಸಬೇಕು. ತಾವು ಖರೀದಿಸಿದ ಅಯೋಡಿನ್ ಉಪ್ಪನ್ನು ಗಾಳಿ ಬೆಳಕಿಗೆ ತೆರೆದಿಡಬಾರದು. ಸುರಕ್ಷಿತವಾಗಿ ರಕ್ಷಿಸಿ ಇಡಬೇಕು ಎಂದು ಅವರು ಹೇಳಿದರು.

ಅಯೋಡಿನ್ ನಿಸರ್ಗದತ್ತವಾಗಿ ದೊರೆಯುವ ಒಂದು ಸೂಕ್ಷ್ಮ ಪೋಷಕಾಂಶ. ಇದು ಮನುಷ್ಯನ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಅತ್ಯಗತ್ಯವಾಗಿದೆ. ಅಯೋಡಿನ್ ಕೊರತೆಯಿಂದ ಮಕ್ಕಳಲ್ಲಿ ಬುದ್ಧಿಮಾಂದ್ಯತೆ, ಕಲಿಕೆಯಲ್ಲಿ ಹಿಂದುಳಿಯುವಿಕೆ, ಸರಿಪಡಿಸಲಾಗದ ದೈಹಿಕ ಹಾಗೂ ಮಾನಸಿಕ ವಿಕಲತೆ, ಬೆಳವಣಿಗೆಯಲ್ಲಿ ಕುಂಠಿತ, ಕಿವುಡು ಹಾಗೂ ಮೂಕತನ, ಮೆಳ್ಳೆಗಣ್ಣು, ಕುಬ್ಜತನ, ನಡಿಗೆಯಲ್ಲಿ ಸರಿಪಡಿಸಲಾಗದಂತಹ ಲೋಪದೋಷಗಳು ಉಂಟಾಗುತ್ತವೆ. ವಯಸ್ಕರಲ್ಲಿ ಗಳಗಂಡ ಇತರೆ ತೊಂದರೆಗಳು ಕಾಣಿಸಿಕೊಳ್ಳುತ್ತವೆ ಎಂದು ಹೇಳಿದರು.

ಸಕ್ರಿ ಹೈಸ್ಕೂಲ್ ಮುಖ್ಯೋಪಾಧ್ಯಾಯಿನಿ ಜ್ಯೋತಿ ವಾಲಿಕಾರ, ಜಿಲ್ಲಾ ಸೋಂಕು ಶಾಸ್ತ್ರಜ್ಞೆ ಡಾ.ಸೀಮಾ ಹುದ್ದಾರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಚ್.ಪಿ.ನಾಯ್ಕರ, ಜಿಲ್ಲಾ ದತ್ತಾಂಶ ವ್ಯವಸ್ಥಾಪಕ ಪ್ರವೀಣಕುಮಾರ ಕಾಶಿನಕುಂಟಿ, ಜಿಲ್ಲಾ ತಂಬಾಕು ಸಲಹೆಗಾರ ಶಶಿಕಾಂತ ಕುಮಟಳ್ಳಿ, ವಿಜ್ಞಾನ ಶಿಕ್ಷಕ ವಿಜಯಕುಮಾರ ಕೆ. ಮತ್ತಿತರರು ಇದ್ದರು.

# ಹೆಸರು ನೋಂದಣಿಗೆ ಸೂಚನೆ

ರಾಯಚೂರು ಅಕ್ಟೋಬರ್ 28 : ಇಲ್ಲಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಕ್ಕಳು ಮತ್ತು ಯುವ ಜನರ ಕಲಾಪ್ರತಿಭೆ, ಕಲಾ ನೈಪುಣ್ಯ ಪ್ರೋತ್ಸಾಹಿಸಲು ಕಲಾ ಪ್ರತಿಭೋತ್ಸವ ರೂಪಿಸಿದೆ. ಈ ಕಾರ್ಯಕ್ರಮವನ್ನು ನಗರದ ಕನ್ನಡ ಭವನದಲ್ಲಿ ನಡೆಸಲಾಗುವುದು. ಬಾಲ ಪ್ರತಿಭೆ, ಕಿಶೋರ ಪ್ರತಿಭೆ, ಯುವ ಪ್ರತಿಭೆ ಶೀರ್ಷಿಕೆಯಡಿ 3 ವಿಭಾಗಗಳಲ್ಲಿ ಸ್ಪರ್ಧಾ ರೂಪದಲ್ಲಿ ಕಲಾ ಪ್ರತಿಭೋತ್ಸವ ನಡೆಯಲಿದ್ದು, ಆಸಕ್ತರು ಹೆಸರು ನೋಂದಣೆ ಮಾಡಿಕೊಳ್ಳಬಹುದಾಗಿದೆ. ಬಾಲಪ್ರತಿಭೆ: ಬಾಲಪ್ರತಿಭೆ ವಿಭಾಗದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 8ರಿಂದ 14 ವರ್ಷ ವಯಸ್ಸಾಗಿರಬೇಕು. ಕಿಶೋರ ಪ್ರತಿಭೆ: ಕಿಶೋರ ಪ್ರತಿಭೆ ವಿಭಾಗದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 14ರಿಂದ 18 ವರ್ಷ ವಯಸ್ಸಾಗಿರಬೇಕು.

ಯುವ ಪ್ರತಿಭೆ: ಯುವ ಪ್ರತಿಭೆ ವಿಭಾಗದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 18–30 ವರ್ಷ ವಯಸ್ಸಾಗಿರಬೇಕು. ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವ ಎಲ್ಲಾ ಸ್ಪರ್ಧಿಗಳಿಗೆ ಇಲಾಖೆಯಿಂದ ಪ್ರಮಾಣಪತ್ರ ನೀಡಲಾಗುವುದು.

# ಅಲ್ಪಸಂಖ್ಯಾತ ಇಲಾಖೆಯಿಂದ ಸರಳ ವಿವಾಹ ಸಹಾಯಧನಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 28 –ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನ ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತ ಸಮುದಾಯದವರ ಸರಳ ವಿವಾಹಗಳ ವೆಚ್ಚಗಳಿಗಾಗಿ ಪ್ರತಿ ಜೋಡಿಗೆ 50 ಸಾವಿರ ರೂ. ಸಹಾಯಧನಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸರ್ಕಾರದ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ 222 ರಲ್ಲಿ ಘೋಷಿಸಿರುವಂತೆ ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತ ಸಮುದಾಯದವದರ ಸರಳ ವಿವಾಹಗಳ ವೆಚ್ಚಗಳಿಗಾಗಿ ನೀಡುವ ಕಾರ್ಯಕ್ರಮವನ್ನು ಷರತ್ತಿಗೊಳಪಟ್ಟು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಲಾದೆ.

ಷರತ್ತುಗಳು: ಅರ್ಜಿ ಸಲ್ಲಿಸುವ ವಧು–ವರರು ಕಾರ್ನಾಟಕ ರಾಜ್ಯಕ್ಕೆ ಸೇರಿದ ಅಲ್ಪಸಂಖ್ಯಾತರ ಸಮುದಾಯಗಳಿಗೆ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ) ಸೇರಿದವರಾಗಿರಬೇಕು. ಸಾಮೂಹಿಕ ವಿವಾಹಗಳಲ್ಲಿ ಕನಿಷ್ಠ 05 ಜೋಡಿಗಳು ಭಾಗವಹಿಸಿರತಕ್ಕದ್ದು. ಜಿಲ್ಲಾ ನೋಂದಣಿ/ವಕ್ಫ್ ಬೋರ್ಡ್ ಕಚೇರಿಗಳಲ್ಲಿ ಸಾಮೂಹಿಕ ವಿವಾಹಗಳ ಆಯೋಜಕರೆಂದು ನೋಂದಣಿಯಾಗಿರುವ ಖಾಸಗಿ ಟ್ರಸ್ಟಳು, ದೇವಸ್ಥಾನದ ಟ್ರಸ್ಟಳು, ಸಂಘಗಳು, ಸೊಸೈಟಿಗಳು ವಕ್ಫಂಸ್ಥೆಗಳು ಮತ್ತು ಖಾಸಗಿ ವ್ಯಕ್ತಿಗಳು ನಡೆಸುವ ಸಾಮೂಹಿಕ ವಿವಾಹ ಕಾರ್ಯಕ್ರಮಗಳಲ್ಲಿ ವಿವಾಹವಾದಲ್ಲಿ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಈ ಸೌಲಭ್ಯ ಪಡೆಯುವ ವಧುವಿಗೆ ಕನಿಷ್ಠ 18 ವರ್ಷದಿಂದ ಗರಿಷ್ಠ 42 ವರ್ಷಗಳು, ವರನಿಗೆ ಕನಿಷ್ಠ 21 ವರ್ಷದಿಂದ ಗರಿಷ್ಠ 45ವರ್ಷ ವಯಸ್ಸು ಆಗಿರತಕ್ಕದ್ದು. ಈ ಯೋಜನೆಯಡಿ ಸಹಾಯಧನ ಪಡೆಯಯಲು ವಧು–ವರರ ವಾರ್ಷಿಕ ಆದಾಯವು 2.50 ಲಕ್ಷರೂ.ಗಳು ಮತ್ತು ಒಟ್ಟಾರೆಯಾಗಿ 5.00 ಲಕ್ಷ ರೂ.ಗಳನ್ನು ಮೀರತಕ್ಕದ್ದಲ್ಲ. ಈ ಸೌಲಭ್ಯವನ್ನು ಜೀವನದಲ್ಲಿ ಒಮ್ಮೆ ಮಾತ್ರ ಪಡೆಯಬಹುದಾಗಿದೆ. ಒಂದು ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಈ ಯೋಜನೆಯ ಸೌಲಭ್ಯ ನೀಡತಕ್ಕದ್ದು.

ವರನಿಗೆ ಈಗಾಗಲೇ ಜೀವಂತ ಪತ್ನಿಯಿದ್ದಲ್ಲಿ ಅಥವಾ ವಧುವಿಗೆ ಜೀವಂತ ಪತಿ ಇದ್ದಲ್ಲಿ ಈ ಯೋಜನೆಯು ಅನ್ವಯಿಸುವುದಿಲ್ಲ. ಸದರಿ ಸಾಮೂಹಿಕ ವಿವಾಹವು ಇತರೆ ಜಿಲ್ಲೆಗಳಲ್ಲಿ ನಡೆದಿದ್ದಲ್ಲಿ ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರು ದೃಡೀಕರಿಸುವುದು. ವಧು–ವರರು ಕನಿಷ್ಠ ಎಳು ದಿನ ಮುಂಚಿತವಾಗಿ ವಾಸ್ತವ್ಯವಿರುವ ಜಿಲ್ಲೆಯಲ್ಲಿಯೇ ಅರ್ಜಿ ಸಲ್ಲಿಸತಕ್ಕದ್ದು.

ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಆನ್‌ಲೈನ್‌ನಲ್ಲಿ ನಡೆಸಲಾಗುತ್ತಿದ್ದು, ಅದಾಗ್ಯೂ ಕೆಲವು ಸ್ವಯಂ ಸೇವೆ ಸಂಸ್ಥೆಗಳು ಮತ್ತು ಅರ್ಜಿದಾರರು ತಾಂತ್ರಿಕ ಕಾರಣಗಳಿಂದ ಆನ್‌ಲೈನ್ ಅರ್ಜಿಯನ್ನು ಸಲ್ಲಿಸಲು ತೊಂದರೆ ಉಂಟಾದಲ್ಲಿ ಅಂತಹ ಸಂದರ್ಭದಲ್ಲಿ ಮಾತ್ರ ಅನುಮೋದಿತ ಆಫ್‌ಲೈನ್ ಅರ್ಜಿ ನಮೂನೆಗಳನ್ನು ಜಿಲ್ಲಾ ಅಥವಾ ತಾಲ್ಲೂಕು ಕಚೇರಿಯಿಂದ ಪಡೆದು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮಾಹಿತಿ ಕೇಂದ್ರಗಳಾದ ರಾಯಚೂರು: 9731028420, ದೇವದುರ್ಗ: 9148233616, ಲಿಂಗಸುಗೂರು: 9886447863, ಮಾನವಿ: 887334758 ಹಾಗೂ ಸಿಂಧನೂರು: 8217621732ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುರುಕುಂದ ಗ್ರಾಮದಲ್ಲಿ ಕರ್ನಾಟಕ ಪ್ರಾಂತ ರೈತ ಸಂಘ ಗ್ರಾಮ ಘಟಕ ಉದ್ಘಾಟನೆ.




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ರೈತ ವಿರೋಧಿ ಕಾನೂನುಗಳನ್ನು ತಂದು ರೈತರನ್ನು ದಿವಾಳಿ ಮಾಡಲು ಹೊಂದಿರುವ ಸರ್ಕಾರಗಳು ಬೆಳೆಗಳಿಗೆ ಡಾಕ್ಟರ್ ಸ್ವಾಮಿನಾಥನ ವರದಿ ಯಂತೆ ರೈತರ ಮಾಲಿಗೆ ಬೆಂಬಲ ಬೆಲೆ ಸಿಗಬೇಕು ಅಂದಾಗ ಮಾತ್ರ ರೈತರು ಮುಂಬರುವ ದಿನಗಳಲ್ಲಿ ವಕ್ಕಲ್ತನ ಮಾಡಲಿಕ್ಕೆ ಸಾಧ್ಯ ಇಲ್ಲದಿದ್ದರೆ ಒಕ್ಕಲುತನ ತೆ–ಗೆದು ಹೊಲ ಮಾಡಿಕೊಂಡು ಕೂಲಿಕಾರನಾಗಿ ಪುನಃ ಬೆಂಗಳೂರು ಬಾಂಬೆ ಹೈದರಾಬಾದ್ ಮುಂತಾದ ಪಟ್ಟಣ ಗಳಿಗೆ ಒಲಸೆ ಹೋಗುವಂತ ಪರಿಸ್ಥಿತಿ ಈಗಿನ ಸರ್ಕಾರಗಳು ರೈತರಿಗೆ ತರುತ್ತಿದೆ ಇದನ್ನು ಕರ್ನಾಟಕ ಪ್ರಾಂತ ರೈತ ಸಂಘ ಉಗ್ರವಾಗಿ ಖಂಡಿಸುತ್ತೇವೆ ಎಂದು ಮಾತನಾಡಿದರು.

ಕರ್ನಾಟಕ ಪ್ರಾಂತ ರೈತ ಸಂಘ ರೈತರ ಪ್ರತಿ ಎಕ್ಕರೆಗೆ 50 ಸಾವಿರ ನೀಡಬೇಕೆಂದು ಒತ್ತಾಯಿಸುತ್ತದೆ. ಯಾದಗಿರಿ ಜಿಲ್ಲೆಯ ಹಸಿಬರ ಜಿಲ್ಲೆ ಎಂದು ಘೋಷಣೆ ಮಾಡಬೇಕೆಂದು ಒತ್ತಾಯಿಸುತ್ತದೆ. ಎಲ್ಲಾ ಬಡ ರೈತರಿಗೆ ಪ್ರತಿ ಎಕರೆಗೆ ಒಂದು ಲಕ್ಷ ರೂಪಾಯಿವರೆಗೂ ರಾಷ್ಟ್ರೀಯ ಬ್ಯಾಂಕಿನಲ್ಲಿ ಸಾಲ ನೀಡಬೇಕೆಂದು ಒತ್ತಾಯಿಸುತ್ತದೆ.


ಏಪ್ರಿಲ್ 20ರವರೆಗೆ ಕಾಲುವೆಗೆ ನೀರು ಆರಿಸಿ ರೈತರ ಬಳೆ ರಕ್ಷಣೆ ಮಾಡಬೇಕೆಂದು ಒತ್ತಾಯಿಸಿದರು.

ಮುಂಗಾರು ಹಂಗಾಮಿಗೆ ಶೇಂಗಾ ಸಜ್ಜಿ ಮೆಕ್ಕೆಜೋಳ ಮುಂತಾದ ಬೆಳೆಗಳಿಗೆ ಬೇಕಾದಂತ ಕಾಳುಗಳನ್ನು ಉಚಿತವಾಗಿ ನೀಡಬೇಕೆಂದು ಒತ್ತಾಯಿಸಲಾಯಿತು.

ಮಹಾತ್ಮ ಗಾಂಧಿ ನೆರಗ ಯೋಜನೆ ಒಂದು ವರ್ಷದಲ್ಲಿ ಎರಡು ನೂರು ದಿನ ಕೆಲಸ ಒಂದು ದಿನಕ್ಕೆ ಆರು ನೂರು ರೂಪಾಯಿ ಕೂಲಿ ನೀಡಬೇಕೆಂದು ಒತ್ತಾಯಿಸಿದರು. ಜಿಲ್ಲಾ ಸಂಘಟನಾ ಕಾರ್ಯದರ್ಶಿ ಭೀಮರಾಯ ಪೂಜಾರಿ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ರಾಯಚೂರು ಮಹಾನಗರ ಪಾಲಿಕೆಯ ಸಾಮಾನ್ಯ ಮಹಾಸಭೆ

# ಪಾಲಿಕೆಯ ಮಳಿಗೆಗಳು ಪಾರದರ್ಶಕವಾಗಿ ನಿರ್ವಹಣೆಯಾಗಲಿ: ಅಧ್ಯಕ್ಷೆ ನರಸಮ್ಮ ಮಾಡಗಿರಿ ಸೂಚನೆ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 28–ರಾಯಚೂರು ಮಹಾನಗರ ಪಾಲಿಕೆಯ ಅಧೀನದಲ್ಲಿನ ಎಲ್ಲಾ ಮಳಿಗೆಗಳು ಉತ್ತಮ ನಿರ್ವಹಣೆ ಆಗಬೇಕು. ಬಾಡಿಗೆ ದರ, ಒಪ್ಪಂದ ಸೇರಿದಂತೆ ಯಾವುದೇ ವಿಷಯಗಳ ಬಗ್ಗೆ ದೂರುಗಳು ಬಾರದ ಹಾಗೆ ಎಚ್ಚರಿಕೆ ವಹಿಸಬೇಕು. ಪಾರದರ್ಶಕತೆಗೆ ಒತ್ತು ಕೊಡಬೇಕು ಎಂದು ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷೆ ನರಸಮ್ಮ ನರಸಿಂಹಲು ಮಾಡಗಿರಿ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಅ.28ರಂದು ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಪಾಲಿಕೆಯ ವ್ಯಾಪ್ತಿಯ ಮಳಿಗೆಗಳಿಗೆ ಈ ಹಿಂದೆ ನಿಗದಿಪಡಿಸಿದ ಬಾಡಿಗೆ ದರವನ್ನು ಪರಿಷ್ಕರಿಸಲು ಪರಿಶೀಲಿಸಬಹುದಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎ.ವಸಂತಕುಮಾರ ಅವರು ವಿಷಯ ಪ್ರಸ್ತಾಪಿಸಿದರು. ಮಳಿಗೆಗಳನ್ನು ಬಾಡಿಗೆ ಪಡೆದವರೇ ಬೇರೆ; ಅಲ್ಲಿ ವ್ಯಾಪಾರ ಮಾಡುವವರೇ ಬೇರೆಯಾಗಿರುತ್ತಾರೆ. ಈ ಬಗ್ಗೆ ಸಹ ಪರಿಶೀಲಿಸಬೇಕು. ಬಾಡಿಗೆ ಪಡೆದಾಗ ನೀಡುವ ಒಪ್ಪಂದ ಪತ್ರ ಹಾಗೂ ಅಲ್ಲಿ ವ್ಯಾಪಾರಕ್ಕಾಗಿ ನೀಡುವ ವ್ಯಾಪಾರ ಪರವಾನಿಗೆಯನ್ನು ಪರಿಶೀಲಿಸಬೇಕು ಎಂದು

ಶಾಸಕರಾದ ಡಾ.ಎಸ್ ಶಿವರಾಜ ಪಾಟೀಲ್ ಹಾಗೂ ಪಾಲಿಕೆಯ ಸದಸ್ಯರಾದ ಬಸವರಾಜ ಅವರು ಧನಿಗೂಡಿಸಿದರು.

ತನಿಖೆಗೆ ಒತ್ತಾಯ: ಮಳಿಗೆಗಳನ್ನು ಬಾಡಿಗೆ ಪಡೆದವರು ತಮ್ಮ ಹೆಸರಿಗೆ ಮಾಡಿಕೊಂಡಿದ್ದಾರೆ. ಕಟ್ಟಡದ ವರ್ಗಾವಣೆಯನ್ನೂ ಪಾಲಿಕೆಯ ಅಧಿಕಾರಿಗಳೇ ಈ ಹಿಂದೆ ಮಾಡಿರುವುದರ ಬಗ್ಗೆ ತನಿಖೆಯಾಗಬೇಕು ಎಂದು ಪಾಲಿಕೆಯ ಸದಸ್ಯ ಎನ್.ಶ್ರೀನಿವಾಸ ಅವರು ಇದೆ ವೇಳೆ ಒತ್ತಾಯಿಸಿದರು.

ಮಹಾನಗರ ಪಾಲಿಕೆಯ ಮಳಿಗೆಗಳಿಗೆ ಈ ಹಿಂದೆ ಎಷ್ಟು ಬಾಡಿಗೆ ದರ ನಿಗಧಿಪಡಿಸಲಾಗಿತ್ತು. ಈ ಮಧ್ಯೆ ಬಾಡಿಗೆ ದರ ಹೆಚ್ಚಳ ಮಾಡಲಾಗಿದೆಯೋ ಅಥವಾ ಇಲ್ಲವೋ? ಮಳಿಗೆಯನ್ನು ಬಾಡಿಗೆ ಪಡೆದವರು ಹೆಚ್ಚಿನ ಬೆಲೆಗೆ ಬೇರೆಯವರೆಗೆ ಬಾಡಿಗೆ ನೀಡುತ್ತಿದ್ದಾರೆ ಎನ್ನುವ ಸಂದೇಹದ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಪರಿಶೀಲಿಸಬೇಕು. ಬಾಡಿಗೆ ದರ ಹೆಚ್ಚಳ ಅಗತ್ಯವಿದೆ ಎಂಬುದರ ಬಗ್ಗೆ ಕೂಡಲೇ ಪರಿಶೀಲಿಸಿ ಕ್ರಮವಹಿಸಬೇಕು ಎಂದು ಅಧ್ಯಕ್ಷರು ಸೂಚನೆ ನೀಡಿದರು.

ಸುಗಮ ಸಂಚಾರಕ್ಕಾಗಿ ನಗರದಲ್ಲಿನ ಎಲ್ಲಾ ರಸ್ತೆಗಳಲ್ಲಿನ ತಗ್ಗು ಗುಂಡಿಗಳನ್ನು ತ್ವರಿತಾಗಿ ಮುಚ್ಚುವ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು. ನಗರದ ಎಲ್ಲ ರಸ್ತೆಗಳನ್ನು ಸರಿಪಡಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕಿದೆ. ಇದಕ್ಕಾಗಿ ಸೂಕ್ತ ಅನುದಾನ ಮೀಸಲಿರಿಸುವ ಮತ್ತು ಪಡೆದುಕೊಳ್ಳುವ ಕಾರ್ಯ ಆಗಬೇಕು ಎಂದು ವಿಧಾನ ಪರಿಷತ್ ಸದಸ್ಯರು ಮತ್ತು ಪಾಲಿಕೆಯ ಸದಸ್ಯರು ಸಲಹೆ ಮಾಡಿದರು.

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪೇಟ್ಲಾಬುರ್ಜಾದಿಂದ ಮಾವಿನಕೆರೆಗೆ ಹೋಗುವ ಮುಖ್ಯ ರಸ್ತೆಗೆ ಹಾಗೂ ಮನ್ಸಲಪೂರು ಗ್ರಾಮದ ರಸ್ತೆಗೆ ಹೊಸ ನಾಮಕರಣ ಮಾಡಿ ನಾಮಫಲಕ ಅಳವಡಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ನ್ಯಾಯಾಲಯದ ಮತ್ತು ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಆದೇಶದನ್ವಯ ವಾರ್ಡವಾರು ಬೀದಿ ನಾಯಿಗಳ ಗಣತಿ ಮಾಡುವ ಕುರಿತು ಮತ್ತು ಹೊಸ ಆಧುನಿಕ ಎಬಿಸಿ ಶೇಡ್ ನಿರ್ಮಾಣ ಮಾಡುವ ಬಗ್ಗೆ ಚರ್ಚಿಸಲಾಯಿತು. ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿನ ಪತ್ರಕರ್ತರಿಗೆ ದಾವಣಗೇರಿ ಜಿಲ್ಲೆಯ ಮಾದರಿಯಲ್ಲಿ ಕ್ಷೇಮಾಭಿವೃದ್ಧಿ ನಿಧಿ ಸ್ಥಾಪಿಸಿ, ಮಹಾನಗರ ಪಾಲಿಕೆಯಲ್ಲಿ ಪ್ರತಿ ವರ್ಷದ ಬಜೆಟ್‌ನಲ್ಲಿ ಅನುದಾನ ಮೀಸಲಿಟ್ಟು ಆರೋಗ್ಯ ವಿಮೆ ಸೌಲಭ್ಯ ಒದಗಿಸುವ ಕುರಿತು ಸಭೆಯಲ್ಲಿ ನಿರ್ಣಯಿಸಲಾಯಿತು.

ನಿವೇಶನ ರಹಿತ ಪತ್ರಕರ್ತರಿಗೆ ನಿಯಮಾನುಸಾರ ಅನುಮೋದನೆ ಪಡೆದು ನಿವೇಶನ ಪೂರೈಸುವ ಕುರಿತು ಸಭೆಯಲ್ಲಿ ತೀರ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಪಾಲಿಕೆಯ ಉಪಾಧ್ಯಕ್ಷರಾದ ಸಾಜೀದ್ ಸಮೀರ್, ಪಾಲಿಕೆಯ ಸದಸ್ಯರಾದ ಜಯಣ್ಣ, ಎನ್ ಶ್ರೀನಿವಾಸರೆಡ್ಡಿ ಸೇರಿದಂತೆ ವಿವಿಧ ವಾರ್ಡ್‌ಸದಸ್ಯರು, ಪಾಲಿಕೆಯ ಆಯುಕ್ತರಾದ ಜುಬೀನ್ ಮೊಹಪಾತ್ರ, ಉಪ ಆಯುಕ್ತರಾದ ಸಂತೋಷ ರಾಣಿ ಸೇರಿದಂತೆ ಪಾಲಿಕೆಯ ವಿವಿಧ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಇದ್ದರು.

# ರಿಮ್ಸ್‌ನಲ್ಲಿ ಉಳಿದಿರುವ ಬಿ,ಎಸ್ಸಿ ನರ್ಸಿಂಗ್ ಸೀಟು ಹಂಚಿಕೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 28–ಇಲ್ಲಿನ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ 2025–26ನೇ ಸಾಲಿನಲ್ಲಿ ಕೆಇಎ ಮೂಲಕ ಅಂತಿಮ ಸುತ್ತಿನ ಸೀಟು ಹಂಚಿಕೆಯ ನಂತರ ಸಂಸ್ಥೆಯಲ್ಲಿ ಉಳಿದಿರುವ ಬಿ,ಎಸ್ಸಿ. ನರ್ಸಿಂಗ್ ಸೀಟುಗಳನ್ನು ಕಾಲೇಜಿನ ಆಡಳಿತ ಸಮಿತಿಯ ಮೂಲಕ ಹಂಚಿಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸಂಸ್ಥೆಯಲ್ಲಿ ಬಿ,ಎಸ್ಸಿ. ನರ್ಸಿಂಗ್ ಕೋರ್ಸ್ನ 27 ಹಂಚಿಕೆಯಾಗದೆ ಉಳಿದಿರುವ ಸೀಟುಗಳಿಗೆ ಅಕ್ಟೋಬರ್ 30ರ ಬೆಳಿಗ್ಗೆ 9ರಿಂದ ಮಧ್ಯಾಹ್ನ 1ರವರೆಗೆ ಅರ್ಹ ಅಭ್ಯರ್ಥಿಗಳ ನೊಂದಣಿಯನ್ನು ರಿಮ್ಸ್ ಸರ್ಕಾರಿ ನರ್ಸಿಂಗ್ ಕಾಲೇಜಿನಲ್ಲಿ ಮಾಡಬಹುದಾಗಿದೆ. ಮಧ್ಯಾಹ್ನ 1ರ ನಂತರ ನೊಂದಾಯಿಸಿದ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಕ–ರೆದು ಸೀಟು ಹಂಚಿಕೆಯನ್ನು ಮಾಡಲಾಗುವುದು.

ಸೂಚನೆ: ಕೆಇಎ ವತಿಯಿಂದ ದಾಖಲಾತಿ ಪರಿಶೀಲನೆಯಾಗಿ ಪರಿಶೀಲನಾ ಸ್ಲಿಪ್‌ನ್ನು ಪಡೆದಿರುವ ಎಲ್ಲಾ ಅರ್ಹ ಅಭ್ಯರ್ಥಿಗಳ ನೊಂದಣಿಯನ್ನು ಮಾಡಲಾಗುವುದು. ಕೆಇಎ ವತಿಯಿಂದ ನೊಂದಾಯಿಸಿಕೊಂಡಿರುವ ಅರ್ಹ ವಿದ್ಯಾರ್ಥಿಗಳನ್ನು ಸಿಇಟಿ ನೋಂದಣಿ ಸಂಖ್ಯೆಯನ್ನು ನಮೂದಿಸಿ ಕೆಇಎ ಮೆರಿಟ್ ಸಂ–ಖ್ಯೆ ಆಧಾರದ ಮೇಲೆ ಸೀಟುಗಳನ್ನು ಹಂಚಿಕೆ ಮಾಡಲಾಗುವುದು. ಈ ಸೀಟು ಹಂಚಿಕೆಗೆ ಇದುವರೆಗೂ ಕೆಇಎ ವತಿಯಿಂದ ಯಾವುದೇ ಸೀಟು ಹಂಚಿಕೆಯಾಗದಿರುವ ಅಭ್ಯರ್ಥಿಗಳಿಗೆ ಅವಕಾಶ ನೀಡಲಾಗುವುದು. ಕೆಇಎ ಮೆರಿಟ್ ಸಂಖ್ಯೆ ಆಧಾರದ ಮೇಲೆ ಸೀಟುಗಳನ್ನು ಹಂಚಿಕೆ ಮಾಡಲಾಗುವುದು. ಕೆಇಎ ವತಿಯಿಂದ ದಾಖಲಾತಿ ಪರಿಶೀಲನೆಯಾಗಿ ಪರಿಶೀಲನಾ ಸ್ಲಿಪ್‌ನಲ್ಲಿ ನಮೂದಿಸಿರುವ ಎಲ್ಲಾ ಮೂಲದಾಖಲೆಗಳನ್ನು ಎರಡು ಜೆರಾಕ್ಸ್ ಪ್ರತಿ ಹಾಗೂ ಭಾವಚಿತ್ರಗಳೊಂದಿಗೆ ನಿಗದಿತ ಸಮಯ ಹಾಗೂ ಸ್ಥಳದಲ್ಲಿ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ರಿಮ್ಸ್ ಸರ್ಕಾರಿ ನರ್ಸಿಂಗ್ ಕಾಲೇಜು ಪ್ರಾಂಶುಪಾಲರಾದ ಶ್ರೀಶೈಲ್ ಶಂಕರಶೆಟ್ಟಿ ಮೊ: 9019656541, ಪ್ರಾಂಶುಪಾಲರಾದ ಶ್ರೀನಿವಾಸ ಮೊ: 7676147941, ಡಾಟಾ ಎಂಟ್ರಿ ಆಪರೇಟರ್ ಶೇಖ್ ಅಬ್ದುಲ್ ಮೊ: 7019783990ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಪ್ರಾಂಶುಪಾಲರಾದ ಶ್ರೀಶೈಲ್ ಶಂಕರಶೆಟ್ಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ಟೋಬರ್ 29 ಹಾಗೂ 30 ರಂದು ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಡೆಮೋ ತರಗತಿಗಳು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.28–2025–26ನೇ ಶೈಕ್ಷಣಿಕ ಸಾಲಿಗೆ ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಆಯ್ದ ಮದರಸಾಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅಜೀಂ ಪ್ರೇಮ್ ಜೀ ಫೌಂಡೇಶನ್ ಇವರ ಸಹಯೋಗದೊಂದಿಗೆ ಔಪಚಾರಿಕ ಶಿಕ್ಷಣ ವಿಷಯಗಳಾದ ಕನ್ನಡ, ಇಂಗ್ಲೀಷ್, ವಿಜ್ಞಾನ ಮತ್ತು ಗಣಿತ ವಿಷಯಗಳನ್ನು ಬೋಧಿಸಲು ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ನೇಮಕ ಮಾಡಲು ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಇದೇ ಅಕ್ಟೋಬರ್ 29 ಹಾಗೂ 30 ರಂದು ಬೆಳಿಗ್ಗೆ 10 ಗಂಟೆಯಿಂದ ಡೆಮೋ ತರಗತಿಯನ್ನು ನಿಗದಿಪಡಿಸಲಾಗಿದೆ.

ಇದೇ ಅಕ್ಟೋಬರ್ 29 ರಂದು ಕನ್ನಡ ಮತ್ತು ಇಂಗ್ಲೀಷ ವಿಷಯಗಳ ಡೆಮೋ ತರಗತಿಯನ್ನು ಹಾಗೂ ಅಕ್ಟೋಬರ್ 30 ರಂದು ಗಣಿತ ಮತ್ತು ವಿಜ್ಞಾನ ವಿಷಯಗಳ ಡೆಮೋ ತರಗತಿಯು ಕಲಬುರಗಿಯ ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆ, ಎಮ್.ಎಸ್.ಕೆ ಮಿಲ್, ಡಬರಾಬಾದ್ ಕ್ರಾಸ್ ಲಕ್ಷ್ಮೀನಗರ ಕಲಬುರಗಿ ಇಲ್ಲಿ ಹಮ್ಮಿಕೊಳ್ಳಲಾಗಿದ್ದು, ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಆಯ್ಕೆಯಾದ ಅರ್ಹ ಅಭ್ಯರ್ಥಿಗಳು ಡೆಮೋ ತರಗತಿಗಳಿಗೆ ಹಾಜರಾಗಬೇಕೆಂದು ಕಲಬುರಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯಲಬುರ್ಗಾದಲ್ಲಿ ಕಾಂಗ್ರೆಸ್ ಪಕ್ಷದಿಂದ ಮತಗಳ್ಳತನ ನಿಲ್ಲಿಸಿ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ಪಟ್ಟಣದಲ್ಲಿ ಬ್ಲಾಕ್ ಕಾಂಗ್ರೆಸ್ ಪಕ್ಷದಿಂದ ಹಮ್ಮಿಕೊಂಡಿದ್ದ ಮತಗಳ್ಳತನ ನಿಲ್ಲಿಸಿ ಅಭಿಯಾನದ ನಿಮಿತ್ಯ ಸಹಿ ಸಂಗ್ರಹ ಕಾರ್ಯಕ್ರಮ ನಡೆಯಿತು. ಎಐಸಿಸಿ ಕಾರ್ಯದರ್ಶಿ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಮಯೂರ ಜಯಕುಮಾರ ಅವರ ನೇತೃತ್ವದಲ್ಲಿ ಮತಗಳ್ಳತನ ನಿಲ್ಲಿಸಿ ಅಭಿಯಾನವನ್ನು ನಡೆಸಲಾಯಿತು.

ಈ ವೇಳೆ ಪಕ್ಷದ ಜಿಲ್ಲಾ ಮತ್ತು ತಾಲೂಕು ಅಧ್ಯಕ್ಷರು , ಯಲಬುರ್ಗಾ ಹಾಗೂ ಕುಕುನೂರು ತಾಲೂಕಿನ ಗ್ಯಾರಂಟಿ ಯೋಜನೆಯ ಅಧ್ಯಕ್ಷರು ಪದಾಧಿಕಾರಿಗಳು, ಮುಖಂಡರು ಕಾರ್ಯಕರ್ತರು ಹಾಗೂ ಸಾರ್ವಜನಿಕರು ಇದ್ದರು.

## ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕರಾಗಿ ಕೃಷ್ಣ ಉಕ್ಕುಂದ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರಾಗಿ ಕೃಷ್ಣ ಸಿ. ಉಕ್ಕುಂದ ಅವರು ಇತ್ತೀಚೆಗೆ ಅಧಿಕಾರ ವಹಿಸಿಕೊಂಡಿದ್ದಾರೆ.

ಸರ್ಕಾರದ ಅಧಿಸೂಚನೆಯನ್ವಯ ಕೊಪ್ಪಳ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕಚೇರಿಯನ್ನು ಜಂಟಿ ನಿರ್ದೇಶಕರ ಕಚೇರಿಯಾಗಿ ಉನ್ನತೀಕರಿಸಿ, ಈ ಹುದ್ದೆಗೆ ಕೃಷ್ಣ ಸಿ. ಉಕ್ಕುಂದ ಅವರಿಗೆ ಬಡ್ತಿ ನೀಡಲಾಗಿರುತ್ತದೆ. ಸಂಬಂಧಿಸಿದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ರಹಸ್ಯ ಪತ್ರಗಳು ಹಾಗೂ ಇನ್ನಿತರ ವಿಷಯಗಳನ್ನು ತೋಟಗಾರಿಕೆ ಜಂಟಿ ನಿರ್ದೇಶಕರು, ಜಿಲ್ಲಾ ಪಂಚಾಯತ್, ಕೊಪ್ಪಳ, ತೋಟಗಾರಿಕೆ ಜಂಟಿ ನಿರ್ದೇಶಕರ ಕಚೇರಿ, ಎಲ್.ಐ.ಸಿ.ಆಫೀಸ್ ಎದುರುಗಡೆ, ಕೊಪ್ಪಳ-583231, ಮೊಬೈಲ್ ಸಂಖ್ಯೆ:-9448999237, ಇಮೇಲ್:jdhkoppal@gmail.com ವಿಳಾಸಕ್ಕೆ ವ್ಯವಹರಿಸುವಂತೆ ತೋಟಗಾರಿಕೆ ಜಂಟಿ ನಿರ್ದೇಶಕರ ಕಛೇರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

## ಏಪ್ರಿಲ್ ನಿಂದ ಸೆಪ್ಟೆಂಬರ್-2025 ರವರೆಗೆ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಕಾಯಿದೆ ಉಲ್ಲಂಘನೆಯಡಿ 1,82,000 ಜನರಿಗೆ ದಂಡ ವಿಧಿಸಲಾಗಿದೆ: ವಿ.ಎಸ್.ಉಗ್ರಪ್ಪ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.28-ರಾಜ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನವನ್ನು ನಿಷೇಧಿಸುವ, "ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ನಿಯಂತ್ರಣ ಕಾಯ್ದೆ, 2003 ಅಡಿಯಲ್ಲಿ ಏಪ್ರಿಲ್ ನಿಂದ ಸೆಪ್ಟೆಂಬರ್-2025 ತಿಂಗಳವರೆಗೆ ಸುಮಾರು 1,82,000 ಜನರು ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಕಾಯಿದೆಯನ್ನು ಉಲ್ಲಂಘನೆ ಮಾಡಿರುವವರ ವಿರುದ್ಧ ಕ್ರಮಕೈಗೊಂಡು ದಂಡ ವಿಧಿಸಲಾಗಿದೆ ಎಂದು ಮಹಿಳೆ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ, ಅತ್ಯಾಚಾರ ನಿಯಂತ್ರಿಸುವ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದ ಅಧ್ಯಕ್ಷರಾದ ವಿ.ಎಸ್. ಉಗ್ರಪ್ಪ ತಿಳಿಸಿದ್ದಾರೆ.

ಅವರು, ಇತ್ತೀಚೆಗೆ ಮಹಿಳೆ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ, ಅತ್ಯಾಚಾರ ನಿಯಂತ್ರಿಸುವ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದ ಕುರಿತು ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿದ ಅವರು, ಶಾಲಾ/ಕಾಲೇಜುಗಳಲ್ಲಿ 100 ಮೀ. ವ್ಯಾಪ್ತಿಯಲ್ಲಿ 2470 ಜನರು ಧೂಮಪಾನ ನಿಷೇಧ ಕಾಯಿದೆಯನ್ನು ಉಲ್ಲಂಘನೆ ಮಾಡಿದವರಿಗೆ ದಂಡ ವಿಧಿಸಲಾಗಿದೆ. ಇದರಿಂದಾಗಿ ರೂ. 45 ಲಕ್ಷ ಪ್ರತಿ ವರ್ಷ ದಂಡ ಸಂಗ್ರಹವಾಗುತ್ತಿದೆ. ಈ ಪೈಕಿ, 21 ವರ್ಷದೊಳಗಿನ ಯುವಜನರ ದತ್ತಾಂಶವನ್ನು ನೀಡಲು ಆರೋಗ್ಯ ಇಲಾಖೆಗೆ ಸೂಚಿಸಿದರು.

21 ವರ್ಷದೊಳಗಿನ ಯುವಜನರನ್ನು ಧೂಮಪಾನ, ಮದ್ಯಪಾನ, ತಂಬಾಕು ಸೇವನೆ, ಡ್ರಗ್ಸ್ ಸೇವೆಯಂತಹ ಮಾದಕ ವಸ್ತುಗಳ ಸೇವನೆಯಿಂದ ವ್ಯಸನ ಮುಕ್ತರನ್ನಾಗಿಸಲು ಮಾದಕ ವಸ್ತು ವ್ಯಸನ ಮುಕ್ತ ಕೇಂದ್ರಗಳ ಮೂಲಕ ಏಪ್ರಿಲ್ ನಿಂದ ಸೆಪ್ಟೆಂಬರ್-2025ರವರೆಗೆ ಸುಮಾರು 1 ಲಕ್ಷ ಯುವಜನರಿಗೆ ಸಮಾಲೋಚನೆಯನ್ನು ನೀಡಲಾಗುತ್ತಿದೆ.

ಆರೋಗ್ಯ ಇಲಾಖೆ ಮತ್ತು ನಿಮಾನ್ಸ್ ಸಹಯೋಗದಲ್ಲಿ ಟೆಲಿಮಾನಸ್ 14416 ಸಹಾಯವಾಣಿಯನ್ನು ತೆರೆಯಲಾಗಿದೆ. ಈ ಸಹಾಯವಾಣಿ ಮೂಲಕ ಮಾದಕ ವ್ಯಸನ ಪೀಡಿತ ಮಕ್ಕಳ ಮುಂದಿನ ಭವಿಷ್ಯವನ್ನು ಈ ಸುಧಾರಿಸಲು ಅಗತ್ಯ ಸಹಾಯ ಮತ್ತು ಸಮಾಲೋಚನೆಯನ್ನು

ಪಡೆಯಬಹುದಾಗಿದೆ. ದೃಶ್ಯ ಮಾಧ್ಯಮಗಳು ಅತ್ಯಾಚಾರ, ಮಹಿಳಾ ದೌರ್ಜನ್ಯ ಆತ್ಮಹತ್ಯೆ ಮತ್ತು ಇತರ ಪ್ರಕರಣಗಳನ್ನು ವೈಭವೀಕರಿಸಿ ಭಯಗೊಳ್ಳುವಂತೆ ಪ್ರಸಾರ ಮಾಡುವುದನ್ನು ನಿಯಂತ್ರಿಸಬೇಕು. ಪ್ರೆಸ್ ಕೌನ್ಸಿಲ್ ಮಾರ್ಗಸೂಚಿಗಳನ್ನು ದೃಶ್ಯ ಮಾಧ್ಯಮಗಳು ಅಳವಡಿಸಿಕೊಳ್ಳಬೇಕು. ಯಾರು ಈ ರೀತಿಯ ಪ್ರಕರಣಗಳಿಗೆ ಪ್ರಚಾರ ನೀಡುತ್ತಾರೋ ಅವರ ಮೇಲೆ ಮಹಿಳೆಯರ ಅಸಭ್ಯ ಪ್ರಾತಿನಿಧ್ಯ(ನಿಷೇಧ) ಕಾಯ್ದೆ-1986 (Indescent Representation of Women (Prohibition) Act-1986) ರಡಿ ಸ್ವಯಂ ಪ್ರೇರಿತವಾಗಿ ಕ್ರಮವನ್ನು ದೃಶ್ಯ ಮಾಧ್ಯಮಗಳು ತೆಗೆದುಕೊಳ್ಳಬೇಕು. ಅಥವಾ ಕೇಬಲ್ ಆಕ್ಟ್ ಇದ್ದರೆ ಆ ಕಾಯಿದೆಯಡಿಯಲ್ಲಿ ಕ್ರಮವಹಿಸಲು, ಅಥವಾ ಫಿಲ್ಮ್ ಆಕ್ಟ್ ಇದ್ದರೆ ಆ ಕಾಯಿದೆಯಡಿಯಲ್ಲಿ ಕ್ರಮ ವಹಿಸಲು, ಪತ್ರಿಕೋದ್ಯಮಕ್ಕೆ ಸಂಬಂಧಿಸಿದ್ದರೆ ಪತ್ರಿಕೋದ್ಯಮ ಕಾಯಿದೆಯಡಿ ಕ್ರಮವಹಿಸಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಬೇಕು. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಮಹಿಳಾ ಆಯೋಗ ಹಾಗೂ ವಿವಿಧ ಇಲಾಖೆಯೊಂದಿಗೆ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕೆಂದು ಸೂಚಿಸಲಾಯಿತು.

## ಕರ್ನಾಟಕ ಮಾಧ್ಯಮ ಅಕಾಡೆಮಿಯಿಂದ ವಿವಿಧ ದತ್ತಿನಿಧಿ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.28-ಕರ್ನಾಟಕ ಮಾಧ್ಯಮ ಅಕಾಡೆಮಿಯು 2025ನೇ ಸಾಲಿನ ವಿವಿಧ ದತ್ತಿನಿಧಿ ಪ್ರಶಸ್ತಿಗಳಿಗಾಗಿ ಪತ್ರಕರ್ತರಿಂದ ಲೇಖನಗಳನ್ನು ಆಹ್ವಾನಿಸಿದೆ.

ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ರಾಜ್ಯದ ವಿವಿಧ ಮಾಧ್ಯಮ ಸಂಸ್ಥೆಗಳು ಈ ಕೆಳಕಂಡಂತೆ ದತ್ತಿನಿದಿ ಪ್ರಶಸ್ತಿಗಳನ್ನು ಸ್ಥಾಪಿಸಿವೆ: ಬೆಂಗಳೂರಿನ 'ಅಭಿಮಾನಿ ಪ್ರಕಾಶನ' ಸಂಸ್ಥೆಯು ರಾಜ್ಯ ಮತ್ತು ಜಿಲ್ಲಾಮಟ್ಟದ ಕನ್ನಡ ಪತ್ರಿಕೆಗಳಲ್ಲಿ 'ಸಾಮಾಜಿಕ ಸಮಸ್ಯೆ' ಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಲೇಖನ-ವರದಿಗಳಿಗೆ "ಅಭಿಮಾನಿ ಪ್ರಶಸ್ತಿ", ಮೈಸೂರಿನ "ಮೈಸೂರು ದಿಗಂತ" ಪತ್ರಿಕಾ ಸಂಸ್ಥೆಯು "'ಮಾನವೀಯ ಸಮಸ್ಯೆ' ಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಲೇಖನ-ವರದಿಗಳಿಗೆ "ಮೈಸೂರು ದಿಗಂತ ಪ್ರಶಸ್ತಿ", ಬೆಂಗಳೂರಿನ ಅಭಿಮನ್ಯು ಪತ್ರಿಕೆ ಸಂಸ್ಥೆಯು ದಮನಿತ ಸಮುದಾಯಗಳ ಪರ ದನಿಯಾದ ಅತ್ಯುತ್ತಮ ಲೇಖನ/ಅಂಕಣ/ಸಂಪಾದಕೀಯ/ಪರಿಣಾಮಕಾರಿ ವರದಿಗೆ "ಅಭಿಮನ್ಯು ಪ್ರಶಸ್ತಿ", ಬೆಂಗಳೂರಿನ "ಪ್ರಜಾ ಸಂದೇಶ ಪತ್ರಿಕಾ ಸಂಸ್ಥೆಯು ಶೋಷಣೆಯನ್ನು ಪರಿಣಾಮಕಾರಿಯಾಗಿ ಬಿಂಬಿಸುವ ಲೇಖನಕ್ಕೆ : ಪ್ರಜಾ ಸಂದೇಶ ದತ್ತಿ ಪ್ರಶಸ್ತಿ"ಗಳನ್ನು ಸ್ಥಾಪಿಸಿವೆ. ಈ ದತ್ತಿ ಪ್ರಶಸ್ತಿಗಳು ತಲಾ ಹತ್ತು ಸಾವಿರ ರೂ ನಗದು ಬಹುಮಾನ ಒಳಗೊಂಡಿವೆ.

ಈ ಪ್ರಶಸ್ತಿಗಳಿಗೆ ಆಸಕ್ತ ಪತ್ರಕರ್ತರು 01-01-2025 ರಿಂದ 25-10-2025ರ ವರೆಗೆ ಪ್ರಕಟವಾಗಿರುವ ತಮ್ಮ ಒಂದು ಲೇಖನ-ವರದಿಯನ್ನು ಕಳುಹಿಸಬಹುದು.

ಕನ್ನಡ ದೈನಿಕ-ಟಿವಿ-ವಾಹಿನಿ, ವಾರ ಪತ್ರಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರು ಹೆಸರು (ಬೈಲೈನ್) ಬರೆದಿರುವ ವರದಿ ಲೇಖನಿಗಳಿಗೆ ಮಾತ್ರ ಪ್ರಶಸ್ತಿಗೆ ಅವಕಾಶ. ಲೇಖನ-ವರದಿಗಳಲ್ಲಿ ಹೆಸರು (ಬೈಲೈನ್) ಪ್ರಕಟವಾಗದಿದ್ದಲ್ಲಿ ಸಂಬಂಧಿಸಿದ ಪತ್ರಿಕೆಯ ಸಂಪಾದಕರಿಂದ ದೃಢೀಕರಣ ಪತ್ರವನ್ನು ಪಡೆದು ಕಳುಹಿಸಬೇಕು.

ಲೇಖನ ವರದಿಗಳ ಲಕೋಟೆಯಲ್ಲಿ ಯಾವ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸುತ್ತಿರುವುದು ಎಂಬುದನ್ನು 'ಅಭಿಮಾನಿ ಪ್ರಶಸ್ತಿ- 2025' , 'ಮೈಸೂರು ದಿಗಂತ ಪ್ರಶಸ್ತಿ-2025', "ಅಭಿಮನ್ಯು ಪ್ರಶಸ್ತಿ-2025" ಹಾಗೂ "ಪ್ರಜಾ ಸಂದೇಶ ದತ್ತಿ ಪ್ರಶಸ್ತಿ-2025" ಎಂದು ಸ್ಪಷ್ಟವಾಗಿ ಬರೆದು ಲೇಖನಗಳನ್ನು ಇದೇ 12-11-2025ರ ಒಳಗಾಗಿ ಕಾರ್ಯದರ್ಶಿ, ಕರ್ನಾಟಕ ಮಾಧ್ಯಮ ಅಕಾಡೆಮಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ ಡಾ.ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು-560001. ಇವರಿಗೆ ಅಂಚೆ ಮೂಲಕ ಅಥವಾ ಖುದ್ದಾಗಿ ತಲುಪಿಸಬಹುದು ಎಂದು ಅಕಾಡೆಮಿಯ ಅಧ್ಯಕ್ಷರಾದ ಆಯೇಶಾ ಖಾನಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳೊಂದಿಗೆ ತಾಯಿ ಅನುಮಾನಸ್ಪದವಾಗಿ ನೇಣಿಗೆ ಶರಣು..!!




ಮಲ್ಲಮ್ಮ ನುಡಿ ವಾರ್ತೆ

ಕುಕನೂರು : ತಾಲೂಕಿನ ಬೆಣಕಲ್ ಗ್ರಾಮದಲ್ಲಿ ಘೋರ ದುರಂತ ಒಂದು ನಡೆದಿದ್ದು, ಇಬ್ಬರು ಮಕ್ಕಳ ಜೊತೆಗೆ ತಾಯಿ ಓರ್ವಳು ಅನುಮಾನಸ್ಪದವಾಗಿ ನೇಣಿಗೆ ಶರಣಾಗಿದ್ದಾಳೆ ಎಂದು ತಿಳಿದು ಬಂದಿದೆ. ಈ ಘಟನೆ ಮದ್ಯಾಹ್ನ 3 ಗಂಟೆಗೆ ಸುಮಾರಿಗೆ ತಮ್ಮ ಸ್ವಗೃಹದಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಮೂವರು ದೇಹಗಳು ಪತ್ತೆಯಾಗಿದೆ ಎಂದು ತಿಳಿದು ಬಂದಿದೆ.

ಹೌದು, ತಾಲೂಕಿನ ಬೆಣಕಲ್ ಗ್ರಾಮದ ಮೃತರಾದ ಲಕ್ಷ್ಮಮ್ಮ ಹನುಮೇಶ್ ಬಜೇಂತ್ರಿ(ವಯಸ್ಸು-30ವರ್ಷ), ಮೂರು ವರ್ಷದ ರಮೇಶ್ ಹಾಗೂ ಒಂದು ವರ್ಷದ ಹೆಣ್ಣು ಮಗು ಜಾನ್ವಿ ಎಂದು ಗುರುತಿಸಲಾಗಿದೆ. ಇವರ ಈ ಸಾವಿಗೆ ನಿಖರ ಕಾರಣ ತಿಳಿದುಬಂದಿಲ್ಲ, ಹೆಚ್ಚಿನ ಮಾಹಿತಿಗಾಗಿ ಈಗಾಗಲೇ ಪೊಲೀಸರು ತನಿಖೆ ಆರಂಭಿಸಿದ್ದಾರೆ ಎಂದು ಮಾಹಿತಿ ಲಭ್ಯವಾಗಿದೆ. ಈ ಪ್ರಕರಣವು ಕುಕನೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಈ ವಿಚಾರ-ಕ್ಕೆ ಸಂಬಂಧಿಸಿದಂತೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

## ಛಲದಿಂದ ಬದುಕಲು ಸ್ವಾವಲಂಬಿ ಉದ್ಯೋಗ ಮಾಡಿ: ಮೀರಾ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ತಾಲ್ಲೂಕಿನ ಅಳವಂಡಿ ಗ್ರಾಮದ ಮಹಿಳಾ ಒಕ್ಕೂಟ ಕೇಂದ್ರದ ಸಭಾ ಭವನದಲ್ಲಿ ಕೃಷಿ ಇಲಾಖೆ, ಜಲನಯನ ಅಭಿವೃದ್ಧಿ ಇಲಾಖೆ, ಎಸ್.ಬಿ.ಐ.ಆರ್ ಸೆಟಿ ಸಂಸ್ಥೆ ಕೊಪ್ಪಳ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗ್ರಾಮೀಣ ಸ್ವಸಹಾಯ ಗುಂಪಿನ ಸದಸ್ಯರಿಗೆ ಎರಡು ದಿನಗಳ ಉದ್ಯಮಶೀಲತಾ ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದ ಸಾಮಾಜಿಕ ಕಾರ್ಯಕರ್ತರಾದ ಬೆಂಗಳೂರಿನ ಮೀರಾ ಅವರು ಮಾತನಾಡಿ ಗ್ರಾಮೀಣ ಭಾಗದ ಮಹಿಳೆಯರಲ್ಲಿ ಇಂದಿಗೂ ಪಾರಂಪರಿಕ ಆರ್ಥಿಕ ನೀತಿಯನ್ನು ಮುಂದುವರೆಸಿದ್ದಾರೆ ಅವರಿಗೆ ಸೂಕ್ತ ನೆರವು ಸಿಕ್ಕರೆ ಯಶಸ್ವಿ ಉದ್ಯಮಿಯಾಗಿ ಹೊರಹೊಮ್ಮುತ್ತಾರೆ. ಮಹಿಳೆಯರು ಛಲದಿಂದ ಬದುಕಲು ಸ್ವಾವಲಂಬಿ ಉದ್ಯೋಗ ಮಾಡಿ ಎಂದು ಸಲಹೆ ನೀಡಿ ಸ್ವಯಂ ಉದ್ಯೋಗದ ಮಾಹಿತಿ ನೀಡಿದರು.

ಇದೇ ವೇಳೆ ಟೀಮ್ ಲೀಡರ್ ಗವಿಸಿದ್ದಪ್ಪ, ಮಹಿಳಾ ಧ್ವನಿ ಸಂಸ್ಥೆಯ ಪ್ರಿಯದರ್ಶಿನಿ ಮುಂಡರಗಿಮಠ, ಉಪನ್ಯಾಸಕಿ ಗೀತಾ ಹಾಗೂ ಒಕ್ಕೂಟದ ಪದಾಧಿಕಾರಿಗಳು ಮತ್ತು ಗ್ರಾಮೀಣ ಮಹಿಳೆಯರು ಉಪಸ್ಥಿತಿ ಇದ್ದರು.

## ಕನೆಕ್ಟ್-2025; ಪ್ರವಾಸೋದ್ಯಮ ಭಾಗಿದಾರರು ಭಾಗವಹಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.28-ಪ್ರಸ್ತಕ ಸಾಲಿನ ಕರ್ನಾಟಕ ಇಂಟರ್ ನ್ಯಾಷನಲ್ ಟ್ರಾವೆಲ್ ಎಕ್ಸೋ-2025ರ ಅಂಗವಾಗಿ ಕರ್ನಾಟಕ ಟೂರಿಸಂ ಸೊಸೈಟಿ ಇವರ ಸಹಯೋಗದೊಂದಿಗೆ ಅ.31ರಂದು ಗದಗ ಜಿಲ್ಲೆಯ ಮಹಾತ್ಮಗಾಂಧಿ ಆರ್‌ಡಿಪಿಆರ್ ವಿಶ್ವವಿದ್ಯಾಲಯದಲ್ಲಿ "ಕನೆಕ್ಟ್-2025"ರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಆಸಕ್ತ ಬಳ್ಳಾರಿ ಜಿಲ್ಲೆಯ ಪ್ರವಾಸೋದ್ಯಮ ಭಾಗಿದಾರರು ಭಾಗವಹಿಸಬಹುದು ಎಂದು ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರಾದ ಹೆಚ್. ಕೆ.ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಲಿದೆ.

ಪ್ರವಾಸೋದ್ಯಮ ಕ್ಷೇತ್ರದಲ್ಲಿ ಈಗಾಗಲೇ ತೊಡಗಿಸಿಕೊಂಡಿರುವ ಭಾಗಿದಾರರು ಹಾಗೂ ಹೂಡಿಕೆದಾರರು ಪ್ರವಾಸೋದ್ಯಮ ಅಭಿವೃದ್ಧಿ ಪ್ರಯೋಜನ ಪಡೆಯುವವರು ಹಾಗೂ ಕರ್ನಾಟಕ ಪ್ರವಾಸೋದ್ಯಮ ನೀತಿಯಡಿ ಪ್ರವಾಸೋದ್ಯಮ ಉತ್ಪನ್ನಗಳು ಮತ್ತು ಅನುಭವಗಳಲ್ಲಿ 25 ಯೋಜನೆ ಒಳಗೊಂಡಂತೆ ಚರ್ಚಿಸಿ, ಪ್ರವಾಸೋದ್ಯಮ ಯೋಜನೆಗಳಿಗೆ ಭಾಗಿದಾರರು ಹಾಗೂ ಬಂಡವಾಳ ಹೂಡಿಕೆದಾರರಿಗೆ ಅನುಕೂಲವಾಗುವಂತೆ ಅಗತ್ಯ ಮಾಹಿತಿ ಪಡೆಯಬಹುದು ಹಾಗೂ ತಮ್ಮ ಅಮೂಲ್ಯ ಸಲಹೆ-ಸೂಚನೆ ನೀಡಬಹುದು. ಆಸಕ್ತರು ಕಾರ್ಯಕ್ರಮದಲ್ಲಿ ತಪ್ಪದೇ ಭಾಗವಹಿಸಿ, ಇದರ ಸದುಪಯೋಗಪಡೆದುಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ವಿಜಯನಗರ ಜಿಲ್ಲೆಯ ಕಮಲಾಪುರದ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರ ಕಚೇರಿ ಅಥವಾ ಬಳ್ಳಾರಿ ಜಿಲ್ಲೆಯ ಹಿರಿಯ ಪ್ರವಾಸಿ ಪ್ರವರ್ತಕರಾದ ಶ್ರೀಹರಿ ಮಾಸನೂರು (ಮೊ.7892722443) ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಳ್ಳಾರಿಯಲ್ಲಿ ಸಂಭ್ರಮದ ಯುವಜನೋತ್ಸವ ಕಾರ್ಯಕ್ರಮ ಯುವಜನರು ದೇಶದ ಸಂಪತ್ತು: ಕೆ.ಇ ಚಿದಾನಂದಪ್ಪ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.28-ಯುವಜನರು ದೇಶದ ಸಂಪತ್ತು. ಯುವಪೀಳಿಗೆ ಸದಾ ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿರಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ ಚಿದಾನಂದಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲೆಯ ಸಮಸ್ತ ಸಂಘ ಸಂಸ್ಥೆಗಳ ಇವರ ಸಹಯೋಗದಲ್ಲಿ ನಗರದ ಜಿಲ್ಲಾ ಕ್ರೀಡಾಂಗಣ ರಸ್ತೆಯ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ಯುವಜನೋತ್ಸವ-2025-26 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬ ಯುವಕ-ಯುವತಿಯರಲ್ಲಿ ವಿಭಿನ್ನ ಹಾಗೂ ವಿಶಿಷ್ಟವಾದ ಪ್ರತಿಭೆಯನ್ನು ಹೊಂದಿರುತ್ತಾರೆ. ಸಂಕಲ್ಪ ಇಟ್ಟುಕೊಂಡು ಗುರಿ ತಲುಪಿದರೆ, ಯಶಸ್ಸು ನಿಮ್ಮದಾಗುತ್ತದೆ. ವಿದ್ಯಾಭ್ಯಾಸದ ಜೊತೆಗೆ ಅನೇಕ ರಂಗಗಳಲ್ಲಿ ಯುವಕರು ತಮ್ಮನ್ನು ತಾವು ತೊಡಗಿಸಿಕೊಂಡು ಮುನ್ನಡೆಯಬೇಕು ಎಂದು ಕಿವಿಮಾತು ಹೇಳಿದರು.

ಕುಟುಂಬ ಹಿನ್ನಲೆಯಲ್ಲಿ ಅನೇಕ ಸಮಸ್ಯೆಗಳಿದ್ದರೂ, ಯುವಜನ ತಮ್ಮ ಗುರಿಯನ್ನು ತಲುಪಲು ಛಲ ಬಿಡದೆ, ತಮ್ಮ ಕನಸುಗಳನ್ನು ಕಟ್ಟಿಕೊಳ್ಳುವ ಕೆಲಸ ಮಾಡಬೇಕು. ಯುವಕರಲ್ಲಿ ಮುಖ್ಯವಾಗಿ ಒಳ್ಳೆಯ ಗುಣ ಮತ್ತು ಸಂಸ್ಕೃತಿ ಅಳವಡಿಸಿಕೊಂಡಾಗ ಮಾತ್ರ ಎಲ್ಲವನ್ನೂ ಪಡೆಯಲು ಸಾಧ್ಯ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಯುವ ಸಮುದಾಯವು ಮೊಬೈಲ್ ಗೀಳಿಗೆ ಬೀಳದೇ ಹಾಗೂ ಮಾದಕ ವಸ್ತುಗಳಿಂದ ದೂರವಿರಬೇಕು. ಪೋಷಕರ ವಿಶ್ವಾಸಕ್ಕೆ ಅಗೌರವ ತರದೇ ಯುವಕರು ಜೀವನದಲ್ಲಿ ಒಳ್ಳೆಯ ದಾರಿಯನ್ನು ಆಯ್ದುಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಇಂತಹ ಯುವಜನೋತ್ಸವ ಕಾರ್ಯಕ್ರಮವನ್ನು ಯುವಕರಿಗಾಗಿ ಆಯೋಜಿಸಲಾಗುತ್ತಿದ್ದು, ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ಭಾಗವಹಿಸಬೇಕು. ಕ್ರೀಡಾ ಇಲಾಖೆಯು ಇದರ ಬಗ್ಗೆ ಗಮನ ಹರಿಸಿ ಮುಂದಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ರೀತಿಯಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಕಲಾವಿದರ ಒಕ್ಕೂಟ ಸಂಘದ ಅಧ್ಯಕ್ಷ ಯಲ್ಲನಗೌಡ ಶಂಕರಬಂಡೆ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಜೀವನದ ಸ್ವಾರಸ್ಯವನ್ನು ಗೀಗಿ ಪದ ಹಾಡುವ ಮೂಲಕ ಯುವಕ ಯುವತಿಯರಿಗೆ ತಿಳಿಸಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ. ಗ್ರೇಸಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಯುವ ಸಬಲೀಕರಣ ಇಲಾಖೆಯಿಂದ ಯುವಜನರನ್ನು ಪ್ರೋತ್ಸಾಹಿಸಲು ಇಂತಹ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಯುವಕರು ತಮ್ಮಲ್ಲಿನ ಕಲೆ ಮತ್ತು ಪ್ರತಿಭೆಗಳನ್ನು ಅನಾವರಣಗೊಳಿಸಲು ಉತ್ತಮ ವೇದಿಕೆಯಾಗಿದೆ. ಇಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಹೋಗಬಹುದು. ಯುವಕ-ಯುವತಿಯರು ವೇದಿಕೆ ಬಳಸಿಕೊಂಡು ತಮ್ಮ ಕಲೆಗಳ ಪ್ರದರ್ಶನ ನೀಡಬೇಕು ಹಾಗೂ ಬಳ್ಳಾರಿ ಜಿಲ್ಲೆಗೆ ಕೀರ್ತಿ ತರಬೇಕು ಎಂದು ಕರೆ ನೀಡಿದರು.

ನಂತರದಲ್ಲಿ ವಿವಿಧ ಶಾಲಾ - ಕಾಲೇಜು ವಿದ್ಯಾರ್ಥಿಗಳಿಂದ ಜಾನಪದ ನೃತ್ಯ, ಜಾನಪದ ಗೀತೆ, ಕಥೆ ಬರೆಯುವುದು, ಚಿತ್ರಕಲೆ, ಭಾಷಣ, ಕವಿತೆ, ವಿಜ್ಞಾನ ಮೇಳ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಕಾರ್ಯಕ್ರಮದಲ್ಲಿ ವಿವಿಧ ಗಣ್ಯರಿಗೆ ಹಾಗೂ ಜಾನಪದ ಕಲಾವಿದರಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಾಹಿತಿ ಹಾಗೂ ಸಹಾಯಕ ಪ್ರಾಧ್ಯಾಪಕ ಡಾ.ಶಾಮ್ ಮೂರ್ತಿ, ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯ ಕನ್ನಡ ಅಧ್ಯಾಯನ ವಿಭಾಗದ ಉಪನ್ಯಾಸಕರಾದ ಡಾ.ಶಕೀಲಾ, ಮಾತೃಮಹಿಳಾ ಮಂಡಳಿ ಅಧ್ಯಕ್ಷರಾದ ಪುಷ್ಪ ಚಂದ್ರಶೇಖರ, ಬಿಐಟಿಎಂ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ರವೀಂದ್ರ ಹಿರೇಮಠ, ಕೊರ್ಲಗುಂದಿ ಬಸವನಗೌಡ, ವೀರಶೈವ ಕಾಲೇಜಿನ ಉಪನ್ಯಾಸಕ ವೀರೇಶ್ ಸ್ವಾಮಿ, ಸೇರಿದಂತೆ ಕಾಲೇಜು ವಿದ್ಯಾರ್ಥಿಗಳು, ಯುವಕರು ಹಾಗೂ ಮತ್ತಿತರು ಉಪಸ್ಥಿತರಿದ್ದರು.

## ಬಳ್ಳಾರಿ; ಕರ್ನಾಟಕ ಕಾರ್ಯನಿರತ ಪತ್ರಕರ್ತ ಸಂಘದ ಚುನಾವಣೆ: 44 ನಾಮಪತ್ರ ಸ್ವೀಕೃತ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.28:ಕರ್ನಾಟಕ ಕಾರ್ಯನಿರತ ಪತ್ರಕರ್ತ ಸಂಘದ ಬಳ್ಳಾರಿ ಜಿಲ್ಲಾ ಘಟಕದ 2025-2028ರ ಅವಧಿಯ ಚುನಾವಣೆಗೆ ಒಟ್ಟು 25 ಸ್ಥಾನಗಳಿಗೆ 44 ನಾಮಪತ್ರಗಳು ಸಲ್ಲಿಕೆಯಾಗಿದ್ದು, ಅ.28ರಂದು ನಾಮಪತ್ರ ಪರಿಶೀಲನೆ ಜರುಗಿದ್ದು, ಯಾವುದೇ ನಾಮಪತ್ರಗಳು ತಿರಸ್ಕಾರಗೊಳ್ಳದೇ ಎಲ್ಲ 44 ನಾಮಪತ್ರಗಳು ಸ್ವೀಕೃತಗೊಂಡಿವೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತ ಸಂಘದ ಜಿಲ್ಲಾ ಚುನಾವಣೆ ಅಧಿಕಾರಿ ನಾಗರಾಜ ಎಸ್. ಮಾಹಿತಿ ನೀಡಿದ್ದಾರೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತ ಸಂಘದ ಜಿಲ್ಲಾ ಘಟಕದ ಚುನಾವಣೆಗೆ ಅ.19ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಿತ್ತು. ಅ.27ರವರೆಗೆ ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿತ್ತು.

ಜಿಲ್ಲಾ ಘಟಕದ ಅಧ್ಯಕ್ಷ ಒಂದು ಸ್ಥಾನಕ್ಕೆ ನಾಲ್ಕು ನಾಮಪತ್ರ ಸಲ್ಲಿಕೆಯಾಗಿದ್ದು ಕೆ.ಮಲ್ಲಯ್ಯ, ವೆಂಕಟೇಶ ದೇಸಾಯಿ, ವಿ.ರವಿ, ಎನ್.ವೀರಭದ್ರಗೌಡ. ರವರು ನಾಮಪತ್ರ ಸಲ್ಲಿಸಿದ್ದಾರೆ.

ಜಿಲ್ಲಾ ಉಪಾಧ್ಯಕ್ಷ ಮೂರು ಸ್ಥಾನಕ್ಕೆ ಎನ್.ಗುರುಶಾಂತ, ಎ.ವಾಗೇಶ, ಕೆ.ಮಲ್ಲಿಕಾರ್ಜುನ, ಕೆ.ಮಲ್ಲಯ್ಯ, ಬಿ.ರಸೂಲ್ ಸೇರಿ ಐದು ಜನ ನಾಮಪತ್ರ ಸಲ್ಲಿಸಿದ್ದಾರೆ.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಒಂದು ಸ್ಥಾನಕ್ಕೆ ವಿ.ರವಿ, ವೆಂಕಟೇಶ ದೇಸಾಯಿ, ನರಸಿಂಹಮೂರ್ತಿ ಕುಲಕರ್ಣಿ. ಜಿಲ್ಲಾ ಕಾರ್ಯದರ್ಶಿ ಮೂರು ಸ್ಥಾನಕ್ಕೆ ಕೆ.ಅಶೋಕ, ದ್ಯಾಮನಗೌಡ ಪಾಟೀಲ್, ಎಂ.ಇ.ಜೋಷಿ, ಪಿ.ರಘುರಾಮ್, ಕೆ.ಮಲ್ಲಿಕಾರ್ಜುನ ಸೇರಿ ಐದು ಜನ ನಾಮಪತ್ರ ಸಲ್ಲಿಸಿದ್ದಾರೆ.

ಜಿಲ್ಲಾ ಖಜಾಂಚಿ ಒಂದು ಸ್ಥಾನಕ್ಕೆ ಕೆ.ಅಶೋಕ, ನರಸಿಂಹಮೂರ್ತಿ ಕುಲಕರ್ಣಿ, ಬಿ.ಪಂಪನಗೌಡ ಮೂರು ಜನ ನಾಮಪತ್ರ ಸಲ್ಲಿಸಿದ್ದಾರೆ. ರಾಜ್ಯ ಕಾರ್ಯಕಾರಿ ಒಂದು ಸ್ಥಾನಕ್ಕೆ ವೆಂಕೋಬಿ, ಬಸವರಾಜ ಎಚ್, ಎಂ.ಜಂಬುನಾಥ ಮೂರು ಜನ ನಾಮಪತ್ರ ಸಲ್ಲಿಸಿದ್ದಾರೆ.

ಜಿಲ್ಲಾ ಕಾರ್ಯಕಾರಿಣಿ ಸದಸ್ಯ 15 ಸ್ಥಾನಕ್ಕೆ ಎಸ್. ಕಿನ್ನೂರೇಶ್ವರ, ಕೆ.ವೀರೇಶ, ಹುಲುಗಣ್ಣ ಎಚ್., ಟಿ.ಈರೇಶ, ನಂದೀಶಕುಮಾರ್, ಬಿ.ರಮೇಶ ಉಪ್ಪಾರ, ಜಿ.ಚಂದ್ರಶೇಖರಗೌಡ, ಯು. ಗುರುನಾದಂ, ರಿಸ್ವಾಮಿ ಬಿ., ಟಿ.ಎನ್.ಶ್ರೀನಿವಾಸಶೆಟ್ಟಿ, ರೇಣುಕಾರಾಧ್ಯ ಕೆಎಂವಿ, ಹೊನ್ನೂರಸ್ವಾಮಿ ಕೆ ಟಿ., ವಿ.ಎಚ್.ಶ್ರೀನಿವಾಸಲು, ಶಿವಾನಂದ ಕೆ.ಮದಿಹಳ್ಳಿ, ಕೆ.ಎಂ.ಮಂಜುನಾಥ, ಪುರುಷೋತ್ತಮ ಹಂದ್ಯಾಳ, ಶಿವಕುಮಾರ್ ಎಚ್., ಅಮರೇಶ ಎಲ್.ಕೆ., ಜಿ.ಪ್ರವೀಣರಾಜ್, ಸತೀಶ ಬಿ., ಎಂ.ಜಂಬುನಾಥ ಸೇರಿ 21 ಜನ ನಾಮಪತ್ರ ಸಲ್ಲಿಸಿದ್ದಾರೆ.

ಒಟ್ಟು 25ಸ್ಥಾನಗಳಿಗೆ 44 ನಾಮಪತ್ರ ಸಲ್ಲಿಕೆಯಾಗಿದ್ದು, ಅ.28 ರಂದು ಬೆಳಗ್ಗೆ 11 ರಿಂದ 3 ಗಂಟೆಯವರೆಗೆ ನಾಮಪತ್ರ ಪರಿಶೀಲನೆ ನಡೆಯಿತು. ಎಲ್ಲ ನಾಮಪತ್ರಗಳನ್ನು ಕೂಲಂಕುಷವಾಗಿ ಪರಿಶೀಲನೆ ಮಾಡಲಾಗಿದ್ದು, ಎಲ್ಲ ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಚುನಾವಣೆ ಅಧಿಕಾರಿ ತಿಳಿಸಿದ್ದಾರೆ.

## ಅಯೋಡಿನ್‌ಯುಕ್ತ ಉಪ್ಪನ್ನೇ ಬಳಸಿರಿ, ಅಯೋಡಿನ್ ಕೊರತೆಯ ನ್ಯೂನ್ಯತೆ ತಡೆಗಟ್ಟಿರಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.28-ಯೋಡಿನ್ ಮನುಷ್ಯನಿಗೆ ಅತ್ಯಗತ್ಯವಾಗಿ ಬೇಕಾಗುವ ಒಂದು ಸೂಕ್ಷ್ಮ ಪೋಷಕಾಂಶವಾಗಿದ್ದು, ಪ್ರತಿಯೊಬ್ಬರು ದಿನನಿತ್ಯ ಆಹಾರದಲ್ಲಿ ಅಯೋಡಿನ್ ಯುಕ್ತ ಉಪ್ಪು ಬಳಸುವ ಮೂಲಕ ಆಯೋಡಿನ್ ಕೊರತೆಯ ನ್ಯೂನ್ಯತೆ ತಡೆಗಟ್ಟಬಹುದು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಅಯೋಡಿನ್ ಕೊರತೆಯ ನ್ಯೂನ್ಯತೆಗಳ ನಿಯಂತ್ರಣ ಕಾರ್ಯಕ್ರಮದಡಿ ನಗರದ ಸರ್ಕಾರಿ (ಮಾಜಿ ಪುರಸಭೆ) ಪದವಿ ಪೂರ್ವ ಕಾಲೇಜಿನಲ್ಲಿ ಮಂಗಳವಾರ ಆಯೋಜಿಸಿದ್ದ 'ವಿಶ್ವ ಅಯೋಡಿನ್ ಕೊರತೆ-ಯ ನ್ಯೂನ್ಯತೆಗಳ ನಿಯಂತ್ರಣ ದಿನ ಹಾಗೂ ಸಪ್ತಾಹ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಆಯೋಡಿನ್ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಅತ್ಯವಶ್ಯಕವಾಗಿದೆ. ಥೈರಾಯಿಡ್ ಗ್ರಂಥಿಯು ನಮ್ಮ ದೇಹಕ್ಕೆ ಅವಶ್ಯಕವಿರುವ ಹಾರ್ಮೋನ್‌ಗಳನ್ನು ಉತ್ಪತ್ತಿ ಮಾಡಲು ಅಯೋಡಿನ್ ಅಂಶ ಪೂರಕವಾಗಿದೆ. ಹಾಗಾಗಿ ದಿನನಿತ್ಯ ಹಸಿರು ಸೊಪ್ಪು ಮತ್ತು ತರಕಾರಿ ಸೇವನೆಯ ಮೂಲಕ ತಾಜಾ ತರಕಾರಿಯೊಂದಿಗೆ ಅಯೋಡಿನ್‌ಯುಕ್ತ ಉಪ್ಪು ಬಳಕೆ ಮಾಡುಬೇಕು ಎಂದು ಅವರು ತಿಳಿಸಿದರು.

ಉಪ್ಪಿನ ಜಾಡಿಯನ್ನು ಭದ್ರವಾಗಿ ಮುಚ್ಚುವ ಮೂಲಕ ಅಯೋಡಿನ್ ಕೊರತೆಯಿಂದ ಉಂಟಾಗುವ ನ್ಯೂನ್ಯತೆಗಳನ್ನು ನಿಯಂತ್ರಿಸಬಹುದಾಗಿದೆ ಎಂದರು. ಕಾರ್ಯಕ್ರಮದಲ್ಲಿ ಮೈಕ್ರೋಬಯಾಲಾಜಿಸ್ಟ್ ಶರತ್‌ಬಾಬು. ಕೆ ಅವರು ಮಾತನಾಡಿ, ಅಯೋಡಿನ್ ಕೊರತೆಯಿಂದ ಹೆಚ್ಚಾಗಿ ಮಕ್ಕಳು, ವಯಸ್ಕರು, ಗರ್ಭಿಣಿ ಮಹಿಳೆಯರಲ್ಲಿ ನ್ಯೂನತೆಗಳು ಕಂಡುಬರುತ್ತವೆ. ಮುಖ್ಯವಾಗಿ ಮಕ್ಕಳಲ್ಲಿ ಬುದ್ಧಿಮಾಂದ್ಯತೆ, ಕುಬ್ಜತನ, ದೇಹದ ಅಂಗಾಂಗಳ ಕುಂಠಿತ ಬೆಳವಣಿಗೆ, ವಯಸ್ಕರಲ್ಲಿ ನಿಶ್ಯಕ್ತಿ, ಕಾರ್ಯನಿರ್ವಹಣೆಯಲ್ಲಿ ವೈಫಲ್ಯತೆ, ಗಳಗಂಡ ರೋಗ, ಗರ್ಭಿಣಿಯರಲ್ಲಿ ಪದೇ ಪದೇ ಗರ್ಭಪಾತ, ಸಂತಾನೋತ್ಪತ್ತಿಯ ತೊಂದರೆ, ಅಂಗವಿಕಲತೆ, ಬುದ್ಧಿಮಾಂದ್ಯತೆ ಇರುವ ಮಕ್ಕಳು ಹುಟ್ಟುವ ಸಾಧ್ಯತೆ ಇರುತ್ತದೆ ಎಂದು ತಿಳಿಸಿದರು.

ದಿನನಿತ್ಯ ಸೇವಿಸುವ ಆಹಾರದಲ್ಲಿ ವಯಸ್ಸಿಗೆ ಅನುಗುಣವಾಗಿ ಅಯೋಡಿನ್ ಅಂಶ ಎಷ್ಟಿರಬೇಕು ಬಳಸಬೇಕು ಎನ್ನುವುದರ ಬಗ್ಗೆ ಅರಿವು ಹೊಂದಬೇಕು ಎಂದರು. ಸರ್ಕಾರಿ (ಮಾಜಿ ಪುರಸಭೆ) ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಸುಂಕಪ್ಪ ಅವರು ಮಾತನಾಡಿ, ಮನುಷ್ಯನ ಆರೋಗ್ಯ ಸ್ಥಿರವಾಗಿರುವಲ್ಲಿ ಅಯೋಡಿನ್ ಅಂಶ ತುಂಬಾ ಅವಶ್ಯಕವಾಗಿದೆ. ಹಾಗಾಗಿ ಆರೋಗ್ಯ ಇಲಾಖೆಯಿಂದ ತಿಳಿಸಲಾದ ಮುಂಜಾಗ್ರತಾ ಕ್ರಮಗಳನ್ವಯ ವಿದ್ಯಾರ್ಥಿಗಳು ಗಮನದಲ್ಲಿಟ್ಟುಕೊಂಡು ತಮ್ಮ ಕುಟುಂಬರಿಗೆ ಮತ್ತು ಅಕ್ಕಪಕ್ಕದ ಸಾರ್ವಜನಿಕರಿಗೆ ಅಯೋಡಿನ್‌ಯುಕ್ತ ಉಪ್ಪನ್ನು ಬಳಸಲು ತಿಳಿಸಬೇಕು ಮತ್ತು ಅವರಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು. ಬಳಿಕ ಪ್ರಾಯೋಗಿಕವಾಗಿ ಉಪ್ಪಿನಲ್ಲಿ ಅಯೋಡಿನ್ ಅಂಶವನ್ನು ಪರೀಕ್ಷಿಸುವ ವಿಧಾನದ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಲಾಯಿತು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಧ್ಯಾಪಕರಾದ ನಾಗರಾಜಪ್ಪ, ಗಾದಿಲಿಂಗಪ್ಪ, ತಿಮ್ಮಪ್ಪ, ಅಕ್ಕಿ ಮಲ್ಲಿಕಾರ್ಜುನ, ಎನ್.ಸಿ.ಡಿ ಜಿಲ್ಲಾ ಕಾರ್ಯಕ್ರಮ ಸಂಯೋಜಕರಾದ ಡಾ.ಜಬೀನ್‌ತಾಜ್, ಜಿಲ್ಲಾ ಮೈಕ್ರೋಬಯಾಲಾಜಿಸ್ಟ್ ಶರತ್ ಬಾಬು, ಜಿಲ್ಲಾ ತಂಬಾಕು ಸಲಹೆಗಾರ ಪ್ರಶಾಂತ್ ಸೇರಿದಂತೆ ಜಿಲ್ಲಾ ಸರ್ವೇಕ್ಷಣಾ ಘಟಕದ ಸಿಬ್ಬಂದಿ, ಜಿಲ್ಲಾ ಕಾಲರ ನಿಯಂತ್ರಣ ತಂಡದ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಅ.31 ರಂದು ಮ್ಯಾರಥಾನ್ ಓಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.28-ಭಾರತ ಸ್ವಾತಂತ್ರ ಹೋರಾಟಗಾರರು ಮತ್ತು ಭಾರತದ ಏಕೀಕರಣದ ಶಿಲ್ಪಿ ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ 150ನೇ ಜನ್ಮದಿನದ ವಾರ್ಷಿಕೋತ್ಸವದ ನಿಮಿತ್ತ ರಾಷ್ಟ್ರೀಯ ಐಕ್ಯತಾ ದಿನಾಚರಣೆ ಅಂಗವಾಗಿ ಸಾರ್ವಜನಿಕರಲ್ಲಿ ನಾಗರಿಕರ ಸುರಕ್ಷತೆ ಮತ್ತು ಜವಾಬ್ದಾರಿಗಳ ಕುರಿತು ಅರಿವು ಮೂಡಿಸಲು ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಅ.31 ರಂದು ಬೆಳಿಗ್ಗೆ 07 ಗಂಟೆಗೆ ನಗರದ ಡಿಎಆರ್ ಪೊಲೀಸ್ ಕವಾಯತು ಮೈದಾನದಲ್ಲಿ ರನ್-ಫಾರ್-ಯುನಿಟಿ (ಏಕತೆಗಾಗಿ ಓಟ) ಮ್ಯಾರಥಾನ್ ಓಟ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಓಟವು ನಗರದ ಡಿಎಆರ್ ಪೊಲೀಸ್ ಕವಾಯತು ಮೈದಾನದಿಂದ ಆರಂಭಗೊಂಡು ಇಂದಿರಾ ವೃತ್ತ- ನೂತನ ಜಿಲ್ಲಾಡಳಿತ ಭವನ- ಎಂ.ಜಿ ರಸ್ತೆ- ಅನಂತಪುರ ಬೈಪಾಸ್ ಕ್ರಾಸ್ ನಿಂದ ಮರಳಿ ಎಂ.ಜಿ ವೃತ್ತ- ಇಂದಿರಾ ವೃತ್ತ- ಎಸ್.ಎನ್.ಪೇಟೆ ಕ್ರಾಸ್(ಕೂಲ್ ಕಾರ್ನರ್)- ಡಿಎಆರ್ ಪೊಲೀಸ್ ಕವಾಯತು ಮೈದಾನದವರೆಗೆ ನಡೆಯಲಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ತಿಳಿಸಿದ್ದಾರೆ.

# ಸಾಮಾನ್ಯ ಬೆಳವಣಿಗೆಗೆ ಆಯೋಡಿನ್ ಅಗತ್ಯ-ಮಾಯಾಚಾರಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.28–ದೇಹದ ಸಾಮಾನ್ಯ ಬೆಳವಣಿಗೆಗೆ ಮತ್ತು ಪಚನಕ್ರಿಯೆಗೆ ಆಯೋಡಿನ್ ಅಗತ್ಯವಾಗಿದೆ. ದೇಹದಲ್ಲಿ ಕನಿಜಾಂಶದ ಕೊರತೆಯಾದರೆ ಮಕ್ಕಳಲ್ಲಿ ಮೆದುಳಿನ ಬೆಳವಣಿಗೆ ಕುಂಠಿತವಾಗಲಿದೆ ಎಂದು ಆರೋಗ್ಯ ನಿರೀಕ್ಷಣಾಧಿಕಾರಿ ಕೆ.ಎಫ್. ಮಾಯಾಚಾರಿ ಹೇಳಿದರು.

ಜಿಲ್ಲಾ ಪಂಚಾಯತಿ, ಜಿಲ್ಲಾ ಆರೋಗ್ಯ ಇಲಾಖೆ ಹಾಗೂ ಶಿರೂರಿನ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದಲ್ಲಿ ತಾಲೂಕಿನ ಶಿರೂರ ಪಟ್ಟಣದಲ್ಲಿ ಸೋಮವಾರ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಆಯೋಡಿನ್ ಕೊರತೆ ನಿಯಂತ್ರಣ ದಿನ ಪಾಕ್ಷಿಕ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳ ಸೇರಿ ಪ್ರತಿಯೊಬ್ಬರೂ ನಿತ್ಯ ಆಯೋಡಿನ್ ಇರುವ ಆಹಾರ ಪದಾರ್ಥಗಳನ್ನು ಬಳಸಬೇಕು. ಆಯೋಡಿನ್ ಕೊರತೆಯಾದರೆ ನಿಶಕ್ತಿ ಉಂಟಾಗಿ ಅನೇಕ ರೋಗಗಳು ಬಾಧಿಸಬಹುದಾಗಿದೆ ಎಂದು ಮಾಯಾಚಾರಿ ಹೇಳಿದರು.

ಕಾರ್ಯಕ್ರಮದಲ್ಲಿ ಆಯೋಡಿನ್ ಹಾಗೂ ಪೋಷಕಾಂಶವುಳ್ಳ ಆಹಾರ ಪದಾರ್ಥಗಳನ್ನು ಬಳಸುವ ಕುರಿತಾಗಿರುವ ಜಾಗೃತಿ ಕರಪತ್ರ ಬಿಡುಗಡೆಗೊಳಿಸಲಾಯಿತು.

ರಾಮಕೃಷ್ಣ ಕೊಂಗಿ, ಕರಿಸಂಗಪ್ಪ ನರೇಗಲ್ಲ, ಪಾಂಡಪ್ಪ ಬದಾಮಿ, ಸಂಗಪ್ಪ ಕಂಠಿ, ಶಿವಾನಂದ ಚಾಗುಂಡಿ, ಆಶಾ ಕಾರ್ಯಕರ್ತರಾದ ಪವಾಡೆವ್ವ ಗಾಣಿಗೇರ, ವಿಶಾಲಾಕ್ಷಿ ಇಲಾಳಮಠ, ಸುಮಾ ಗಾಳಿ ಸೇರಿದಂತೆ ಮಹಿಳೆಯರು, ಮಕ್ಕಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ರಾಜಕೀಯ ವಿಡಂಬನೆಗಳು ನಾಟಕ ರೂಪದಲ್ಲಿ ಬರುವ ಅಗತ್ಯತೆಯಿದೆ- ಡಾ.ಚೌಗಲೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.28–ಪ್ರಸ್ತುತ ರಾಜಕೀಯ ವಿಡಂಬನೆಗಳನ್ನು ನಾಟಕಗಳ ರೂಪದಲ್ಲಿ ತಂದು ಆ ಮೂಲಕ ಸಾಮಾಜಿಕ ಎಚ್ಚರಿಕೆಯನ್ನು ಮಾಡಬೇಕಾದ ಜರೂರತ್ತು ಇದೆ ಎಂದು ಹಿರಿಯ ನಾಟಕಕಾರ ಡಾ.ಡಿ.ಎಸ್. ಚೌಗಲೆ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಬಾಗಲಕೋಟೆ. ಮತ್ತು ಆಕೃತಿ ಕನ್ನಡ ಪ್ರಕಾಶನ ಬೆಂಗಳೂರು. ಇವರ ಸಹಯೋಗದಲ್ಲಿ ಮೂಡಲ ಮನೆ ಖ್ಯಾತಿಯ. ಹೂಲಿ ಶೇಖರ್ ಅವರ 'ಸ್ವಾತಂತ್ರ್ಯದ ಕಿಡಿಗಳು' ಕೃತಿ ಲೋಕಾರ್ಪಣೆಗಳಿಸಿ ಮಾತನಾಡಿದ ಅವರು, ಕೃತಿಯ ಆಶಯ ಮತ್ತು ಪ್ರಯೋಗ ಶೀಲತೆಯ ಕುರಿತು ತಿಳಿಸಿ, ನಾಟಕಗಳು ಹೊಸ ಅಶೋತ್ತರಗಳಿಗೆ ಇಂಬು ನೀಡಬೇಕು ಎಂದರು.

ಕೃತಿಕಾರ ಹೂಲಿ ಶೇಖರ್ ಉತ್ತರ ಕರ್ನಾಟಕದ ಭಾಷೆಯನ್ನು ತಮ್ಮ ನಾಟಕಗಳಲ್ಲಿ ಅತ್ಯಂತ ಸಮರ್ಥವಾಗಿ ಬಳಸಿಕೊಂಡಿದ್ದಾರೆ ಎಂದು ಡಾ.ಚೌಗಲೆ ಹೇಳಿದರು.

ಮುಖ್ಯ ಅತಿಥಿ ಆಕಾಶವಾಣಿ ಧಾರವಾಡದ ನಿವೃತ್ತ ನಿರ್ದೇಶಕ ಡಾ.ಬಸು ಬೇವಿನಗಿಡದ ಮಾತನಾಡಿ, ನಾಟಕದ ಮೂಲಕ ವ್ಯಕ್ತವಾಗುವ ಸಾಮಾಜಿಕ ಎಚ್ಚರಿಕೆ ಜೊತೆಗೆ ನೈತಿಕ ಜವಾಬ್ದಾರಿಗಳ ಒಳ ಸುಳಿವುಗಳ ಬಗ್ಗೆ ಹಾಗೂ ಕಥಾ ತಂತ್ರಗಳ ನೈಪುಣ್ಯತೆ ಪಾತ್ರಗಳಿಗೆ ಜೀವ ತುಂಬುವ ಕ್ರಮ ಸ್ವಾತಂತ್ರ್ಯದ ಕಿಡಿಗಳು ನಾಟಕದಲ್ಲಿ ವ್ಯಕ್ತವಾಗಿವೆ ಎಂದರು.

ಹಲಗಲಿ ಬೇಡರ ದಂಗೆ ನಾಟಕದ ಕುರಿತು ನಿವೃತ್ತ ಪ್ರಾಚಾರ್ಯ ಡಾ. ವೈ ಎಂ.ಯಾಕೊಳ್ಳಿ ಮಾತನಾಡಿ, ಹಲಗಲಿ ಬೇಡರ ಹೋರಾಟದ ರೋಚಕತೆಯನ್ನು ವಿವರಿಸಿದರು. ಬಂಟ ಬಂಟೂರು ಬಾಳಪ್ಪ ನಾಟಕದ ಕುರಿತು ಡಾ.ಚಂದ್ರಶೇಖರ್ ಹೆಗಡೆ ಮಾತನಾಡಿದರು.

ಸ್ವಾತಂತ್ರದ ಕಿಡಿಗಳು ಕೃತಿಯ ಲೇಖಕ ಹೂಲಿ ಶೇಖರ್ ಮಾತನಾಡಿದರು. ಬಾಗಲಕೋಟೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

ಸಿದ್ದರಾಮ ಮನಹಳ್ಳಿ, ಎ.ಎಸ್.ಬಳಗಾನೂರ, ಎಸ್.ಪಿ.ಚೌಡಾಪೂರ, ಜಿ.ಎಸ್.ಬಿಜಾಪೂರ, ಮಲ್ಲಿಕಾರ್ಜುನ ಶೆಲ್ಲಿಕೇರಿ, ಡಾ.ಎಂ.ಬಿ.ರೇವಡಿಗಾರ, ಜಿ.ಎಸ್.ಕೋಟಿ, ಮುತ್ತು ಬಳ್ಳಾ, ವಿಜಯಶ್ರೀ ಮುರನಾಳ, ಮಹಾಂತೇಶ ಕುಂಬಾರ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ.ಎ.ಎಸ್.ಪಾವಟೆ, ಜಿಲ್ಲೆಯ ಸಾಹಿತಿಗಳು, ಕಲಾವಿದರು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಮಹಾಂತೇಶ ಹೊದ್ಲೂರ ನಾಟಕ ಓದಿದರು. ಗುರು ಗಾಣಿಗೇರ ನಿರೂಪಿಸಿದರು. ಚೇತನ್ ನಾಗರಾಳ ಸ್ವಾಗತಿಸಿದರು. ಶ್ರೀಶ್ ಹುಟಗಿ ವಂದಿಸಿದರು.

# ಕೃಷಿ ವಿಕಾಸ ಯೋಜನೆ-ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.28–ಪ್ರಸಕ್ತ ಸಾಲಿನಲ್ಲಿ ಪ್ರಧಾನಮಂತ್ರಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ–ಸೂಕ್ಷ್ಮ ನೀರಾವರಿ ಕಾರ್ಯಕ್ರಮದಲ್ಲಿ ಜಿಲ್ಲೆಗೆ ಒಟ್ಟು 2,774 ಹೆಕ್ಟೇರ್ ಕ್ಷೇತ್ರದಲ್ಲಿ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದ್ದು, ರೈತರು ತುಂತುರು ಹಾಗೂ ಹನಿ ನೀರಾವರಿ ಘಟಕಗಳಿಗಾಗಿ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಿ, ಯೋಜನೆಯ ಲಾಭ ಪಡೆಯಲು ಕೋರಲಾಗಿದೆ. 2025–26 ನೇ ಸಾಲಿನಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಅಚ್ಚುಕಟ್ಟು ಪ್ರದೇಶ ಸಹಿತ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾದ ಕೃಷಿ ಭಾಗ್ಯ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಯೋಜನೆಯನ್ನು ಪ್ಯಾಕೇಜ್ ಮಾದರಿಯಲ್ಲಿ ಕ್ಷೇತ್ರ ಬದು ನಿರ್ಮಾಣ, ಕೃಷಿ ಹೊಂಡ, ಪಾಲಿಥೀನ್ ಹೊದಿಕೆ, ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ, ಡಿಸೇಲ್ ಪಂಪ್ ಸೆಟ್ ಹಾಗೂ ಸೂಕ್ಷ್ಮ ನೀರಾವರಿ ಘಟಕಗಳನ್ನೊಳಗೊಂಡಂತೆ ಅನುಷ್ಠಾನಗೊಳಿಸಲಾಗುತ್ತಿದೆ.

ಬದು, ಕೃಷಿ ಹೊಂಡ, ಡಿಸೇಲ್ ಪಂಪ್ ಸೆಟ್ ಹಾಗೂ ಪಾಲಿಥೀನ್ ಹೊದಿಕೆಗಳಿಗೆ ಸಾಮಾನ್ಯ ರೈತರಿಗೆ ಶೇಕಡಾ 80 ರಷ್ಟು ಹಾಗೂ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡ ರೈತರಿಗೆ ಶೇಕಡಾ 90 ರಷ್ಟು ಸಹಾಯಧನ ನೀಡಲಾಗುತ್ತಿದೆ. ರೈತರು ತಮ್ಮ ಹೋಬಳಿಯ ರೈತ ಸಂಪರ್ಕ ಕೇಂದ್ರಗಳಿಗೆ ಅರ್ಜಿ ಸಲ್ಲಿಸಿ ಯೋಜನೆಯ ಲಾಭ ಪಡೆಯಲು ಬಾಗಲಕೋಟೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆ ಮೂಲಕ ಕೋರಿದ್ದಾರೆ.

# ರಾಜ್ಯೋತ್ಸವ ಪ್ರಯುಕ್ತ ದೊಡ್ಡಾಟ ಪ್ರದರ್ಶನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.28–ಕರ್ನಾಟಕ ಬಯಲಾಟ ಅಕಾಡೆಮಿ ಬಾಗಲಕೋಟೆ ಹಾಗೂ ಸರ್ಕಾರಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ಪದವಿ ಪೂರ್ವ ವಸತಿ ಕಾಲೇಜು ನವನಗರ–ಬಾಗಲಕೋಟೆ ಇವರ ಸಹಯೋಗದಲ್ಲಿ ಕನ್ನಡ ರಾಜ್ಯೋತ್ಸವ 2025 ಪ್ರಯುಕ್ತ ದೊಡ್ಡಾಟ, ತೊಗಲು ಗೊಂಬೆಯಾಟ ಪ್ರದರ್ಶನವನ್ನು ನವನಗರದ ಸರ್ಕಾರಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ಪದವಿ ಪೂರ್ವ ವಸತಿ ಕಾಲೇಜು ಸಭಾಭವನದಲ್ಲಿ ನವೆಂಬರ್ 1 ಬೆಳಿಗ್ಗೆ 10 ಗಂಟೆಗೆ ಆಯೋಜಿಸಲಾಗಿದೆ.

ಖ್ಯಾತ ಕವಿ ಡಾ.ಸತ್ಯಾನಂದ ಪಾತ್ರೋಟ ಪ್ರದರ್ಶನ ಉದ್ಘಾಟಿಸಲಿದ್ದು, ಕರ್ನಾಟಕ ಬಯಲಾಟ ಅಕಾಡೆಮಿಯ ಅಧ್ಯಕ್ಷ ಪ್ರೊ.ಕೆ.ಆರ್.ದುರ್ಗಾದಾಸ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿ ಶಿವಾನಂದ ಪಟ್ಟಣಶೆಟ್ಟಿ, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ಪದವಿ ಪೂರ್ವ ವಸತಿ ಕಾಲೇಜಿನ ಪ್ರಾಚಾರ್ಯ ಎಂ. ಎನ್. ಗರಗ, ಡಾ. ಎ. ಪಿ. ಜೆ. ಅಬ್ದುಲ್‌ಕಲಾಂ ವಸತಿ ಶಾಲೆ ಪ್ರಾಚಾರ್ಯ ಆನಂದ ದಡ್ಡೂರ, ಕರ್ನಾಟಕ ಬಯಲಾಟ ಅಕಾಡೆಮಿ ಸದಸ್ಯ ಲಕ್ಷ್ಮಣ ದೇಸಾರಟ್ಟಿ ಭಾಗಿಯಾಗಲಿದ್ದಾರೆ.

ಪಂಪನಿಂದ ಕುವೆಂಪುವರೆಗಿನ ಕನ್ನಡ ವಿವೇಕದ ಹೆಜ್ಜೆ ಗುರುತುಗಳು ಎಂಬ ವಿಷಯದ ಕುರಿತು ಶಿವಮೊಗ್ಗದ ಸಂಸ್ಕೃತಿ ಚಿಂತಕ ಡಾ.ಸರ್ಜಾಶಂಕರ ಹರಳಿಮಠ ವಿಶೇಷ ಉಪನ್ಯಾಸ ನೀಡಲಿದ್ದಾರೆ ಎಂದು ಕರ್ನಾಟಕ ಬಯಲಾಟ ಅಕಾಡೆಮಿಯ ರಿಜಿಸ್ಟ್ರಾರ್ ಕಸ್ತೂರಿ ಪಾಟೀಲ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಸಹಕಾರ ರತ್ನ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.28–ರಾಜ್ಯಮಟ್ಟದ ಅಖಿಲ ಭಾರತ ಸಹಕಾರ ಸಪ್ತಾಹದ ಅಂಗವಾಗಿ ಪ್ರಸಕ್ತ ಸಾಲಿನ ರಾಜ್ಯ ಮಟ್ಟದ ಸಹಕಾರ ರತ್ನ ಪ್ರಶಸ್ತಿಗೆ ಅರ್ಹ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಗೆ ನವೆಂಬರ್ 1 ಕೊನೆಯ ದಿನವಾಗಿದೆ.

ಅರ್ಜಿ ಸಲ್ಲಿಸಲು ಸಹಕಾರಿಗಳು 10 ವರ್ಷ ಸೇವೆ ಸಲ್ಲಿಸಿರಬೇಕು. ಯಾವುದೇ ಕ್ರಿಮಿನಲ್ ಮೊಕದ್ದಮೆ ಹೊಂದಿರಬಾರದು. ಕನಿಷ್ಠ ನಾಲ್ಕು ವಿವಿಧ ರೀತಿಯ ಸಹಕಾರ ಸಂಘಗಳಲ್ಲಿ ನಿರ್ದೇಶಕರಾಗಿ ಸೇವೆ ಸಲ್ಲಿಸಿರಬೇಕು. ಸಹಕಾರಿ ಕ್ಷೇತ್ರದಲ್ಲಿ ಪ್ರಾಥಮಿಕ ಹಂತದಿಂದ ರಾಜ್ಯಮಟ್ಟದ ಸಹಕಾರಿ ಸಂಘಗಳಲ್ಲಿ ಸೇವೆ ಸಲ್ಲಿಸಿರಬೇಕು.

ಯಾವುದೇ ಸಹಕಾರ ಸಂಘ–ಕ್ಕೆ ಸುಸ್ತಿದಾರರಾಗಿರಬಾರದು ಮತ್ತು ಸಹಕಾರಿಗಳು ನಿರ್ದೇಶಕರಾಗಿದ್ದ ಅವಧಿಯಲ್ಲಿ ಆಡಳಿತ ಮಂಡಳಿ ರದ್ದಾಗಿರಬಾರದು. ಅರ್ಜಿಯನ್ನು ಅಧ್ಯಕ್ಷರು ಜಿಲ್ಲಾ ಸಹಕಾರಿ ಯುನಿಯನ್, ಸೆಕ್ಟರ್ ನಂ. 25, ಸೋಮೇಶ್ವರ ದೇವಸ್ಥಾನ ಹತ್ತಿರ, ನವನಗರ–ಬಾಗಲಕೋಟೆ ಇವರಿಗೆ ಸಲ್ಲಿಸುವಂತೆ ಸಹಕಾರ ಸಂಘಗಳ ಉಪನಿಬಂಧಕರು ಬಾಗಲಕೋಟೆ ಇವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಸಹಕಾರ ರತ್ನ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.28–2025ನೇ ಸಾಲಿಗೆ ಸಹಕಾರ ಕ್ಷೇತ್ರದಲ್ಲಿ ಗಣನೀಯವಾಗಿ ಸೇವೆ ಸಲ್ಲಿಸಿರುವ ಅರ್ಹ ಸಹಕಾರಿಗಳನ್ನು ಗುರುತಿಸಿ ಸಹಕಾರ ರತ್ನ ಪ್ರಶಸ್ತಿ ನೀಡಲಾಗುತ್ತಿದ್ದು, ಇದಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸಹಕಾರ ಸಂಘಗಳ ಉಪನಿಬಂಧಕರು ತಿಳಿಸಿದ್ದಾರೆ.

ಕಲಬುರಗಿ ಜಿಲ್ಲೆಯ ಆಸಕ್ತಿಯುಳ್ಳ ಅರ್ಹ ಸಹಕಾರಿಗಳು ತಮ್ಮ ವೈಯಕ್ತಿಕ ಪರಿಚಯ (ಬಯೋಡೆಟಾ), ಸಹಕಾರ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ವಿವರ, ಸಹಕಾರ ಚಳುವಳಿಯಲ್ಲಿ ತೊಡಗಿಸಿಕೊಂಡಿರುವ ವಿವರ ಹಾಗೂ ಅಗತ್ಯ ಪೂರಕ ಮಾಹಿತಿಯನ್ನು ದಾಖಲಾತಿಗಳನ್ನು ಲಗತ್ತಿಸಿ ಸಹಕಾರ ಸಂಘಗಳ ಉಪನಿಬಂಧಕರ ಕಾರ್ಯಾಲಯ, ಸಿದ್ದಿಪಾಷಾ ದರ್ಗಾ ಹಿಂದುಗಡೆ, ಎಸ್.ಪಿ.ಆಫೀಸ್ ರಸ್ತೆ, ಕಲಬುರಗಿ ವಿಳಾಸಕ್ಕೆ 2025ರ ಅಕ್ಟೋಬರ್ 31ರ ಮಧ್ಯಾಹ್ನ 1.30 ಗಂಟೆಯೊಳಗಾಗಿ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

# ಶೋಷಿತ ಸಮಾಜ ಮುಖ್ಯವಾಹಿನಿಗೆ ತರಲು ಶ್ರಮವಹಿಸಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.28–ಶೋಷಣೆಗೊಳಗಾದ ಸಮಾಜದ ಸಮಸ್ಯೆ, ಸವಾಲುಗಳನ್ನು ಅರ್ಥೈಸಿಕೊಂಡು ಸಮಾಜಮುಖಿಯಾಗಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿ ಸಮಾಜವನ್ನು ಆರ್ಥಿಕವಾಗಿ, ಶೈಕ್ಷಣಿಕವಾಗಿ ಹಾಗೂ ಸಾಮಾಜಿಕವಾಗಿ ಬೆಳೆಸುವ ಮೂಲಕ ಸಮಾಜವನ್ನು ಮುಖ್ಯವಾಹಿನಿಗೆ ತರಲು ಪ್ರತಿಯೊಬ್ಬರು ಶ್ರಮ ವಹಿಸಬೇಕೆಂದು ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷರೂ ಆಗಿರುವ ಶಾಸಕ ಪ್ರಸಾದ ಅಬ್ಬಯ್ಯ ಕರೆ ನೀಡಿದರು.

ನವನಗರದ ಡಾ.ಅಂಬೇಡ್ಕರ ಭವನದಲ್ಲಿ ಚಲವಾದಿ ಸಮಾಜದ ಹಿರಿಯ ನಾಗರಿಕರ ಸಂಘದ ಜಿಲ್ಲಾ ಘಟಕದಿಂದ ಆಯೋಜಿಸಿದ್ದ ಚಲವಾದಿ ಸಮಾಜದ 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ, ಪಿಯುಸಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ 2025ನೇ ಸಾಲಿನಲ್ಲಿ ನಿವೃತ್ತಿ ಹೊಂದಿದ ನೌಕರರಿಗೆ ಹಿರಿಯ ನಾಗರಿಕರಿಗೆ ತಾಲೂಕು, ಜಿಲ್ಲಾ, ರಾಜ್ಯ ಪ್ರಶಸ್ತಿ ಪುರಸ್ಕೃತ ನೌಕರರಿಗೆ, 2024–25ನೇ ಸಾಲಿನಲ್ಲಿ ಎಂಬಿಬಿಎಸ್ ಆಯ್ಕೆಯಾದ ಹಾಗೂ ಪಿಎಚ್‌ಡಿ ಪೂರ್ಣಗೊಳಿಸಿದ ಮತ್ತು ಸಾಧಕರ ಸನ್ಮಾನ ಸಮಾರಂಭದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಅಂಬೇಡ್ಕರ ಅವರು ಬರೆದ ಸಂವಿಧಾನದಿಂದ ರಾಷ್ಟ್ರದ ಪ್ರಥಮ ಪ್ರಜೆಯಿಂದ ಹಿಡಿದು ಕೂಲಿ ಕಾರ್ಮಿಕರಿಗೆ ಮತದಾನದ ಹಕ್ಕು ಕಲ್ಪಿಸಿರುವದು ಸೇರಿದಂತೆ ಡಾ.ಅಂಬೇಡ್ಕರರ ಸಂವಿಧಾನವನ್ನು ಯಥಾವತ್ತಾಗಿ ಜಾರಿಯಾಗಿಲ್ಲದಿರುವದರಿಂದ ನಮ್ಮ ಸಮಾಜ ಹಿಂದುಳಿದಿದೆ. ಇಂದು ಎಲ್ಲ ರಂಗಗಳಲ್ಲಿ ದಲಿತ ಸಮುದಾಯದ ಅಧಿಕಾರಿಗಳಿಗೆ ಬಡ್ತಿ ಸಿಗದಂತೆ ಅಡೆತಡೆಗಳನ್ನು ಒಡ್ಡಲಾಗುತ್ತಿದೆ ಪ್ರತಿಭಾವಂತ ವಿದ್ಯಾರ್ಥಿಗಳು ಉನ್ನತ ಅಭ್ಯಾಸ ಪಡೆದುಕೊಂಡು ಸಮಾಜದ ಮುಖ್ಯವಾಹಿನಿಯಲ್ಲಿ ಮುಂದೆ ಬರಬೇಕೆಂದು ಹೇಳಿದ ಶಾಸಕ ಪ್ರಸಾದ ಅಬ್ಬಯ್ಯ, ಗ್ರಾಮಾಂತರ ಪ್ರದೇಶದಲ್ಲಿ ಅಸ್ಪೃಶ್ಯತೆ ಇನ್ನು ಕಂಡು ಬರುತ್ತಿದೆ ಇದನ್ನು ತಡೆಯುವ ಮೂಲಕ ಸಮಾಜದ ಕಟ್ಟಕಡೆಯ ವ್ಯಕ್ತಿಗೆ ಸರಕಾರದಿಂದ ದೊರೆಯಬೇಕಾದ ಸೌಲಭ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ದಲಿತ ಸಮುದಾಯ ಉನ್ನತ ಮಟ್ಟದಲ್ಲಿರುವ ಅಧಿಕಾರಿ ವರ್ಗದವರು ಶ್ರಮವಹಿಸಬೇಕೆಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ತೋಟಗಾರಿಕೆ ವಿಶ್ವವಿದ್ಯಾಲಯದ ಕುಲಪತಿ ಡಾ.ವಿಷ್ಣುವರ್ಧನ್, ಧಾರವಾಡ ವಿಶ್ವವಿದ್ಯಾಲಯದಲ್ಲಿ ಆರಂಭಗೊಂಡಿರುವ ಡಾ.ಅಂಬೇಡ್ಕರ ಅಧ್ಯಯನ ಕೇಂದ್ರದಂತೆ ಬಾಗಲಕೋಟೆಯ ತೋಟಗಾರಿಗೆ ವಿಶ್ವವಿದ್ಯಾಲಯದಲ್ಲಿ ಅಂಬೇಡ್ಕರ ಅಧ್ಯಯನ ಕೇಂದ್ರ ಆರಂಭಿಸಿ ಅಂಬೇಡ್ಕರ ಅವರ ಬಗ್ಗೆ ಸಮಾಜದಲ್ಲಿ ಜಾಗೃತಿ ಮೂಡಿಸಿ ಅಧ್ಯಯನ ಕೇಂದ್ರದ ಮೂಲಕ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಕೋಚಿಂಗ್ ನೀಡಲು ಮುಂದಾಗುತ್ತಿದೆ. ರೈತಾಪಿ ವರ್ಗಕ್ಕೆ ಕೌಶಲ್ಯ ಅಭಿವೃದ್ಧಿ ತರಬೇತಿ ಕಲ್ಪಿಸುವ ಮೂಲಕ ಸ್ವಂತ ಉದ್ಯೋಗ ಅವಕಾಶ ಕಲ್ಪಿಸಲಾಗುವದು ಎಂದರು.

ಸಮಾಜದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿ ಮುಗಿಸಿ ಮನೆಯಲ್ಲಿ ಕುಳಿತಿರುವಂತಹ ವಿದ್ಯಾರ್ಥಿಗಳಿಗೆ ಅಗತ್ಯ ಕೌಶಲ್ಯ ಅಭಿವೃದ್ಧಿ ತರಬೇತಿ ನೀಡುವ ಚಿಂತನೆ ನಡೆಸಲಾಗುತ್ತಿದೆ ಎಂದರು.

ಉಪನ್ಯಾಸ ನೀಡಿದ ಕಲಬುರ್ಗಿ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಪ್ರಾಧ್ಯಾಪಕ ಅಪ್ಪಗೇರಿ ಸೋಮಶೇಖರ ಮಾನವ ಹಕ್ಕು, ಮತದಾನದ ಹಕ್ಕು, ಅಧಿಕಾರದ ಹಕ್ಕು, ಉದ್ಯೋಗ ಹಾಗೂ ರಾಜಕೀಯವಾಗಿ ಉತ್ತಮ ಅವಕಾಶಗಳನ್ನು ಸಂವಿಧಾನದ ಮೂಲಕ ಡಾ.ಅಂಬೇಡ್ಕರ ಅವರು ಕಲ್ಪಿಸಿಕೊಟ್ಟಿದ್ದಾರೆ. ಡಾ.ಅಂಬೇಡ್ಕರ ಬಗ್ಗೆ ತಿಳಿಯಲು ಅವರು ಬರೆದಿರುವ ಬರಹಗಳು, ಭಾಷಣ, ಆತ್ಮಕಥೆ, ಜಾತಿ ವಿನಾಶ ಪುಸ್ತಕವನ್ನು ಓದುವ ಮೂಲಕ ಅವರ ಬಗ್ಗೆ ಸಮಾಜದ ಪ್ರತಿಯೊಬ್ಬರು ಮುಂದಾಗಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಲವಾದಿ ಹಿರಿಯ ನಾಗರಿಕರ ಸಂಘದ ಅಧ್ಯಕ್ಷ ಅಶೋಕ ನಾರಾಯಣಿ ವಹಿಸಿದ್ದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಮಂಜುನಾಥ, ಧಾರವಾಡ ಡಾ.ಬಿ.ಆರ್.ಅಂಬೇಡ್ಕರ ಅಧ್ಯಯನ ಪೀಠದ ನಿರ್ದೇಶಕ ಡಾ.ಸುಭಾಸಚಂದ್ರ ನಾಟೀಕಾರ, ವಿಜಯಪುರದ ಲವಕುಮಾರ ಸಿಂದಗೇರಿ, ಶರಣಪ್ಪ ಅಮದಿಹಾಳ, ವಿವೇಕಾನಂದ ಗರಸಂಗಿ, ಎಚ್.ಡಿ.ಹುನ್ನೂರ, ಶ್ರೀಮತಿ ಗುಣವಂತಿ ನಡೋಣಿ, ಎಂ.ಎಂ.ಚಬನೂರ ಸೇರಿದಂತೆ ಜಿಲ್ಲೆಯ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಇದ್ದರು.

ಬಸವರಾಜ ಚಲವಾದಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಚ್.ಡಿ.ಹೊಸಮನಿ ಸ್ವಾಗತಿಸಿದರು. ಶರಣಪ್ಪ ಬೇವೂರ ನಿರೂಪಿಸಿದರು. ಪಿ.ಡಿ.ಸರಿಕರ ವಂದಿಸಿದರು.

ಸಕ್ರಿ ಕಾಲೇಜಿನ ಎನ್.ಎಸ್.ಎಸ್ ವಾರ್ಷಿಕ ವಿಶೇಷ ಶಿಬಿರ

# ಸೇವಾ ಮನೋಭಾವದಿಂದ ವ್ಯಕ್ತಿತ್ವ ನಿರ್ಮಾಣ : ಡಾ.ಚಂದ್ರಶೇಖರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ,28– ಯುವ ಸಮೂಹ ಸೇವಾ ಮನೋಭಾವ ಬೆಳೆಸಿಕೊಂಡರೆ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬಹುದಾಗಿದೆ ಎಂದು ಉಪನ್ಯಾಸಕ ಡಾ.ಚಂದ್ರಶೇಖರ ಕಾಳನ್ನವರ ಹೇಳಿದರು.

ಸಮೀಪದ ಗದ್ದನಕೇರಿ ಕ್ರಾಸ್ ಹತ್ತಿರವಿರುವ ಲಡ್ಡುಮುತ್ಯಾ ದೇವಸ್ಥಾನ ಆವರಣದಲ್ಲಿ ನಗರದ ವಿದ್ಯಾಪ್ರಸಾರಕ ಮಂಡಳದ ಸಕ್ರಿ ಪದವಿ ಪೂರ್ವ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ನಡೆದ ವಾರ್ಷಿಕ ವಿಶೇಷ ಶಿಬಿರದ 4 ದಿನದ ಕಾರ್ಯಕ್ರಮದಲ್ಲಿ 'ವ್ಯಕ್ತಿತ್ವ ವಿಕಸನ' ಕುರಿತು ಉಪನ್ಯಾಸ ನೀಡಿ ಅವರು ಮಾತನಾಡಿದರು.

ವ್ಯಕ್ತಿತ್ವ ಎಂಬುದು ಅನೇಕ ಶಕ್ತಿಗಳ ಸಂಗಮ. ಆದರ್ಶ, ಸದಾಚಾರ, ಶ್ರದ್ಧೆ, ನಿಷ್ಠೆ, ದಕ್ಷತೆ, ಸಾಮರ್ಥ್ಯ, ಪರೋಪಕಾರ ಬುದ್ಧಿ, ಪ್ರಾಮಾಣಿಕತೆ ಮುಂತಾದ ಅಂಶಗಳಿಂದ ನಮ್ಮ ವ್ಯಕ್ತಿತ್ವ ರೂಪಗೊಳ್ಳುತ್ತದೆ. ವಿದ್ಯಾರ್ಥಿಗಳು ತಮ್ಮ ಉತ್ತಮವಾದ ವ್ಯಕ್ತಿತ್ವಕ್ಕೆ ಬೇಕಾದ ಅಂಶಗಳನ್ನು ಅಳವಡಿಸಿಕೊಳ್ಳಬೇಕು. ಪ್ರತಿಯೊಬ್ಬರು ತಮ್ಮ ಜೀವನದ ಒಳಿತು, ಕೆಡಕುಗಳಿಗೆ ಅವರೇ ಶಿಲ್ಪಿಗಳಾಗಿರುತ್ತಾರೆ. ಮನುಷ್ಯ ತನ್ನ ಜೀವನವನ್ನು ತನ್ನಿಷ್ಟದಂತೆ ರೂಪಿಸಿಕೊಳ್ಳಲು ಅವಕಾಶವಿದೆ. ವ್ಯಕ್ತಿತ್ವವೆಂಬುದು ಹುಟ್ಟಿನಿಂದ ಸಾವಿನವರೆಗೆ ನಿರಂತರ ರೂಪುಗೊಳ್ಳುತ್ತಿರುತ್ತದೆ ಎಂಬುದನ್ನು ಅರಿತುಕೊಳ್ಳಬೇಕು ಎಂದು ಕಾಳನ್ನವರ ಹೇಳಿದರು. ಸಾಹಿತಿ ಡಾ.ಉಮೇಶ ತಿಮ್ಮಾಪೂರ ಮಾತನಾಡಿ, ವಿದ್ಯಾರ್ಥಿಗಳು ಗ್ರಾಮೀಣ ಪರಿಸರದಲ್ಲಿ ನಡೆಯುವ ಇಂತಹ ಎನ್.ಎಸ್.ಎಸ್. ಶಿಬಿರಗಳಲ್ಲಿ ಪಾಲ್ಗೊಳ್ಳುವದರಿಂದ ತಮ್ಮ ಆದರ್ಶವಾದ ವ್ಯಕ್ತಿತ್ವಕ್ಕೆ ಬೇಕಾದ ಅನುಭಗಳನ್ನು ಪಡೆಯಲು ಸಾಧ್ಯವಿದೆ. ಸ್ವಾರ್ಥರಹಿತ ಸೇವೆಯಿಂದ ವ್ಯಕ್ತಿತ್ವ ಗಟ್ಟಿಗೊಳ್ಳುತ್ತದೆ ಎಂದರು. ಉಪನ್ಯಾಸಕ ಪ್ರೊ.ಸಂಗಮೇಶ ಬ್ಯಾಳಿ ಮಾತನಾಡಿ, ಎನ್.ಎಸ್.ಎಸ್ ಶಿಬಿರಗಳು ಶಿಬಿರಾರ್ಥಿಗಳಲ್ಲಿ ಮಾನವೀಯ ಸಂಬಂಧಗಳನ್ನು ಬೆಸೆಯುವದರ ಮೂಲಕ ಅವರ ಬದುಕಿನ ವ್ಯಕ್ತಿತ್ವನ್ನು ರೂಪಿಸುತ್ತವೆ. ವಿದ್ಯಾರ್ಥಿಗಳಲ್ಲಿ ಸಮಾಜ ಸೇವೆ, ನಾಯಕತ್ವದ ಗುಣಗಳನ್ನು ಶಿಬಿರಗಳು ಕಲಿಸುತ್ತವೆ ಎಂದು ಹೇಳಿದರು. ಉಪನ್ಯಾಶಕ ವಿ.ಎಸ್.ಬಂಡಿವಡ್ಡರ ಮಾತನಾಡಿದರು. ಎನ್.ಎಸ್.ಎಸ್.ಯೋಜನಾಧಿಕಾರಿ ರಮೇಶ ಬೊಮ್ಮಣಗಿ ಪರಿಚಯಿಸಿದರು. ನಂತರ ಶಿಬಿರಾರ್ಥಿಗಳಿಂದ ಸಾಂಸ್ಕೃತಿಕ ಚಟುವಟಿಕೆಗಳು ಜರಗಿದವು.

# ಅಕ್ಟೋಬರ್ 31ರಂದು ಪಾಲಿಕೆಯಿಂದ ಬೀದಿ ಬದಿ ವ್ಯಾಪಾರಿಗಳಿಂದ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 28: ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ ಪ್ರಧಾನಮಂತ್ರಿ ಬೀದಿ ವ್ಯಾಪಾರಿಗಳ ಆತ್ಮನಿರ್ಭರ್ ನಿಧಿ (ಪಿಎಂ ಸ್ವ-ನಿಧಿ) ಯೋಜನೆಯಡಿ ಆರ್ಥಿಕ ಸೇರ್ಪಡೆಯನ್ನು ಹೆಚ್ಚಿಸುವುದು, ಡಿಜಿಟಲ್ ವಹಿವಾಟು ನಡೆಸಲು ಉತ್ತೇಜಿಸುವುದು, ಸಾಮರ್ಥ್ಯ ಅಭಿವೃದ್ಧಿಯನ್ನು ವೃದ್ಧಿಸುವುದು ಮತ್ತು ಬೀದಿ ಬದಿ ವ್ಯಾಪಾರಿಗಳು ಮತ್ತು ಅವರ ಕುಟುಂಬದ ಸದಸ್ಯರಿಗೆ ಸಾಮಾಜಿಕ ಭದ್ರತಾ ಯೋಜನೆಗಳನ್ನು ಕಲ್ಪಿಸುವುದನ್ನು ಖಚಿತ ಪಡಿಸಿಕೊಳ್ಳುವ ಮೂಲಕ ಯೋಜನೆಯನ್ನು ಪರಿಣಾಮಕಾರಿ ಯಾಗಿ ಅನುಷ್ಠಾನಗೊಳಿಸಲು ಅಕ್ಟೋಬರ್ 31ರ ಸಂಜೆ 4ಗಂಟೆಗೆ ಪಾಲಿಕೆಯ ಜೋನಲ್–01ರಲ್ಲಿ ಬೀದಿ ಬದಿ ವ್ಯಾಪಾರದ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು, ಮಾಜಿ ಟಿ.ವಿ.ಸಿ ಸದಸ್ಯರು ಹಾಗೂ ಆಸಕ್ತರು ಸಭೆಗೆ ಆಗಮಿಸಿ ಸಭೆಯನ್ನು ಯಶಸ್ವಿಗೊಳಿ ಸಬೇಕೆಂದು ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ಟೋಬರ್ 30 ರಂದು ಉಳಿದ ಸೀಟುಗಳನ್ನು ವಾಕ್-ಇನ್-ಅಡ್ಮಿಷನ್ ಮೂಲಕ ಭರ್ತಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.28–2025–26ನೇ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಬಿ.ಎಸ್ಸಿ. ನರ್ಸಿಂಗ್ ಸೀಟುಗಳು ಹಂಚಿಕೆಯಾದ ನಂತರ ಉಳಿದ 71 ಸೀಟುಗಳನ್ನು ಇದೇ ಅಕ್ಟೋಬರ್ 30 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯ, ಜಿಲ್ಲಾ ಆಸ್ಪತ್ರೆ, ಗುಲಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆ, ಸೇಡಂ ರಸ್ತೆ, ಕಲಬುರಗಿ ಇಲ್ಲಿ ವಾಕ್–ಇನ್–ಅಡ್ಮಿಶನ್ (ಘಚಿಟಇ–ಖಟಿ ೦ಜಟಘುಂಟಿ) ಮೂಲಕ ಸೀಟುಗಳನ್ನು ಭರ್ತಿ ಮಾಡಲಾಗುತ್ತಿದೆ ಎಂದು ಕಲಬುರಗಿ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದ ಪ್ರಾಂಶುಪಾಲರು ತಿಳಿಸಿದ್ದಾರೆ.

ಕೆ.ಇ.ಎ. (ಸಿ.ಇ.ಟಿ.) ಮೂಲಕ ಯಾವುದೇ ಸೀಟು ಹಂಚಿಕೆಯಾಗದಿರುವ ಅಭ್ಯರ್ಥಿಗಳಿಗೆ ಕೆ.ಇ.ಎ. (ಸಿ.ಇ.ಟಿ.) ಮೆರಿಟ್ ಸಂಖ್ಯೆ ಆಧಾರದ ಮೇಲೆ ಸೀಟುಗಳನ್ನು ಹಂಚಿಕೆ ಮಾಡಲಾಗುತ್ತದೆ. ಆದ್ದರಿಂದ ಅಭ್ಯರ್ಥಿಗಳು ಮೇಲ್ಕಂಡ ದಿನದಂದು ಕಡ್ಡಾಯವಾಗಿ ಮೂಲ ದಾಖಲೆಗಳೊಂದಿಗೆ ಹಾಜರಾಗಿ ಇದರ ಸದುಪಯೋಗಪಡೆದುಕೊಳ್ಳಬೇಕು.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದ ಪ್ರಾಂಶುಪಾಲರನ್ನು ಹಾಗೂ ಸಹಾಯವಾಣಿ ಸಂಖ್ಯೆ 9972265478ಗೆ ಸಂಪರ್ಕಿಸಲು ಕೋರಲಾಗಿದೆ.

# ಬರಗೂರ ಶಾಲೆಯಲ್ಲಿ ತಂಬಾಕು ಮುಕ್ತ ಯುವ ಅಭಿಯಾನ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೊಪ್ಪಳ ಹಾಗೂ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಕಚೇರಿ ಕೊಪ್ಪಳ ಮತ್ತು ಸರ್ಕಾರಿ ಪ್ರೌಢಶಾಲೆ ಮತ್ತು ಹಿರಿಯ ಪ್ರಾಥಮಿಕ ಶಾಲೆ ಬರಗೂರು ರವರ ಸಂಯುಕ್ತಾಶ್ರಯದಲ್ಲಿ ಬರಗೂರ ಶಾಲೆಯಲ್ಲಿ ಸೋಮವಾರದಂದು ತಂಬಾಕು ಮುಕ್ತ ಯುವ ಅಭಿಯಾನ 3.0 (ವಿಶೇಷ 60 ದಿನಗಳ ಅಭಿಯಾನ) ಎಂಬ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಅಂಗವಾಗಿ ಐಇಸಿ ಪ್ರಚಾರ ಹಾಗೂ ಶಾಲೆಯ ಶಿಕ್ಷಕರಿಗೆ, ಸಿಬ್ಬಂದಿಗೆ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳು, ಕೋಟ್ಪಾ ಕಾಯ್ದೆ –2003 ರ ಬಗ್ಗೆ ಹಾಗೂ ತಂಬಾಕು ಸೇವನೆಯನ್ನು ತ್ಯಜಿಸಲು ಪೋಷಕರಿಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡಲಾಯಿತು. ಈ ಬಗ್ಗೆ ಪ್ರತಿಜ್ಞಾವಿಧಿಯನ್ನು ವಿದ್ಯಾರ್ಥಿಗಳಿಗೆ ಬೋಧಿಸಿ ಜಾಗೃತಿಯನ್ನು ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ತಂಡದ ಸಂಗಪ್ಪ ಮಮಟಗೇರಿ, ಜಿಲ್ಲಾ ಸಲಹೆಗಾರರಾದ ಸರಸ್ವತಿ, ಶಾಲೆಯ ಮುಖ್ಯೋಪಾಧ್ಯಾಯರಾದ ಶಿರವಾರ ತಿಪ್ಪಣ್ಣ, ರಾಮಸ್ವಾಮಿ, ರಮೇಶ, ನಾಗರಾಜ್, ಶಿಕ್ಷಕರು, ಸಿಬ್ಬಂದಿ ವರ್ಗದವರು, ಸಮಾಜ ಕಾರ್ಯಕರ್ತರು ಮತ್ತು ಶಾಲೆಯ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ಸರ್ಕಾರಿ ಕಛೇರಿಗಳಲ್ಲಿ ಲಂಚದ ಹಣಕ್ಕಾಗಿ ಒತ್ತಾಯಿಸಿದರೆ ಕ್ರಮಕ್ಕೆ ಸೂಚನೆ




ಯಾದಗಿರಿ:ಅ28:ಯಾದಗಿರಿ ಜಿಲ್ಲೆಯಲ್ಲಿ ಯಾವುದೇ ಸರ್ಕಾರಿ ಕಛೇರಿಗಳಲ್ಲಿಸರ್ಕಾರಿನೌಕರರುಕೆಲಸ, ಸೇವೆಗಳನ್ನುಮಾಡಿಕೊಡಲುಲಂಚದ ಹಣಕ್ಕಾಗಿಒತ್ತಾಯಿಸಿದರೆ,ಅನಗತ್ಯ ವಿಳಂಬಮಾಡಿದರೆ,ಅಧಿಕಾರಿಗಳು ತಮ್ಮಹುದ್ದೆಯಅಧಿಕಾರದುರ್ಬಳಕೆ ಮಾಡಿಕೊಂಡು ಅವ್ಯವಹಾರದಲ್ಲಿ ಭಾಗಿಯಾಗಿದ್ದು, ಕಂಡುಬಂದಲ್ಲಿ ಯಾದಗಿರಿಕರ್ನಾಟಕಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರಾದ ಶ್ರೀ ಜೆ.ಹೆಚ್. ಇನಾಮದಾರ ಅವರು ಹೇಳಿದರು. ಯಾದಗಿರಿ ನಗರದ ಇಂದುಅ.28ರಮಂಗಳವಾರರಂದು ಜವಾಹರ ಬಿ.ಇ.ಎಡ್ ಪದವಿ ಮಹಾವಿದ್ಯಾಲಯದಲ್ಲಿಯಾದಗಿರಿ ಕರ್ನಾಟಕಲೋಕಾಯುಕ್ತಪೊಲೀಸ್ ಅಧೀಕ್ಷಕರುನಿರ್ದೇಶನನೇತೃತ್ವದಲ್ಲಿ ಭ್ರಷ್ಟಾಚಾರವಿರುದ್ಧಜಾಗೃತಿಅರಿವು ಸಪ್ತಾಹಕಾರ್ಯಕ್ರಮವನ್ನುಉದ್ಘಾಟಿಸಿ ಹಾಗೂಜಾಗೃತಿಮೂಡಿಸಿ ಅವರು ಮಾತನಾಡಿದರು ಯಾವುದೇ ಸರ್ಕಾರಿ ಕಛೇರಿಗಳಲ್ಲಿ ಸರ್ಕಾರಿ ನೌಕರರು ಕೆಲಸ, ಸೇವೆಗಳನ್ನು ಮಾಡಿಕೊಡಲು ಲಂಚದಹಣಕ್ಕಾಗಿ ಒತ್ತಾಯಿಸಿದರೆ, ಅನಗತ್ಯ ವಿಳಂಬ ಮಾಡಿದರೆ, ಅಧಿಕಾರಿಗಳು ತಮ್ಮ ಹುದ್ದೆಯ ಅಧಿಕಾರ ದುರ್ಬಳಕೆ ಮಾಡಿಕೊಂಡು ಅವ್ಯವಹಾರದಲ್ಲಿ ಭಾಗಿಯಾಗಿದ್ದು, ಕಂಡುಬಂದಲ್ಲಿ ಯಾದಗಿರಿಕರ್ನಾಟಕಲೋಕಾಯುಕ್ತ ಪೊಲೀಸ್ಠಾಣೆಗೆಮತ್ತುಯಾದಗಿರಿ-585 202, ಹಳೆ ಬಸ್ ನಿಲ್ದಾಣ ಹತ್ತಿರ, ಕರ್ನಾಟಕ ಲೋಕಾಯುಕ್ತ ಕಛೇರಿ ಪೊಲೀಸ್ ಅಧೀಕ್ಷಕರುಕಛೇರಿದೂ. ಸಂ.9364062529, 08473, 253802, 253355, ಸಂಪರ್ಕಿಸಿ ಮಾಹಿತಿನೀಡುವಂತೆವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು, ಅಲ್ಲದೇ ತಮ್ಮ ಸುತ್ತಮುತ್ತಲಿನ ಜನರಿಗೂ ಸಹಈಬಗ್ಗೆತಿಳುವಳಿಕೆನೀಡುವಂತೆ ಮತ್ತು ಲೋಕಾಯುಕ್ತ ಸಂಸ್ಥೆಯ ಕಾರ್ಯಚಟುವಟಿಕೆಗಳಬಗ್ಗೆಮಾಹಿತಿ ನೀಡಬೇಕು ಎಂದರು.

ಈಸಂದರ್ಭದಲ್ಲಿಲೋಕಾಯುಕ್ತ ಇನ್ಸ್ಪೆಕ್ಟರ್ ಶ್ರೀ ಸಂಗಮೇಶ, ಯಾದಗಿರಿ ಜವಾಹರ ಬಿ.ಇ.ಎಡ್ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಇಕ್ಬಾಲ್ ಶೇಖ್, ಉಪನ್ಯಾಸಕರಾದಜಾಫರ್ .ಡಿ, ಉಪನ್ಯಾಸಕಿ ಶ್ರೀಮತಿಸಾಲಿಹ ನಿಖಾತ್, ಲೋಕಾಯುಕ್ತಸಿಬ್ಬಂದಿಗಳು, ಕಾಲೇಜುಸಿಬ್ಬಂದಿಲಕ್ಷ??ಣರಾವ್ ಬಿರಾದಾರ ಉಪಸ್ಥಿತರಿದ್ದರು.

# ಬಳ್ಳಾರಿ ಪತ್ರಕರ್ತನ ಕುಟುಂಬಕ್ಕೆ 2ಲಕ್ಷರೂ ಬಿಡುಗಡೆ ಮಾಡಿದ ಸಿಎಂ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು: ಬಳ್ಳಾರಿ ಪತ್ರಕರ್ತ ವೀರೇಶ್ ಜಿ.ಕೆ. ಕುಟುಂಬಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2ಲಕ್ಷ ರೂ ಪರಿಹಾರ ಬಿಡುಗಡೆ ಮಾಡಿದ್ದಾರೆ. ವಿಜಯ ಕರ್ನಾಟಕ ಪತ್ರಿಕೆ ಬಳ್ಳಾರಿ ಬ್ಯೂರೋದಲ್ಲಿ ಉಪ ಸಂಪಾದಕನಾಗಿದ್ದ ವೀರೇಶ್ ಜಿ.ಕೆ. (ವೀರೇಶ್ ಕಟ್ಟೆಮ್ಯಾಗಳ) ಅವರು ಹೃದಯಾಘಾತದಿಂದ ಮೃತಪಟ್ಟಿದ್ದರು. ಅವರ ಕುಟುಂಬ ಆರ್ಥಿಕವಾಗಿ ಸಂಕಷ್ಟದಲ್ಲಿಸಿಲುಕಿರುವ ಬಗ್ಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯುಜೆ) ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಪತ್ರ ಬರೆದುಸರ್ಕಾರದಗಮನಕ್ಕೆತಂದಿದ್ದರು. ಹಾಗಾಗಿ ಬಾಕಿ ಇದ್ದಕಡತವಿಲೇವಾರಿಗೆ ಸಿಎಂಸೂಚಿಸಿದ್ದರು. ಕೆಯುಡಬ್ಲ್ಯುಜೆಮನವಿಮೇರೆಗೆಪರಿಹಾರಮಂಜೂರು ಮಾಡಿದ ಸಿಎಂ ಸಿದ್ದರಾಮಯ್ಯ ಅವರಿಗೆ, ಈ ನಿಟ್ಟಿನಲ್ಲಿ ಸಹಕಾರ ನೀಡಿದ ಸಿಎಂ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯುಜೆ) ಧನ್ಯವಾದ ಸಲ್ಲಿಸಿದೆ.



ಯಾದಗಿರಿ :ನಗರದ ಲಕ್ಷ್ಮಿ ಬಡಾವಣೆಯ ಮಹಾಲಕ್ಷ್ಮೀ ದೇವಸ್ಥಾನದ 15 ನೇ ವರ್ಷದ ಜಾತ್ರಾ ಮಹೋತ್ಸವದಂಗವಾಗಿ ಶ್ರೀ ಹೇಮರೆಡ್ಡಿ ಮಲ್ಲಮ್ಮ ಅಭಿವೃದ್ಧಿ ಸಂಸ್ಥೆ ಪದಾಧಿಕಾರಿಗಳು ಮಂಗಳವಾರ ಕಾರ್ತಿಕ ಮಾಸದ ಸಹಸ್ರ ದೀಪೋತ್ಸವ ಕಾರ್ಯಕ್ರಮ ನಡೆಸಿಕೊಟ್ಟರು. ಸಂಸ್ಥೆಯ ಅಧ್ಯಕ್ಷೆ ಅನ್ನಪೂರ್ಣ ಸಿ.ಪಾಟೀಲ, ಉಪಾಧ್ಯಕ್ಷೆ ವೇದಾ ಬಸವಂತರೆಡ್ಡಿ ಮಲ್ಹಾರ, ಶ್ರೀದೇವಿ ಪಾಟೀಲ ಚಾಮನಹಳ್ಳಿ, ಶೃತಿ ಪಾಟೀಲ ಚಟ್ನಳ್ಳಿ,ಅರುಣಾ ಸಿದ್ಧರಾಜರೆಡ್ಡಿ, ಗಿರಿಜಾ ಪಾಟೀಲ ಕೌಳೂರ,ಶಶಿಕಲಾ ಪಾಟೀಲ ಕ್ಯಾತ್ನಾಳ,ಡಾ.ಲಕ್ಷ್ಮೀದೇವಿ ಪಾಟೀಲ,ಭ್ರಮಾ ಗೋಸಾಮಿ ನಾಯ್ಕಲ್,ಗಿರಿಜಾ ಪಾಟೀಲ ಕಣೇಕಲ್,ಡಾ.ಪ್ರೀತಿ ಪಾಟೀಲ,ಹೇಮಾ ಪಾಟೀಲ ಯಕ್ತಿಂತಿ ಸೇರಿದಂತೆ ಇತರರಿದ್ದರು.

## ಬಡರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲು ಶಾಸಕ ಕಂದಕೂರ ಸಲಹೆ.

# ಅರಕೇರಾ (ಬಿ)ಗ್ರಾಮದಲ್ಲಿ ಶಸ್ತ್ರ ಚಿಕಿತ್ಸಾ ಕೋಣೆ ಉದ್ಘಾಟನೆ



ಯಾದಗಿರಿ: ಆಸ್ಪತ್ರೆಗೆ ಬರುವ ಬಡರೋಗಿಗಳಿಗೆಉತ್ತಮಚಿಕಿತ್ಸೆ ನೀಡುವಮೂಲಕತಮ್ಮ ಸೇವೆಯನ್ನು ಸಾರ್ಥಕಮಾಡಿಕೊಳ್ಳಬೇಕೆಂದುಶಾಸಕ ಶರಣಗೌಡ ಕಂದಕೂರ ವೈದ್ಯರಿಗೆ ಕಿವಿ ಮಾತು ಹೇಳಿದರು.

ತಾಲೂಕಿನಅರಕೇರಾ(ಬಿ)ಗ್ರಾಮದ ಸಮುದಾಯಆರೋಗ್ಯ ಕೇಂದ್ರದಲ್ಲಿ ಸೋಮವಾರಶಸ್ತ್ರ ಚಿಕಿತ್ಸಾಲಯದ ಕೋಣೆಯನ್ನುಉದ್ಘಾಟಿಸಿದಶಾಸಕರು, ಸರ್ಕಾರಿದವಾಖಾನಿಗಳಿಗೆಬರುವವರು ಬಡವರೇ ಆಗಿರುತ್ತಾರೆ.

ಅವರಿಗೋಸ್ಕರವೇಸರ್ಕಾರಗಳು ಇಂತಹವ್ಯವಸ್ಥೆಮಾಡಿರುತ್ತದೆ.ಕಾರಣ, ನಿಗದಿತಅವಧಿಯಲ್ಲಿರೋಗಕ್ಕೆತಕ್ಕ ಚಿಕಿತ್ಸೆ ನೀಡುವಮೂಲಕತಾವುಗಳು ಎರಡನೇ ದೇವರಾಗಬೇಕೆಂದು ಮಾರ್ಮಿಕವಾಗಿ ಹೇಳಿದರು.

ಇಲ್ಲಿ ಇನ್ನೂ ಏನಾದರೂ ಸೌಲಭ್ಯಗಳುಬೇಕಾದರೇತಮ್ಮ ಗಮನಕ್ಕೆ ತಂದರೇ ಅವುಗಳನ್ನು ಒದಗಿಸುವ ನಿಟ್ಟಿನಲ್ಲಿ ಪ್ರಯತ್ನ ಮಾಡಲಾಗುವುದೆಂದರು.

ಪರಮಾನಂದೇಶ್ವರ ಶ್ರೀಗಳು ಮಾತನಾಡಿದರು. ಡಿಎಚ್ ಒ ಡಾ.ಮಹೇಶಬಿರಾದಾರ,ಡಾ.ಎಂ. ಎಸ್.ಪಾಟೀಲ್, ಡಾ.ಜ್ಯೋತಿ ಕಟ್ಟಿಮನಿ, ಡಾ.ಹಣಮಂತರೆಡ್ಡಿ, ತಾಲೂಕು ಆರೋಗ್ಯಾಧಿಕಾರಿ ಡಾ. ನೀಲಾಂಬಿಕಾ ಎಂ.ಜಾಪಟ್ಟಿ, ಸಿಬ್ಬಂದಿ,ಆಶಾಕಾರ್ಯಕರ್ತೆಯರು ಇದ್ದರು.

# ಹುಮನಾಬಾದ್ ನಗರದಲ್ಲಿ ಸರ್ಕಾರಿ ಜಾಗಗಳ ಕಬ್ಜೆ – ಸರ್ಕಾರ ವಾಪಸ್ ಪಡೆಯಬೇಕು ಎಂದು ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್:

ನಗರದ ವಿವಿಧ ಭಾಗಗಳಲ್ಲಿ ಸಾರ್ವಜನಿಕಹಿತಕ್ಕಾಗಿಮೀಸಲಾದ ಸರ್ಕಾರಿ ಜಾಗಗಳು ಖಾಸಗಿ ವ್ಯಕ್ತಿಗಳಿಂದಅನಧಿಕೃತವಾಗಿಕಬ್ಜೆ ಮಾಡಲ್ಪಟ್ಟಿರುವಕುರಿತುಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಾರ್ವಜನಿಕಉಪಯೋಗದ ಗಾರ್ಡನ್,ರಸ್ತೆ,ಪಾರ್ಕ್ ಹಾಗೂ ಸರ್ಕಾರದ ಸಂಸ್ಥೆಗಳಿಗಾಗಿ ನಿಗದಿಪಡಿಸಲಾದಜಾಗಗಳನ್ನು ಅಕ್ರಮವಾಗಿಕಬ್ಜೆಮಾಡಿಕೊಂಡು ಕಟ್ಟಡ ನಿರ್ಮಾಣ ಕಾರ್ಯ ನಡೆಯುತ್ತಿರುವುದುಸ್ಥಳೀಯರ ಆಕ್ರೋಶಕ್ಕೆ ಕಾರಣವಾಗಿದ.

ನಗರದಶಿಸ್ತಿನಅಭಿವೃದ್ಧಿಗಾಗಿ ಪುರಸಭೆ,ತಹಸೀಲ್ದಾರ್ ಹಾಗೂ ತಾಲೂಕುಆಡಳಿತಇಲಾಖೆಗಳು ತಕ್ಷಣಕ್ರಮಕೈಗೊಳ್ಳಬೇಕೆಂದು ಜನರುಆಗ್ರಹವ್ಯಕ್ತಪಡಿಸಿದ್ದಾರೆ. ಸಾರ್ವಜನಿಕಹಿತಕ್ಕಾಗಿಸರ್ಕಾರವು ಕಾನೂನು ಕ್ರಮ ಕೈಗೊಂಡು ಕಬ್ಜೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಲಾಗಿದೆ.

# ಪ್ರತಿಯೊಬ್ಬ ವಿದ್ಯಾರ್ಥಿ ಪಠ್ಯದ ಜತೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು:ಬಿ.ಫೌಜಿಯಾ ತರನ್ನುಮ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.28:ನಮ್ಮ ಭಾರತ ದೇಶವುವಿವಿಧತೆಯಲ್ಲಿಏಕತೆಯಿಂದ ಕೂಡಿದ್ದುಇಲ್ಲಿಕಲೆ,ಸಾಹಿತ್ಯ.ಆಚಾರ ವಿಚಾರಗಳುಸಂಪ್ರದಾಯಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಹಾಗೂ ವಿದ್ಯಾರ್ಥಿಗಳು ಪಠ್ಯದ ಕಲಿಕೆಗೆ ಮಾತ್ರಸೀಮಿತವಾಗದೆಪ್ರತಿಯೊಂದು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕೆಂದುಜಿಲ್ಲಾಧಿಕಾರಿ ಬಿ.ಫೌಜಿಯಾತರನ್ನುಮ್ಅವರು ಹೇಳಿದರು.

ಮಂಗಳವಾರದಂದುಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣಮತ್ತುಕ್ರೀಡಾಇಲಾಖೆ ಮೇರಾಯುವಭಾರತ್,ಎನ್.ಎಸ. ಎಸ್. ಘಟಕ ಹಾಗೂ ಸರಕಾರಿ ಮಹಾವಿದ್ಯಾಲಯ(ಸ್ವಾಯತ್) ಜಿಲ್ಲಾವಿಜಾನಕೇಂದ್ರ ಮತ್ತು ಜಿಲ್ಲಾ ಯುವಕಯುವತಿಯರಸಂಘಗಳು ಕಲಬುರಗಿಇವರಸಹಯೋಗದಲ್ಲಿ ಜಿಲ್ಲಾಮಟ್ಟದಯುವಜನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳುಹೆಚ್ಚಿನಸಮಯವನ್ನು ಮೊಬೈಲ್‌ನಲ್ಲಿ ಕಳೆಯದೆ ನಮ್ಮ ದೇಶದ ಸಂಸ್ಕೃತಿ ಕಲೆ ಆಚಾರ ಸಂಪ್ರದಾಯಗಳನ್ನು ಉಳಿಸಿ ಬೆಳೆಸಿ. ತಾವುಗಳು ಕಲಿತ ವಿದ್ಯಾ ಸಂಸ್ಥೆಗಳಗುರುಗಳು ನಿಮ್ಮ ತಂದೆ ತಾಯಿಗಳು ಹೆಮ್ಮೆ ಪಡುವಂತೆ ಮಹಾನ್‌ಸಾಧನೆಯನ್ನುಮಾಡಬೇಕು ಎಂದು ಹೇಳಿದರು.

ಸರಕಾರಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಸವಿತಾ ತಿವಾರಿಯವರು ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿಗಳು ಮಾನಸಿಕವಾಗಿಮತ್ತು ದೈಹಿಕವಾಗಿ ಸದೃಢರಾಗಲು ಇಂತಹ ಸಾಂಸ್ಕೃತಿಕಚಟುವಟಿಕೆಗಳಮೂಲಕ ಮನಸ್ಸು ಗಳನ್ನು ಜೋಡಿಸುವ ಕೆಲಸವಾಗುತ್ತಿದೆ.ರಾಜ್ಯ ಮತ್ತುರಾಷ್ಟ್ರ ಪ್ರಶಸ್ತಿ ವಿಜೇತರನ್ನು ಕಾರ್ಯಕ್ರಮಕ್ಕೆ ಸನ್ಮಾನಿಸಿದಮುಖ್ಯ ಉದ್ದೇಶಅವರು ಮಾಡಿದಸಾಧನೆನಮ್ಮಲ್ಲಿವಿದ್ಯಾರ್ಥಿಗಳಿಗೆ ಸ್ಫೂರ್ತಿಯಾಗಿನಮ್ಮ ವಿದ್ಯಾರ್ಥಿಗಳು ಪ್ರತಿಯೊಂದುರಂಗದಲ್ಲಿಯುಇನ್ನು ಹೆಚ್ಚಿನಸಾಧನೆಯನ್ನುಮಾಡಬೇಕು. ಸ್ಪರ್ಧೆಯಲ್ಲಿಭಾಗವಹಿಸಿದಪ್ರತಿಯೊಬ್ಬ ವಿದ್ಯಾರ್ಥಿಗಳು ಸೋಲು ಮತ್ತು ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಬೆಳಸಿಕೊಳ್ಳಬೇಕುಸೋಲುಗೆಲುವಿನ ಸೋಪಾನ ಎಂಬ ಮಾತಿನಂತೆ ಸಿಕ್ಕ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಂಡು ಹೆಚ್ಚಿನ ಸಾಧನೆ ಮಾಡುವಂತ ವ್ಯಕ್ತಿಗಳಾಗಬೇಕು ಎಂದುವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ಯುವ ಸಬಲೀಕರಣ ಮತ್ತುಕ್ರೀಡಾಇಲಾಖೆಯಸಹಾಯಕ ನಿರ್ದೇಶಕರಾದಸೋಮಶೇಖರ್‌ವೈ ಅತಿಥಿಗಳನ್ನುಸ್ವಾಗತಿಪ್ರಸ್ತಾವಿಕವಾಗಿ ಮಾತನಾಡಿದರು.

ರಾಜ್ಯ ಪ್ರಶಸ್ತಿ ವಿಜೇತರಾದಸುರೇಶ ಬಡಿಗೇರ್, ಬಸವರಾಜತೋಟದ, ವೀರಭದ್ರಪ್ಪ ಸಿಂಪಿ, ಪ್ರಭುಲಿಂಗ, ಸುಭಾ‌ಷ್ ವಗ್ಗನ್, (ರಾಷ್ಟ್ರಪ್ರಶಸ್ತಿ ವಿಜೇತ್) ಪಿ.ಆರ್ ಪಾಂಡು ಅವರಿಗೆಕಾರ್ಯಕ್ರಮದಲ್ಲಿವಿಶೇಷ ಸನ್ಮಾನವನ್ನು ಮಾಡಲಾಯಿತು.

ಜನಪದಸಮೂಹನೃತ್ಯ ಪ್ರಥಮ ಸ್ಥಾನಪಡೆದಲಕ್ಷ್ಮೀಮತ್ತುತಂಡಕ್ಕೆ 10,000 ಬಹುಮಾನಮತ್ತುಪ್ರಶಸ್ತಿ ಪತ್ರ ದ್ವಿತೀಯ ಸ್ಥಾನ ಸಂಜು ಮತ್ತುತಂಡಕ್ಕೆ7,000 ಬಹುಮಾನ ಮತ್ತು ಪ್ರಶಸ್ತಿ ಪತ್ರತೃತೀಯಸ್ಥಾನ ಗಾಯಿತ್ರಿ ಮತ್ತುತಂಡಕ್ಕೆ 5000 ಬಹುಮಾನಮತ್ತುಪ್ರಶಸ್ತಿಪತ್ರಗಳನ್ನು ನೀಡಲಾಯಿತು. ಜನಪದ ಗೀತೆಗೆ ಪ್ರಥಮ ಸ್ಥಾನ ಷಡಾಕ್ಷರಿ ತಂಡಕ್ಕೆ ಪ್ರಥಮ 10,000 ಬಹುಮಾನ ಮತ್ತು ಪ್ರಶಸ್ತಿ ಪತ್ರ, ದ್ವಿತೀಯ ಸ್ಥಾನ ಪಡೆದ ಶ್ವೇತ ತಂಡಕ್ಕೆ 7000 ಬಹುಮಾನ ಮತ್ತು ಪ್ರಶಸ್ತಿ ಪತ್ರ, ತೃತೀಯಸ್ಥಾನಪಡೆದಪ್ರತೀಕ್ಷಮತ್ತು ತಂಡಕ್ಕೆ 5000 ಬಹುಮಾನ ಮತ್ತು ಪ್ರಶಸ್ತಿ ಪತ್ರ ವಿತರಿಸಲಾಯತು.

ವಿದ್ಯಾರ್ಥಿ ಕಲ್ಯಾಣ ಅಧಿಕಾರಿ ಡಾ. ಶ್ರೀಮಂತ ಹೊಳ್ಕರ್, ಯುಜಿ ಕಲಾವಿಭಾಗದ ಡೀನ್ ಡಾ.ವಿಜಯಕುಮಾರ್‌ಸಾಲಿಮಾನಿ, ಯುಜಿ ವಿಜಾನ ವಿಭಾಗದ ಡಾ. ದವಲಪ್ಪ, ಮಹಾವಿದ್ಯಾಲಯದ ಎಲ್ಲಾ ವಿಭಾಗದ ಡೀನರುಗಳು ಮತ್ತು ಪ್ರಾಧ್ಯಾಪಕರುಗಳು, ವಿದ್ಯಾರ್ಥಿಗಳುಉಪಸ್ಥಿತರಿದ್ದರು.

ಕಲಬುರಗಿಯಸರ್ಕಾರಿಮಹಾವಿದ್ಯಾಲಯ (ಸ್ವಾಯತ್ತ)ಸಾಂಸ್ಕೃತಿಕಸಂಚಾಲಕರು ಡಾ.ಬಲಭೀಮಸಾಂಗ್ಲಿಕಾರ್ಯಕ್ರಮ ನಿರೂಪಿಸಿದರುಸಿಬ್ಬಂದಿಕಾರ್ಯದರ್ಶಿ ಡಾ.ರವೀಂದ್ರಕುಮಾರ ಭಂಡಾರಿ ಕಾರ್ಯಕ್ರಮ ವಂದಿಸಿದರು.

# ಒಳಮೀಸಲಾತಿ ತಾರತಮ್ಯ ಸರಿಪಡಿಸುವ ವರಗೆ ಹೋರಾಟ ನಿಲ್ಲುವುದಿಲ್ಲ: ಶಾಸಕ ಪ್ರಭು ಚವ್ಹಾಣ




ಔರಾಧ(ಬಿ):ಅ.28:ಕಾಂಗ್ರೆಸ್ ಸರ್ಕಾರಒಳಮೀಸಲಾತಿಹಂಚಿಕೆಯಲ್ಲಿ ಬಂಜಾರ,ಭೋವಿ,ಕೊರಚ,ಕೊರಮ ಸಮುದಾಯಗಳಿಗೆ ಅನ್ಯಾಯ ಮಾಡಿದೆ. ಇದು ಸರಿಪಡಿಸುವ ವರೆಗೆಹೋರಾಟನಿಲ್ಲುವುದಿಲ್ಲವೆಂದು ಮಾಜಿಸಚಿವರುಹಾಗೂಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು. ಔರಾದ(ಬಿ) ಪಟ್ಟಣದಗುರುಪಾದಪ್ಪನಾಗಮಾರಪಳ್ಳಿ ಕಲ್ಯಾಣಮಂಟಪದಲ್ಲಿಅ.27ರಂದು ನಡೆದಬಂಜಾರಾಸಮಾವೇಶಹಾಗೂ ಒಳಮೀಸಲಾತಿ ಕುರಿತ ಚಿಂತನ-ಮಂಥನಸಭೆಯನ್ನು ಉದ್ಘಾಟಿಸಿ ಅವರುಮಾತನಾಡಿದರು. ಕಾಂಗ್ರೆಸ್ ಸರ್ಕಾರ ತೀವ್ರ ಹಿಂದುಳಿದಿರುವ ಬಂಜಾರಾ,ಭೋವಿ,ಕೊರಮ,ಕೊರಚ ಸಮಾಜಗಳನ್ನುಕಡೆಗಣಿಸುತ್ತಾಬಂದಿದೆ. ಹಿಂದೊಮ್ಮೆ ಈಸಮಾಜಗಳನ್ನು ಪರಿಶಿಷ್ಟಜಾತಿಪಟ್ಟಿಯಿಂದಹೊರ ಹಾಕುವಪ್ರಯತ್ನ ಮಾಡಿತ್ತು. ಆದರೆ ತೀವ್ರ ವಿರೋಧವ್ಯಕ್ತವಾಗಿದ್ದರಿಂದ ಅದು ಸಾಧ್ಯವಾಗಲಿಲ್ಲ.

ಬಸವರಾಜ ಬೊಮ್ಮಾಯಿ ಅವರ ನೇತೃತ್ವದ ಸರ್ಕಾರ ಈ ನಾಲ್ಕೂ ಸಮುದಾಯಗಳಿಗೆ ಶೇ 4.5ರಷ್ಟು ಮೀಸಲಾತಿ ಕೊಟ್ಟಿತ್ತು. ಈಗಿನ ಕಾಂಗ್ರೆಸ್ ಸರ್ಕಾರ ಈ ಮೀಸಲಾತಿ ಪ್ರಮಾಣವನ್ನು ಹೆಚಿಚ್ಚುಸುವ ನಿರೀಕ್ಷೆಯಿತ್ತು.

ಆದರೆನಾಲ್ಕುಸಮುದಾಯಗಳೊಂದಿಗೆ ಇನ್ನೂ 59 ಸಮುದಾಯಗಳನ್ನು ಸೇರಿಸಿಬರೀಶೇ5ರಷ್ಟುಮೀಸಲಾತಿ ಕೊಟ್ಟುಘೋರಅನ್ಯಾಯಮಾಡಿದೆ ಎಂದುಆಕ್ರೋಶಹೊರಹಾಕಿದರು.

ನ್ಯಾಯಮೂರ್ತಿನಾಗಮೋಹನದಾಸ್ ವರದಿಯಬಗ್ಗೆಆರಂಭದಿಂದಲೂ ಅಪಸ್ವರಗಳು ಕೇಳಿಸಿದ್ದವು. ಅವೈಜ್ಞಾನಿಕಮತ್ತು ದೋಷಪೂರಿತ ವರದಿಯನ್ನುಯಾವುದೇಕಾರಣಕ್ಕೂ ಅಂಗೀಕರಿಸಬಾರದೆಂದು ಎಷ್ಟೇ ಹೋರಾಟಮಾಡಿದ್ದರೂಜನತೆಯ ಕೂಗನ್ನುಕಿವಿಗೆಹಾಕಿಕೊಳ್ಳದೆಮನಸ್ಸಿಗೆ ತೋಚಿದಂತೆಒಳಮೀಸಲಾತಿಯನ್ನು ವರ್ಗೀಕರಣ ಮಾಡಿದ್ದಾರೆ.

ಈ ಬಗ್ಗೆ ಸಮಾಜ ಬಾಂಧವರು ಜಾಗೃತರಾಗಬೇಕುಎಂದುಹೇಳಿದರು.

ರಾಜ್ಯದಲ್ಲಿಬಂಜಾರಸಮುದಾಯವು ಇನ್ನೂ ಸಾಕಷ್ಟುಹಿಂದುಳಿದಿದೆ.ವಲಸೆ, ಅನಕ್ಷರತೆ,ಬಡತನದಂತಹಹಲವಾರು ಸಮಸ್ಯೆಗಳನ್ನುಎದುರಿಸುತ್ತಿದೆ.ನಾನು ಸಮಾಜದ ಅಭಿವೃದ್ಧಿಗೆ ನಿರಂತರ ಶ್ರಮಿಸುತ್ತಿದ್ದೇನೆ.

ಸಮಾಜಬಾಂಧವರುಯಾವುದೇ ರೀತಿಯದುಶ್ಚಟಗಳಿಗೆಬಲಿಯಾಗದೇ ಗೌರವಯುತವಾಗಿಬದುಕಬೇಕು. ಯಾವುದೇದೂರುದುಮ್ಮಾನಗಳಿಗೆ ಆಸ್ಪದಕೊಡಬಾರದೆಂದುಹೇಳಿದರು. ಔರಾದ(ಬಿ) ಕ್ಷೇತ್ರದಲ್ಲಿನ ಎಲ್ಲ ಗ್ರಾಮಗಳಲ್ಲಿ ರಸ್ತೆ, ಕುಡಿಯುವ ನೀರು, ಶಾಲೆ, ಅಂಗನವಾಡಿ ಕೇಂದ್ರ ಸೇರಿದಂತೆ ಎಲ್ಲ ಮೂಲ ಸೌಕರ್ಯಗಳನ್ನು ಒದಗಿಸುವಕೆಲಸ ಮಾಡುತ್ತಿದ್ದೇನೆ.ತಾಂಡಾಗಳಲ್ಲಿಯೂ ಅಭಿವೃದ್ಧಿ ಕೆಲಸಗಳಾಗಿವೆ.

ಬಂಜಾರಾ ಸಮಾಜದ ಮಕ್ಕಳು ಉತ್ತಮ ವಿದ್ಯಾಭ್ಯಾಸ ಮಾಡಿ ಐಎಎಸ್,ಐಪಿಎಸ್,ಎಂಜಿನಿಯರ್, ವೈದ್ಯಕೀಯವೃತ್ತಿಯಂತಹಉನ್ನತ ಹುದ್ದೆಗಳನ್ನು ಪಡೆಯಬೇಕೆಂಬ ಕನಸಿದೆ. ಬಡವರು, ಅನಾಥ ಮಕ್ಕಳುಪ್ರತಿಭಾವಂತರಿದ್ದರೂಓದಲು ಸಾಧ್ಯವಾಗದತಂಹಮಕ್ಕಳಿದ್ದರೆನನ್ನ ಗಮನಕ್ಕೆತನ್ನಿ ಅಂಥವರಸಹಕಾರಕ್ಕೆ ನಾನು ಸದಾ ಸಿದ್ಧನಿದ್ದೇನೆ ಎಂದು ಹೇಳಿದರು.

ಸಮಾಜದಮುಖಂಡರಾದಮಾರುತಿ ಚವ್ಹಾಣ,ಪ್ರತೀಕಚವ್ಹಾಣ,ಪ್ರದೀಪ ಪವಾರ,ಸಚಿನರಾಠೋಡ,ಸುಜಿತ ರಾಠೋಡ, ಧನಾಜಿ ರಾಠೋಡ, ಸೂರ್ಯಕಾಂತಪವಾರ,ಪ್ರಹ್ಲಾದ ರಾಠೋಡ,ಸೋನಾಜಿರಾಠೋಡ, ಬಾಬುರಾಠೋಡಕೊರೆಕಲ್,ವಸಂತ ರಾಠೋಡಮೆಡಪಳ್ಳಿ,ರಮೇಶಜಾಧವ ಮಾಳೆಗಾಂವ, ಕಾಳಿದಾಸ ಆಡೆ, ಸೋನು ರಾಠೋಡ, ಬಸವರಾಜ ನಾಯಕ್, ಬಾಬು ರಾಠೋಡ, ಶಿವಾಜಿ ರಾಠೋಡ, ಸಂಜೀವ ಚವ್ಹಾಣ, ಸಂಜೀವ ರಾಠೋಡ, ಬಬನ್ ಚವ್ಹಾಣ, ರಾಮದೇವ ಕಾರಬಾರಿ, ಲಕ್ಷ್ಮಣ ಜಾಧವ, ಜಿಲ್ಲಾ ಪಂಚಾಯತ, ತಾಲ್ಲೂಕು ಪಂಚಾಯತ,ಗ್ರಾಮಪಂಚಾಯತ್ ಗಳಹಾಲಿಮತ್ತುಮಾಜಿಅಧ್ಯಕ್ಷರು, ಸದಸ್ಯರು,ಬಂಜಾರಾಕ್ರಾಂತಿದಳದ ಅಧ್ಯಕ್ಷರು,ಎಲ್ಲಪದಾಧಿಕಾರಿಗಳು ಉಪಸ್ಥಿತರಿದ್ದರು.

# ಯಾವ ಸ್ಥಾನಕ್ಕೆ ನಾಮನಿರ್ದೇಶನ/ನೇರ ನೇಮಕಾತಿ ನಡೆದಿರುವುದಿಲ್ಲ ಮುಂದಿನ ದಿನಗಳಲ್ಲಿ ಮತ್ತೆ ನಿಯಮಾನುಸಾರ ಚುನಾವಣೆಗೆ ಅಧಿಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಅ.28:ಕರ್ನಾಟಕಕಾರ್ಯನಿರತ ಪತ್ರಕರ್ತರ ಸಂಘ ಬೀದರ್ ಜಿಲ್ಲಾ ಘಟಕದ2025-28ನೇಅವಧಿಯ ಕಾರ್ಯಕಾರಿಸಮಿತಿಚುನಾವಣೆಗೆ ನಾಮಪತ್ರ ಸಲ್ಲಿಕೆಯಕಡೆದಿನವಾದ 27/10/2025ಕ್ಕೆಯಾವುದೇಸ್ಥಾನಕ್ಕೆ ಯಾವುದೇ ನಾಮಪತ್ರಗಳು ಸಲ್ಲಿಕೆಯಾಗಿರುವುದಿಲ್ಲಸಂಘದಅರ್ಹ ಸದಸ್ಯರುಚುನಾವಣಾಪ್ರಕ್ರಿಯೆಯಲ್ಲಿ ಪಾಲ್ಗೊಳ್ಳದೆಇರುವುದರಿಂದಜಿಲ್ಲಾ ಘಟಕದ ಆಯ್ಕೆ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿಮುಂದೂಡಲಾಗಿದೆ ಎಂದುಶಶಿಕಾಂತಎಸ್.ಶೆಂಬೆಳ್ಳಿ,ಜಿಲ್ಲಾ ಚುನಾವಣಾಧಿಕಾರಿಕೆಯುಡಬ್ಲ್ಯುಜೆ, ಬೀದರ್ ತಿಳಿಸಿದ್ದಾರೆ.

ಪ್ರತಿಕಾಗೋಷ್ಠಿಯಲ್ಲಿಮಾತನಾಡಿದ ಅವರು,ಕರ್ನಾಟಕ ಕಾರ್ಯನಿರತ ಪತ್ರಕರ್ತರಸಂಘಬೀದರ್‌ಜಿಲ್ಲಾಘಟಕಕ್ಕೆ ಚುನಾವಣಾಪ್ರಕ್ರಿಯೆಹೊರತಾದ ಯಾವುದೇ ವ್ಯವಸ್ಥೆಯಡಿ ಅಧ್ಯಕ್ಷ ಸ್ಥಾನವನ್ನು ಒಳಗೊಂಡಂತೆ ಇತರೆ ಯಾವುದೇಪದಾಧಿಕಾರಿಗಳಸ್ಥಾನಕ್ಕೆ ಯಾರನ್ನೂನಾಮನಿರ್ದೇಶನ/ನೇರ ನೇಮಕಾತಿನಡೆದಿರುವುದಿಲ್ಲ.ಮುಕ್ತ ಮತ್ತುನ್ಯಾಯಸಮ್ಮತಚುನಾವಣೆಗಳು ಪ್ರಜಾಪ್ರಭುತ್ವದ ಜೀವಾಳ. ಚುನಾವಣೆಗಳನ್ನು ಪ್ರಜಾಪ್ರಭುತ್ವದ ಹಬ್ಬಎಂದೇವ್ಯಾಖ್ಯಾನಿಸಲಾಗುತ್ತದೆ. ಇಂತಹಪ್ರಜಾಪ್ರಭುತ್ವವನ್ನು ಇನ್ನಷ್ಟು ಬಲಗೊಳಿಸುವಲ್ಲಿ ಕಾರ್ಯನಿರತ ಪತ್ರಕರ್ತರ ಸಹಭಾಗಿತ್ವ ಮತ್ತು ಬೆಂಬಲ ಅಗತ್ಯ. ಚುನಾವಣಾ ನಿಯಮಗಳಿಗನುಗುಣವಾಗಿ ಚುನಾವಣೆನಡೆಸಲುಚುನಾವಣಾ ಸಮಿತಿ ಬದ್ಧವಾಗಿದೆ. ಮುಂದಿನ ದಿನಗಳಲ್ಲಿಮತ್ತೆನಿಯಮಾನುಸಾರ ಚುನಾವಣೆಅಧಿಸೂಚನೆಹೊರಡಿಸುವ ಮೂಲಕಚುನಾಯಿತಕಾರ್ಯಕಾರಿ ಸಮಿತಿಯನ್ನು ನೆಲೆಗೊಳಿಸುವ ಪ್ರಕ್ರಿಯೆ ನಡೆಯಲಿದೆ ಎಂದು ಅವರುತಿಳಿಸಿದರು. ರಾಜ್ಯ ಘಟಕದ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಮುಂದುವರೆದಿದೆ ಎಂದು ಅವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕರೂನೋಡಲ್‌ಅಧಿಕಾರಿ ಮಂಜುನಾಥಸುಳ್ಳೋಳಿ,ಕಾರ್ಮಿಕ ಇಲಾಖೆಯ ಅಧಿಕಾರಿ, ನೋಡಲ್ ಅಧಿಕಾರಿ ಮಹೇಶ ಕುಲ್ಲೋಳಿ, ಸಹಾಯಕ ಚುನಾವಣಾಧಿಕಾರಿ/ ಸಿಬ್ಬಂದಿಸೋಮನಾಥಬಿರಾದಾರ, ಬಾಲಾಜಿಕುಂಬಾರ,ಚಿತ್ರಸೇನ್ ವ್ಹಿ. ಫುಲೇ, ಲೋಕೇಶ ವಿ. ಬಿರಾದಾರ ಹಾಜರಿದ್ದರು.

# ಪ್ರಜಾ ಸೌಧ ಶಂಕುಸ್ಥಾಪನೆ ನೆರವೇರಿಸಿದ ಸಚಿವ ಈಶ್ವರ ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.28:ತಾಲೂಕಿನಲ್ಲಿ ನಿರ್ಮಾಣವಾಗುತ್ತಿರುವಪ್ರಜಾಸೌಧಗೆ ಮಂಗಳವಾರಪರಿಸರಜೀವಶಾಸ್ತ್ರ, ಅರಣ್ಯ ಹಾಗೂಜಿಲ್ಲಾಉಸ್ತುವಾರಿ ಸಚಿವರಾದ ಮಾನ್ಯ ಶ್ರೀ ಈಶ್ವರ ಖಂಡ್ರೆ ಅವರಿಂದ ಶಂಕುಸ್ಥಾಪನೆ ಮಾಡಲಾಯಿತು. ಬೀದರಜಿಲ್ಲೆಯಲ್ಲಿ ಹೊಸತಾಲೂಕುಗಳುಸ್ಥಾಪನೆಯಾದ ಹಿನ್ನೆಲೆಯಲ್ಲಿ ಜನರಿಗೆ ಸುಗಮ ಮತ್ತು ಪರಿಣಾಮಕಾರಿ ಆಡಳಿತ ಒದಗಿಸಲು ನೂತನ ಆಡಳಿತ ಸೌಧಗಳ ನಿರ್ಮಾಣಕ್ಕೆ ಸರ್ಕಾರದ ವತಿಯಿಂದಕ್ರಮಕೈಗೊಳ್ಳಲಾಗಿದೆ.ಈ ಹಿನ್ನೆಲೆಯಲ್ಲಿ ಇಂದು ಸುಮಾರು ?8.60ಕೋಟಿರೂ.ಅನುದಾನದಡಿ ನಿರ್ಮಾಣವಾಗಲಿರುವಕಮಲನಗರ ತಾಲೂಕುಪ್ರಜಾಸೌಧ(ಆಡಳಿತಸೌಧ) ಕಾಮಗಾರಿಯಶಂಕುಸ್ಥಾಪನೆಯನ್ನು ಜಿಲ್ಲಾಉಸ್ತುವಾರಿಸಚಿವರುಹಾಗೂ ಅರಣ್ಯ, ಪರಿಸರಸಚಿವರಾದ ಶ್ರೀ ಈಶ್ವರಖಂಡ್ರೆಅವರುನೆರವೇರಿಸಿದರು.

ಈ ಸಂದರ್ಭ ಮಾತನಾಡಿದ ಸಚಿವರು, "ಬೀದರ ಜಿಲ್ಲೆಯ ಕಮಲನಗರಹುಲಸೂರ್ ಹಾಗೂ ಚಿಟ್ಟಗುಪ್ಪ ತಾಲೂಕುಗಳಲ್ಲಿ ಆಡಳಿತ ಭವನಗಳ ಅಗತ್ಯವನ್ನು ಮನಗಂಡು, ಈ ಕುರಿತು ನಾನು ಸಚಿವ ಸಂಪುಟದಲ್ಲಿ ವಿಷಯವನ್ನು ಪ್ರಸ್ತಾಪಿಸಿ ಕಂದಾಯ ಸಚಿವರೊಂದಿಗೆ ಚರ್ಚಿಸಿ ಈ ಮೂರು ಹೊಸ ತಾಲೂಕುಗಳ ಆಡಳಿತ ಭವನ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆ ಮಾಡಿಸಿದ್ದೇನೆ ಎಂದರು.



"ಕಮಲನಗರ ತಾಲೂಕು ಪ್ರಜಾ ಸೌಧ ಕಾಮಗಾರಿಯ ಶಂಕುಸ್ಥಾಪನೆ ನೆರವೇರಿಸಿದ್ದು, ಒಂದು ವರ್ಷದೊಳಗೆ ಕಾಮಗಾರಿ ಪೂರ್ಣಗೊಳಿಸಿ ಜನಸೇವೆಗೆ ಸಮರ್ಪಿಸುವ ಉದ್ದೇಶವಿದೆ."

**ಶ್ರೀ ಈಶ್ವರ ಖಂಡ್ರೆ,**

**ಪರಿಸರ ಜೀವಶಾಸ್ತ್ರ, ಅರಣ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು.**

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)